ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 22, ಸಂಚಿಕೆ: 12, ಪುಟಗಳು: 8, ಸೋಮವಾರ, 21 ಅಕ್ಟೋಬರ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3



ವೇಣು ಸಾರಥ್ಯದಲ್ಲಿ...




### ಸುಭಾಷಿತ

ತಾಳ್ಮೆ ದುರ್ಬಲತೆಯಲ್ಲ, ಮನುಷ್ಯನನ್ನು ದೀರ್ಘಕಾಲ ಸ್ಥಿರವಾಗಿ ನಿಲ್ಲಿಸುವ ಪ್ರಬಲವಾದ ಶಕ್ತಿ.

### ಪಂಚಾಂಗ

(ಸೋಮವಾರ 21, ಅಕ್ಟೋಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು,
- ಆಶ್ವಯುಜ ಮಾಸ, ಕೃಷ್ಣ ಪಕ್ಷ
- ಸೋಮವಾರ, ತಿಥಿ: ಪಂಚಮಿ
- ನಕ್ಷತ್ರ: ರೋಹಿಣಿ
- ರಾಹುಕಾಲ: 7:43 ರಿಂದ 9:11
- ಗುಳಿಕಕಾಲ: 1:36 ರಿಂದ 3:05
- ಯಮಗಂಡಕಾಲ: 10:40 ರಿಂದ 12:08

## ಸಿದ್ದರಾಮಯ್ಯ ಪತ್ನಿ ವಿರುದ್ಧ ಮತ್ತೊಂದು ಭೂ ಅಕ್ರಮ ಆರೋಪ

# ರಾಜ್ಯಪಾಲರಿಗೆ ದೂರು ನೀಡಲು ಆರ್‌ಟಿಐ ಕಾರ್ಯಕರ್ತ ಸಿದ್ಧತೆ

**ಮೈಸೂರು:** ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿ ವಿರುದ್ಧ ಮತ್ತೊಂದು ಭೂ ಅಕ್ರಮದ ಆರೋಪ ಕೇಳಿಬಂದಿದ್ದು, ಈ ವಿಚಾರವಾಗಿ ರಾಜ್ಯಪಾಲರಿಗೆ ದೂರು ನೀಡುವ ಮುನ್ನ ಕಾನೂನು ತಜ್ಞರೊಂದಿಗೆ ಚರ್ಚೆ ನಡೆಸುವುದಾಗಿ ಆರ್ ಟಿಐ ಕಾರ್ಯಕರ್ತ ಗಂಗರಾಜು 'ಟಿವಿ9'ಗೆ ತಿಳಿಸಿದ್ದಾರೆ. ಭೂ ಅಕ್ರಮ ಆರೋಪ ಸಂಬಂಧ ಇಂದು ರಾಜ್ಯಪಾಲರಿಗೆ ದೂರು ನೀಡಲು ಅವರು ನಿರ್ಧರಿಸಿದ್ದರು. ಅದರಂತೆ, ಇಂದು ಕಾನೂನು ತಜ್ಞರ ಜೊತೆ ಚರ್ಚಿಸಿ ಅರ್ಜಿ ಸಿದ್ಧಪಡಿಸಿಕೊಳ್ಳಲಿದ್ದಾರೆ.



ಮುಡಾಗೆ ನೀಡಲಾಗಿದ್ದ ಜಾಗವನ್ನು ಮತ್ತೆ ತಮ್ಮ ಹೆಸರಿಗೆ ಕ್ರಯ ಮಾಡಿಸಿಕೊಂಡಿದ್ದ ಆರೋಪ ಸಿದ್ದರಾಮಯ್ಯ ಪತ್ನಿ ಪಾರ್ವತಿ ಮೇಲಿದೆ.

**ಏನಿದು ಭೂ ಅಕ್ರಮ ಪ್ರಕರಣ:** ಮೈಸೂರು ನಗರದ ಕೆಆರ್ ಎಸ್ ರಸ್ತೆಯಲ್ಲಿರುವ ಗಣೇಶ್ ದೀಕ್ಷಿತ್ ಎಂಬುವವರಿಗೆ ಸೇರಿದ್ದ ಸರ್ವೆ ನಂ. 445ರ 20 ಗುಂಟೆ ಜಾಗವನ್ನು ಪಾರ್ವತಿ ಸಿದ್ದರಾಮಯ್ಯ ಖರೀದಿಸಿದ್ದರು. 29.9.2023 ರಂದು ಖರೀದಿ ಮಾಡಿ ತಮ್ಮ ಹೆಸರಿಗೆ ನೋಂದಣಿ ಮಾಡಿಸಿಕೊಂಡಿದ್ದರು. ಗಣೇಶ್ ಅವರಿಗೆ 4 ಎಕರೆ 11 ಗುಂಟೆ ಜಾಗವಿತ್ತು. 20 ಗುಂಟೆ ಜಾಗಕ್ಕೆ 1.85 ಕೋಟಿ ರೂಪಾಯಿ ಕೊಟ್ಟು ಸಿಎಂ ಪತ್ನಿ ಖರೀದಿಸಿದ್ದರು. 21,771,99 ಚದರಡಿ ಜಾಗ ರಿಜಿಸ್ಟರ್ ಮಾಡಿಸಿಕೊಂಡಿದ್ದರು. ಅದರಲ್ಲಿ 8998 ಚದರಡಿ ಜಾಗ ರಸ್ತೆ ಮತ್ತು ಪೈಪ್ ಲೈನ್‌ಗೆಂದು ಗಣೇಶ್ ಅವರು ಮುಡಾಗೆ ಬಿಟ್ಟುಕೊಟ್ಟಿದ್ದರು. ಕೈಗಾರಿಕೆಯಿಂದ ವಸತಿ ಉದ್ದೇಶಕ್ಕೆ ಪರಿವರ್ತನೆಯಾಗುವ ವೇಳೆ ಬಿಟ್ಟುಕೊಟ್ಟಿದ್ದರು. ರಸ್ತೆ ಮತ್ತು ಪೈಪ್ ಲೈನ್‌ಗೆ ಬಿಟ್ಟುಕೊಟ್ಟಿದ್ದ ಜಾಗವನ್ನು ಸೇರಿಸಿಕೊಂಡು ತಮ್ಮ ಹೆಸರಿಗೆ ಪಾರ್ವತಿ ರಿಜಿಸ್ಟರ್ ಮಾಡಿಸಿಕೊಂಡಿದ್ದರು. ಈ ಬಗ್ಗೆ ಗಂಗರಾಜು ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿ ಹಾಕಿ ಮಾಹಿತಿ ಪಡೆದುಕೊಂಡಿದ್ದರು. ಅರ್ಜಿ ಹಾಕುತ್ತಿದ್ದಂತೆ ಎಚ್ಚೆತ್ತ ಪಾರ್ವತಿ ಸಿದ್ದರಾಮಯ್ಯ, 31.8.2024 ರಂದು ಮತ್ತೆ ರಿಜಿಸ್ಟರ್ ತಿದ್ದುಪಡಿ ಮಾಡಿಸಿದ್ದರು. ಮುಡಾ ಜಾಗವನ್ನು ಬಿಟ್ಟು ಇನ್ನುಳಿದ 12,782 ಚದರಡಿ ಜಾಗಕ್ಕೆ ಮಾತ್ರ ರಿಜಿಸ್ಟರ್ ಪುಟ 2

## ಸಂಕ್ಷಿಪ್ತ ಸುದ್ದಿ

### ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣ: ಡಿಕೆ ವಿರುದ್ಧ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ ಸಿಬಿಐ



**ನವದೆಹಲಿ:** ಕರ್ನಾಟಕ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧದ ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣ ಸಂಬಂಧ ಇದೀಗ ಸಿಬಿಐ ಕೂಡ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದೆ. ಇದೇ ಪ್ರಕರಣದಲ್ಲಿ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕರ್ನಾಟಕ ಹೈಕೋರ್ಟ್ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್ ಗೆ ಮೇಲ್ಮನವಿ ಸಲ್ಲಿಸಿದ್ದರು. ಇದೀಗ ಯತ್ನಾಳ್ ಬೆನ್ನಲ್ಲೇ ಸಿಬಿಐ ಕೂಡ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದೆ. ಪುಟ 2

### ಬೆಂಗಳೂರು ಎಸ್ಎಂವಿಟಿ ಕಾರವಾರ ಯಶವಂತಪುರ ಮಂಗಳೂರಿಗೆ ವಿಶೇಷ ರೈಲು



**ಬೆಂಗಳೂರು:** ದೀಪಾವಳಿ ಹಬ್ಬಕ್ಕೆ ಇನ್ನು ಕೆಲವೇ ದಿನಗಳಿದ್ದು, ಪ್ರಯಾಣಿಕರ ದಟ್ಟಣೆಯನ್ನು ನಿರ್ವಹಿಸುವ ದೃಷ್ಟಿಯಿಂದ ನೈಋತ್ಯ ರೈಲ್ವೆ ವಿಶೇಷ ರೈಲುಗಳನ್ನು ಘೋಷಿಸಿದೆ. ಬೆಂಗಳೂರಿನ ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್-ಕಾರವಾರ ಮತ್ತು ಯಶವಂತಪುರ-ಮಂಗಳೂರು ಜಂಕ್ಷನ್ ನಿಲ್ದಾಣಗಳ ಮಧ್ಯೆ ಒಂದು ಟ್ರಿಪ್ ವಿಶೇಷ ರೈಲುಗಳ ವ್ಯವಸ್ಥೆ ಮಾಡಲಾಗಿದೆ. ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ಸರಿದೂಗಿಸುವ ಸಲುವಾಗಿ ಬೆಂಗಳೂರಿನ ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್-ಕಾರವಾರ ಮತ್ತು ಯಶವಂತಪುರ-ಮಂಗಳೂರು ಜಂಕ್ಷನ್ ನಿಲ್ದಾಣಗಳ ನಡುವೆ ಒಂದು ಟ್ರಿಪ್ ವಿಶೇಷ ಎಕ್ಸ್ ಪ್ರೆಸ್ ರೈಲುಗಳನ್ನು ಓಡಿಸಲು ನೈಋತ್ಯ ರೈಲ್ವೆ ವಲಯವು ನಿರ್ಧರಿಸಿದೆ ಎಂದು ನೈಋತ್ಯ ರೈಲ್ವೆ ಅಧಿಕೃತ ಟ್ವಿಟರ್ ಖಾತೆಯಲ್ಲಿ ಪ್ರಕಟಣೆ ನೀಡಿದೆ. ಪುಟ 2

## ಬೆಂಗಳೂರಿನ ರಸ್ತೆಗಳಲ್ಲಿ ನಿಂತ ನೀರು, ವಾಹನ ಸಂಚಾರಕ್ಕೆ ಅಡ್ಡಿ

# ಮಳೆಗೆ ಸಮಸ್ಯೆ ನೂರಾರು

**ಬೆಂಗಳೂರು:** ಬೆಂಗಳೂರಿನಲ್ಲಿ ಮಧ್ಯರಾತ್ರಿಯಿಂದ ನಸುಕಿನ ಜಾವದವರೆಗೆ ಆರ್ಭಟಿಸಿದ್ದ ವರುಣರಾಯಣ ಈಗ ಕೊಂಚ ಶಾಂತವಾಗಿದ್ದಾನೆ. ನಸುಕಿನಜಾವ ಸುರಿದ ಭಾರಿ ಮಳೆಗೆ ನಗರದ ರಸ್ತೆಗಳಲ್ಲಿ ಮೊಣಕಾಲಿನವರೆಗೂ ನೀರು ನಿಂತಿದೆ. ಇದರಿಂದ ಕಚೇರಿಗಳಿಗೆ ತೆರಳುತ್ತಿದ್ದವರು ಪರದಾಡುವಂತಾಯಿತು. ಬೈಕ್ ಮತ್ತು ಆಟೋ ಇಂಜಿನ್ ಗಳಲ್ಲಿ ನೀರು ಹೊಕ್ಕು ನಡುರಸ್ತೆ ಬಂದ್ ಆಗಿ ನಿಂತಿವೆ. ಫ್ರೀಡಂ ಪಾರ್ಕ್ ರಸ್ತೆಯಲ್ಲಿ ಮಳೆ ನೀರು ನಿಂತು ಅವಾಂತರ ಸೃಷ್ಟಿಯಾಗಿದೆ. ವಾಹನ ಸವಾರರು ಪರದಾಡಿದರು. ಹೀಗಾಗಿ ವಾಹನ ಸಂಚಾರ ನಿಧಾನಗತಿಯಿಂದ ಕೂಡಿದೆ.

ಬೆಂಗಳೂರಿನಲ್ಲಿ ಬೆಳ್ಳಂ ಬೆಳಗ್ಗೆ ಭಾರಿ ಮಳೆಯಾಗಿದೆ. ರಸ್ತೆಗಳಲ್ಲಿ ನೀರು ನಿಂತು ವಾಹನ ಸವಾರರು ಪರದಾಡಿದರು. ರಸ್ತೆಯಲ್ಲಿ ನೀರು ನಿಂತ ಪರಿಣಾಮ ವಾಹನ ಸಂಚಾರ ನಿಧಾನಗತಿಯಿಂದ ಕೂಡಿದ್ದು, ಟ್ರಾಫಿಕ್ ಜಾಮ್ ಆಗಿದೆ. ಟ್ರಾಫಿಕ್ ಜಾಮ್ ನಲ್ಲಿ ಸಿಲುಕಿ ಸವಾರರು ಪರದಾಡಿದರು.

ಪಾಣತ್ತೂರು ರೈಲ್ವೇ ಅಂಡರ್‌ಪಾಸ್ ನಲ್ಲಿ ಮಳೆ ನೀರು ನಿಂತಿರುವುದರಿಂದ ವಾಹನ ಸವಾರರು ನಿಧಾನಗತಿಯಿಂದ ಕೂಡಿದೆ. ಹೀಗಾಗಿ ಸವಾರರು ಪರ್ಯಾಯ ರಸ್ತೆಗಳನ್ನು ಬಳಸಬೇಕೆಂದು ಬೆಂಗಳೂರು ನಗರ ಸಂಚಾರಿ ಪೊಲೀಸರು ಮನವಿ ಮಾಡಿದ್ದಾರೆ.



## ಜಮ್ಮು-ಕಾಶ್ಮೀರದಲ್ಲಿ ಉಗ್ರರಿಂದ ಗುಂಡಿನ ದಾಳಿ

# ವೈದ್ಯ ಸೇರಿ 7 ಮಂದಿ ಸಾವು

**ಜಮ್ಮು:** ಜಮ್ಮು-ಕಾಶ್ಮೀರದಲ್ಲಿ ಉಗ್ರರು ಗುಂಡಿನ ದಾಳಿ ನಡೆಸಿದ್ದು, ವೈದ್ಯ ಸೇರಿ 7 ಮಂದಿ ಸಾವನ್ನಪ್ಪಿದ್ದಾರೆ. ಮಧ್ಯ ಕಾಶ್ಮೀರದ ಗಂದರ್‌ಬಾಲ್ ಜಿಲ್ಲೆಯ ಗುಂಡ್ ಪ್ರದೇಶದ ಗಗಂಗೀರ್‌ನಲ್ಲಿನ ಝಡ್-ಮೋಡ್ ಸುರಂಗದ ಕ್ಯಾಂಪ್ ಸೈಟ್ ಬಳಿ ಘಟನೆ ನಡೆದಿದೆ. ಐವರು ಗಾಯಗೊಂಡಿದ್ದು ಆಸ್ಪತ್ರೆಗೆ ದಾಖಲಿಸಲಾಗಿದೆ, ಸುರಂಗ ನಿರ್ಮಾಣ ಕಾಮಗಾರಿಯಲ್ಲಿ ತೊಡಗಿದ್ದ ಕಾರ್ಮಿಕರ ಮೇಲೆ ಉಗ್ರರು ಗುಂಡಿನ ದಾಳಿ ನಡೆಸಿದ್ದಾರೆ.

ಮೃತರನ್ನು ಡಾ.ಶಹನವಾಜ್, ಫಹೀಮ್ ನಜೀರ್, ಕಲೀಂ, ಮೊಹಮ್ಮದ್ ಹನೀಫ್, ಶಶಿ ಅಬ್ರೋಲ್, ಅನಿಲ್ ಶುಕ್ಲಾ ಮತ್ತು ಗುರ್ಮೀತ್ ಸಿಂಗ್ ಎಂದು ಗುರುತಿಸಲಾಗಿದೆ. ತಕ್ಷಣವೇ ಪೊಲೀಸರು, ಭದ್ರತಾ ಪಡೆಗಳು ಸ್ಥಳಕ್ಕೆ ಆಗಮಿಸಿದ್ದು, ಸ್ಥಳದಲ್ಲಿದ್ದ ಉಳಿದ ಕಾರ್ಮಿಕರನ್ನು ರಕ್ಷಿಸಿದ್ದಾರೆ.



ಆರೋಪಿಗಳನ್ನು ಗುರುತಿಸಲು ಮತ್ತು ಈ ಹಿಂಸಾತ್ಮಕ ಕೃತ್ಯದ ಹಿಂದಿನ ಉದ್ದೇಶಗಳನ್ನು ಅರ್ಥಮಾಡಿಕೊಳ್ಳಲು ಪ್ರಸ್ತುತ ತನಿಖೆಗಳು ನಡೆಯುತ್ತಿವೆ. ದಾಳಿಗೊಳಗಾದ ಕಾರ್ಮಿಕರು ಝಡ್ ಮೋರ್ಹ್ ಸುರಂಗದಲ್ಲಿ ಕೆಲಸ ಮಾಡುವ ತಂಡದ ಭಾಗವಾಗಿದ್ದರು. ಪುಟ 2

# ನಾಗಸಂದ್ರ, ಮಾದಾವರ ಮಾರ್ಗ ಕೊನೆಗೂ ಕಾರ್ಯಾಚರಣೆಗೆ ಸಿದ್ಧ

**ಬೆಂಗಳೂರು:** ನಮ್ಮ ಮೆಟ್ರೋ ನಾಗಸಂದ್ರ, ಟು ಮಾದಾವರ ಮಾರ್ಗ ಕೊನೆಗೂ ಕಾರ್ಯಾಚರಣೆಗೆ ಸಿದ್ಧವಾಗಿದ್ದು, ಇನ್ನೊಂದು ವಾರದಲ್ಲಿ ಕಾರ್ಯಾರಂಭ ಮಾಡಲಿದೆ. ನಮ್ಮ ಮೆಟ್ರೋದ ವಿಸ್ತರಿತ ಯೋಜನೆಯಾದ ನಾಗಸಂದ್ರ, ಹಾಗೂ ಮಾದಾವರ ಮಾರ್ಗ ಉದ್ಘಾಟನೆಗೆ ಸಿದ್ದವಾಗಿದೆ. 3.14 ಕಿಮೀ ಮಾರ್ಗದಲ್ಲಿ ನಾಗಸಂದ್ರದಿಂದ ಮಾದಾವರ ನಡುವೆ ಮೂರು ನಿಲ್ದಾಣಗಳಿದ್ದು, ಮಂಜುನಾಥ ನಗರ, ಚಿಕ್ಕಬಿದರಕಲ್ಲು, ಮಾದಾವರ ಹೊಸದಾಗಿ ಹಸಿರು ಮಾರ್ಗಕ್ಕೆ ಸೇರ್ಪಡೆಯಾಗಲಿದೆ. ಒಂದು ವಾರದೊಳಗೆ ಉದ್ಘಾಟನಾ ಸಮಾರಂಭ ನಡೆಯುವ ನಿರೀಕ್ಷೆ ಇರುವುದರಿಂದ ನಿಲ್ದಾಣಗಳನ್ನ ಸುಸಜ್ಜಿತಗೊಳಿಸಲಾಗುತ್ತಿದೆ. ಪುಟ 2



# ಪೊಲೀಸ್ ಮಕ್ಕಳಿಗಾಗಿ 7 ಪಬ್ಲಿಕ್ ಶಾಲೆಗಳನ್ನು ತೆರೆಯಲಾಗುತ್ತದೆ: ಸಿದ್ದರಾಮಯ್ಯ ಘೋಷಣೆ

**ಬೆಂಗಳೂರು:** ಪೊಲೀಸರು ಮುಕ್ತವಾಗಿ, ಸ್ವತಂತ್ರವಾಗಿ ಕೆಲಸ ಮಾಡಲು ನಮ್ಮ ಸರ್ಕಾರ ಸಂಪೂರ್ಣ ಸಹಕಾರ ನೀಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು. ಪೊಲೀಸ್ ಸಂಸ್ಮರಣಾ ದಿನದಂದು ಹುತಾತ್ಮ ಪೊಲೀಸ್ ಸಿಬ್ಬಂದಿಗೆ ನಮನ ಸಲ್ಲಿಸಿ ಮಾತನಾಡಿದರು.

ಜನರ ಪ್ರಾಣ, ಆಸ್ತಿ ರಕ್ಷಿಸುವ ಪೊಲೀಸ್ ಸಿಬ್ಬಂದಿಯ ಹಿತ ರಕ್ಷಿಸಲು ಸರ್ಕಾರ ಬದ್ಧವಾಗಿದೆ. ಇದಕ್ಕಾಗಿ 2025ರಲ್ಲಿ 10 ಸಾವಿರ ಪೊಲೀಸ್ ವಸತಿ ಮನೆಗಳ ನಿರ್ಮಾಣಕ್ಕೆ 2000 ಕೋಟಿ ನೀಡಿದ್ದೇವೆ. 200 ಕೋಟಿ ವೆಚ್ಚದಲ್ಲಿ 100 ಹೊಸ ಠಾಣೆಗಳ ನಿರ್ಮಾಣ ಆಗುತ್ತಿವೆ. ಪೊಲೀಸ್ ಮಕ್ಕಳಿಗಾಗಿ 7 ಪ್ರಮುಖ ಸ್ಥಳಗಳಲ್ಲಿ 7 ಪಬ್ಲಿಕ್ ಶಾಲೆಗಳನ್ನು ತೆರೆಯಲಾಗುತ್ತದೆ ಎಂದು ಘೋಷಿಸಿದರು.

ಕಳೆದ ಒಂದು ವರ್ಷದಲ್ಲಿ ದೇಶದಲ್ಲಿ 216 ಮಂದಿ, ರಾಜ್ಯದಲ್ಲಿ 12 ಮಂದಿ ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳು ಕರ್ತವ್ಯದ ಮೇಲಿದ್ದಾಗಲೇ ಹುತಾತ್ಮರಾಗಿದ್ದಾರೆ. ಇವರ ಆತ್ಮಕ್ಕೆ ನಾನು ಶಾಂತಿ ಕೋರುತ್ತಲೇ ಕುಟುಂಬದವರ ದುಃಖದಲ್ಲಿ ಭಾಗಿ



ಆಗುತ್ತೇನೆ. ದೇಶದಲ್ಲಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಾಗ, ಜನರ ಪ್ರಾಣ, ಮಾನ ಕಾಪಾಡುವ ಹೊತ್ತಲ್ಲಿ ಇವರೆಲ್ಲ ಹುತಾತ್ಮರಾಗಿದ್ದಾರೆ ಎಂದರು.

ದೇಶದಲ್ಲಿ ಆಂತರಿಕ ಭದ್ರತೆ ಕಾಪಾಡುವಲ್ಲಿ, ದೌರ್ಜನ್ಯ, ಅಪರಾಧ, ದುರಂತಗಳನ್ನು ತಡೆಯುವುದರಲ್ಲಿ ಪ್ರಮುಖ ಪಾತ್ರ ವಹಿಸುವುದು ನಮ್ಮ ಪೊಲೀಸ್ ಸಿಬ್ಬಂದಿ. ಹೀಗಾಗಿ ಇವರ ಜವಾಬ್ದಾರಿ ಬಹಳ ದೊಡ್ಡದು ಎಂದರು.

ಅಸಮಾನತೆ ಇರುವ ಸಮಾಜದಲ್ಲಿ ಶೋಷಣೆ, ದೌರ್ಜನ್ಯಗಳೂ ಇರುತ್ತವೆ. ಈ ಶೋಷಿತರ ಸಂವಿಧಾನಬದ್ದವಾದ ಹಕ್ಕುಗಳನ್ನು ಕಾಪಾಡಲು ಮುಖ್ಯ ಪಾತ್ರ ವಹಿಸುವವರು ನಮ್ಮ ಪೊಲೀಸರು. ಇವರ ಜೊತೆಗೆ ಸರ್ಕಾರ ಇರುತ್ತದೆ ಎಂದರು.

ಅಪರಾಧ ತಡೆಯಲು 6000 ಸಾವಿರ ಸಿಸಿ ಕ್ಯಾಮರಾಗಳು, 260 ಕ್ಕೂ ಹೆಚ್ಚು ಹೆದ್ದಾರಿ ಗಸ್ತು ವಾಹನಗಳು ಕರ್ತವ್ಯ ನಿರ್ವಹಿಸುತ್ತಿವೆ ಎಂದು ಮಾಹಿತಿ ನೀಡಿದರು.

ಗೃಹ ಸಚಿವ ಜಿ.ಪರಮೇಶ್ವರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಅಪರ ಮುಖ್ಯಕಾರ್ಯದರ್ಶಿ ಅತೀಕ್ ಎಲ್.ಕೆ., ಗೃಹ ಕಾರ್ಯದರ್ಶಿ ಉಮಾಶಂಕರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ಗೋವಿಂದರಾಜು, ನಸೀರ್ ಅಹಮದ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

## ಕಾರು, ಟ್ರ್ಯಾಕ್ಟರ್ ಇದ್ದೂ ಬಿಪಿಎಲ್ ಕಾರ್ಡ್ ಹೊಂದಿದವರಿಗೆ ಸರ್ಕಾರದಿಂದ

# ಖಡಕ್ ಸೂಚನೆ

**ಚಿಕ್ಕಮಗಳೂರು:** ಮಾನದಂಡಗಳಿಗೆ ವಿರುದ್ಧವಾಗಿ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿ ಹೊಂದಿದ್ದಿದ್ದರೇ, ಅವುಗಳನ್ನು ಕೂಡಲೆ ತಾಲೂಕು ಕಚೇರಿಯ ಆಹಾರ ಶಾಖೆಗೆ ಹಿಂದುರುಗಿಸುವಂತೆ



ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಒಂದು ವೇಳೆ ವಾಪಸ್ ನೀಡದೆ ಇದ್ದರೆ ಕಾನೂನು ಕ್ರಮದ, ಜೊತೆಗೆ ದಂಡ ಸಹ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದೆ.

ರಾಜ್ಯ ಸರ್ಕಾರ ಅಂತ್ಯೋದಯ, ಬಿಪಿಎಲ್ ಕಾರ್ಡ್ ಪರಿಷ್ಕರಣೆಗೆ ಮುಂದಾಗಿದೆ. ಇದರ ಭಾಗವಾಗಿ ಅಕ್ರಮವಾಗಿ ಪಡಿತರ ಚೀಟಿ ಪಡೆದವರ ಅಥವಾ ಸರ್ಕಾರದ ಮಾನದಂಡಗಳ ವಿರುದ್ಧವಾಗಿ ಪಡಿತರ ಚೀಟಿ ಹೊಂದಿದವರಿಗೆ ಆಯಾ ತಾಲೂಕುಗಳಲ್ಲಿ ತಹಶಿಲ್ದಾರರು ನೋಟಿಸ್ ಜಾರಿ ಮಾಡಿದ್ದಾರೆ. ಸರ್ಕಾರ ಕಳೆದ ತಿಂಗಳು ಅನರ್ಹ ಪಡಿತರದಾರರ ಪಟ್ಟಿ ಬಿಡುಗಡೆ ಮಾಡಿತ್ತು. ಚಿಕ್ಕಮಗಳೂರು ಜಿಲ್ಲೆಯೊಂದರಲ್ಲೇ 52 ಸಾವಿರ ಕಾರ್ಡ್ ರದ್ದಾಗುವ ಸಾಧ್ಯತೆ. ಪುಟ 2

## ತೀರ್ಪು ಪ್ರಕಟಕ್ಕೂ ಮುನ್ನ ರಾಮಜನ್ಮಭೂಮಿ-ಬಾಬ್ರಿ ವಿವಾದ ಇತ್ಯರ್ಥಕ್ಕಾಗಿ ದೇವರನ್ನು ಪ್ರಾರ್ಥಿಸಿದ್ದೆ

# ಸಿಜೆಐ ಚಂದ್ರಚೂಡ್

**ನವದೆಹಲಿ:** ''ಬಾಬ್ರಿ ಮಸೀದಿ, ರಾಮ ಜನ್ಮಭೂಮಿ ಕುರಿತ ವಿವಾದಕ್ಕೆ ಪರಿಹಾರ ಸಿಗದಿದ್ದಾಗ ದೇವರನ್ನು ಪ್ರಾರ್ಥಿಸುತ್ತಾ ಕುಳಿತಿದ್ದೆ'' ಎಂದು ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಹೇಳಿದ್ದಾರೆ. ತನ್ನ ಮೇಲೆ ನಂಬಿಕೆ ಇಡುವವರಿಗೆ ದೇವರು ಎಂದೂ ಒಳ್ಳೆಯ ಮಾರ್ಗವನ್ನೇ ತೋರುತ್ತಾನೆ ಎಂದರು.



ನವೆಂಬರ್ 9, 2019 ರಂದು, ಆಗಿನ ಭಾರತದ ಮುಖ್ಯ ನ್ಯಾಯಮೂರ್ತಿ ರಂಜನ್ ಗೊಗೊಯ್ ನೇತೃತ್ವದ ಸುಪ್ರೀಂ ಕೋರ್ಟ್‌ನ ಐದು ನ್ಯಾಯಮೂರ್ತಿಗಳ ಪೀಠವು ಒಂದು ಶತಮಾನಕ್ಕೂ ಹೆಚ್ಚು ಹಳೆಯದಾದ ವಿವಾದಾತ್ಮಕ ಸಮಸ್ಯೆಯನ್ನು ಇತ್ಯರ್ಥಪಡಿಸಿತು, ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣಕ್ಕೆ ದಾರಿ ಮಾಡಿಕೊಟ್ಟಿತು. ಪುಟ 2

## ಕ್ಯಾಬಿನೆಟ್‌ಗೂ ಮುನ್ನವೇ ವೀರಶೈವ ಮುಖಂಡರ ಸಭೆ

**ದಾವಣಗೆರೆ:** ಕ್ಯಾಬಿನೆಟ್‌ಗೂ ಮುನ್ನವೇ ಬೆಂಗಳೂರಿನಲ್ಲಿ ವೀರಶೈವ ಲಿಂಗಾಯತ ಮಹಾಸಭಾ ಮುಖಂಡರ ಸಭೆ ನಡೆಯಲಿದೆ ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ಜಾತಿ ಜನಗಣತಿ ವರದಿ ಸರ್ಕಾರ



ಬಿಡುಗಡೆ ವಿಚಾರವಾಗಿ ಮಾತನಾಡಿದರು. ಈ ವೇಳೆ ಕ್ಯಾಬಿನೆಟ್ ಸಭೆಗೂ ಮುನ್ನವೇ ವೀರಶೈವ ಲಿಂಗಾಯತ ಮುಖಂಡರ ಸಭೆ ನಡೆಯಲಿದೆ. ಅ.22ರ ಮಂಗಳವಾರ ಸಭೆ ನಡೆಯಲಿದೆ ಎಂದು ತಿಳಿಸಿದ್ದಾರೆ. ಇದರಲ್ಲಿ ಬಿಜೆಪಿ ಅಥವಾ ಕಾಂಗ್ರೆಸ್ ಎಂಬ ವಿಚಾರ ಬರುವುದಿಲ್ಲ. ಲಿಂಗಾಯತ ಸಮಾಜದ ಎಲ್ಲಾ ಮುಖಂಡರು ಸೇರಿ ಸಭೆ ಮಾಡುತ್ತಿದ್ದೇವೆ. ಈ ಸಭೆ ನಡೆದೇ ನಡೆಯುತ್ತದೆ. ಇದು ನಮ್ಮ ಸಮಾಜದ ಪ್ರಶ್ನೆಯೇ ಹೊರತು ಪಕ್ಷದ ಪ್ರಶ್ನೆಯಲ್ಲ ಎಂದು ತಿಳಿಸಿದ್ದಾರೆ.

## ಅಡಿಕೆ ತೋಟದಲ್ಲಿ ವಿದ್ಯುತ್ ತಂತಿ ಸ್ಪರ್ಶಿಸಿ ಇಬ್ಬರು ದುರ್ಮರಣ

**ಚಿತ್ರದುರ್ಗ:** ವಿದ್ಯುತ್ ತಂತಿ ಸ್ಪರ್ಶಿಸಿ ಇಬ್ಬರು ಮೃತಪಟ್ಟಿರುವ ಘಟನೆ ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲೂಕಿನ ಕೃಷ್ಣಾಪುರ ಗ್ರಾಮದಲ್ಲಿ ನಡೆದಿದೆ. ಮೃತರನ್ನು ಮಧ್ಯಪ್ರದೇಶ ಮೂಲದ ಮೋಹಿತ್(24), ಕತರ್ವ (38) ಎಂದು ಗುರುತಿಸಲಾಗಿದೆ.

ಕೃಷ್ಣಾಪುರ ಗ್ರಾಮದ ಜಯರಾಂ ಎಂಬವರ ಅಡಿಕೆ ತೋಟದಲ್ಲಿ ಘಟನೆ ನಡೆದಿದ್ದು, ಕಳೆದ ರಾತ್ರಿ ಶ್ರೀಗಂಧ ಕಳ್ಳತನಕ್ಕೆ ಬಂದಿರುವ ಶಂಕೆ ವ್ಯಕ್ತವಾಗಿದೆ. ಜಯರಾಂ ಅಡಿಕೆ ತೋಟದಲ್ಲಿ ಕೆಲ ಶ್ರೀಗಂಧದ ಮರಗಳಿದ್ದು, ಕಳ್ಳತನಕ್ಕೆ ಆಗಮಿಸಿ ಈ ರೀತಿ ಸಾವಿಗೀಡಾಗಿದ್ದಾರೆ ಎಂಬ ಶಂಕೆ ವ್ಯಕ್ತವಾಗಿದೆ. ಘಟನಾ ಸ್ಥಳಕ್ಕೆ ಅಬ್ಬಿನಹೊಳೆ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಬ್ಬಿನಹೊಳೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ.

## ಹಲವು ವರ್ಷಗಳ ಬಳಿಕ ಒಟ್ಟಿಗೆ ಕಾಣಿಸಿಕೊಂಡ ರೆಡ್ಡಿ-ರಾಮುಲು

**ಬಳ್ಳಾರಿ:** ಉಪಚುನಾವಣೆ ಹೊತ್ತಲ್ಲೇ ಹಲವು ವರ್ಷಗಳ ಬಳಿಕ ಶಾಸಕ ಜನಾರ್ದನ ರೆಡ್ಡಿ ಹಾಗೂ ಮಾಜಿ ಸಚಿವ ಶ್ರೀರಾಮುಲು ಒಟ್ಟಿಗೆ ಕಾಣಿಸಿಕೊಂಡಿದ್ದಾರೆ. ಒಟಿಯಾಗಿ ಸುದ್ದಿಗೋಷ್ಠಿ ನಡೆಸಿದ ನಾಯಕರು, ಇಂದಿನಿಂದ ಒಂದು ದಿನವನ್ನೂ ನಾವು ವ್ಯರ್ಥ ಮಾಡಲ್ಲ. ನಾವು ಈಗಾಗಲೇ ಎಲ್ಲಾ ತಯಾರಿ ಮಾಡಿಕೊಂಡಿದ್ದೇವೆ. ಬಿಜೆಪಿ ಯಾವ ರೀತಿ ಶಕ್ತಿಶಾಲಿಯಾಗಿತ್ತೋ ಹಾಗೇ ಒಗ್ಗಟ್ಟಾಗಿ ಕೆಲಸ ಮಾಡ್ತೇವೆ. ಇಂದಿನಿಂದಲೇ ನಾವು ಪ್ರಚಾರ ಕಾರ್ಯ ಆರಂಭಿಸ್ತೇವೆ. ಸರ್ಕಾರ ಅಧಿಕಾರಕ್ಕೆ ಬಂದ್ಮೇಲೆ ಭ್ರಷ್ಟಾಚಾರ ಆಗಿರೋದು ಜಗಜ್ಜಾಹೀರಾಗಿದೆ. ಭ್ರಷ್ಟಾಚಾರ, ಅತ್ಯಾಚಾರ, ಭೂ ಕಬಳಿಕೆಯನ್ನ ಜನರು ನೋಡಿದ್ದಾರೆ. ನಮ್ಮ ಅಭ್ಯರ್ಥಿ ಬಂಗಾರು ಹನುಮಂತ ಗೆಲ್ಲುವ ಮೂಲಕ ಜಿಲ್ಲೆಯಲ್ಲಿ ಪಕ್ಷವನ್ನ ಗಟ್ಟಿಯಾಗಿ ಕಟ್ತೇವೆ ಎಂದು ಶಪಥ ಮಾಡಿದ್ದಾರೆ. ದಿವಾಕರ್ ಕೂಡಾ ಪ್ರಬಲ ಆಕಾಂಕ್ಷಿ ಆಗಿದ್ರು. ಇದು ಪಾರ್ಟಿ ತೀರ್ಮಾನ. ಹನುಮಂತು ಗೆಲುವು ಪಾರ್ಟಿ ಗೆಲುವಾಗ್ತದೆ. ಬಿಜೆಪಿ ಸಂಡೂರಿನಲ್ಲಿ ಗೆಲ್ಲಬೇಕು ಅನ್ನೋ ವಿಶ್ವಾಸದಿಂದ ಪ್ರಯತ್ನ ಮಾಡಿದ್ವಿ. ಈ ಬಾರಿ ವಾತಾವರಣ ಇದೆ ನಾವು ಗೆಲ್ತೇವೆವಾಲ್ಮೀಕಿ ಹಣ ಬಳಕೆ ಮಾಡಿ ಲೋಕಸಭೆ ಗೆದ್ದಿದ್ದಾರೆ. ನಾಗೇಂದ್ರ ಭ್ರಷ್ಟಾಚಾರ ಮಾಡಿ ಜೈಲಿಗೋಗಿದ್ದಾರೋ ಅಥವಾ ಭ್ರಷ್ಟಾಚಾರ ಮಾಡಿ ಜೈಲಿಗೆ ಹೋಗಿ ಬಂದಿದ್ದಾರೊ? ಅಷ್ಟು ಟಾಪ್ ಆಗಿದ್ದಾನೆ. ನಾಗೇಂದ್ರನ ರೋಷಾವೇಷ ನೋಡಿದ್ರೆ ನಗುಬರುತ್ತೆ ಎಂದು ವ್ಯಂಗ್ಯವಾಡಿದ್ದಾರೆ.

# ಚನ್ನಪಟ್ಟಣಕ್ಕೆ ಕೃಷಿ ಸಚಿವ ಚೆಲುವರಾಯಸ್ವಾಮಿ ಉಸ್ತುವಾರಿ



**ಬೆಂಗಳೂರು:** ಸಂಡೂರು, ಶಿಗ್ಗಾಂವಿ, ಚನ್ನಪಟ್ಟಣ ಮೂರು ಕ್ಷೇತ್ರಗಳನ್ನು ಗೆಲ್ಲಲು ತಯಾರಿ ಮಾಡಿಕೊಳ್ಳುವ ಬಗ್ಗೆ ಚರ್ಚೆಯಾಗಿದ್ದು, ಮೂರು ಕ್ಷೇತ್ರಗಳಿಗೆ ಉಸ್ತುವಾರಿ ನೇಮಕ ಮಾಡಲಾಗಿದೆ ಎಂದು ಸಚಿವ ಚೆಲುವರಾಯ ಸ್ವಾಮಿ ಹೇಳಿದ್ದಾರೆ.

ಕರ್ನಾಟಕದ ಶಿಗ್ಗಾಂವಿ, ಸಂಡೂರು ಹಾಗೂ ಚನ್ನಪಟ್ಟಣ ಕ್ಷೇತ್ರಗಳ ಉಪಚುನಾವಣೆ, ಜಾತಿ ಜನಗಣತಿ, ಮೀಸಲಾತಿ ವಿಚಾರ ಸೇರಿ ಹಲವು ವಿಷಯಗಳ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಸಭೆ ನಡೆಸಲಾಗಿತ್ತು. ಕಾವೇರಿ ನಿವಾಸದಲ್ಲಿ ಸಭೆ ನಡೆಸಲಾಗುತ್ತಿದೆ. ಸಭೆಗೆ ಸಚಿವರಾದ ಡಿ.ಕೆ.ಶಿವಕುಮಾರ್, ಬೈರತಿ ಸುರೇಶ್, ಪ್ರಿಯಾಂಕ್ ಖರ್ಗೆ, ಜಮೀರ್ ಅಹಮದ್, ಶರಣ ಬಸಪ್ಪ ದರ್ಶನಾಪುರ, ಶಿವಾನಂದ ಪಾಟೀಲ್, ಎಂ.ಸಿ ಸುಧಾಕರ್, ದಿನೇಶ್ ಗುಂಡೂರಾವ್, ಎಸ್.ಎಸ್ ಮಲ್ಲಿಕಾರ್ಜುನ್, ಚಲುವರಾಯಸ್ವಾಮಿ, ರಾಮಲಿಂಗಾ ರೆಡ್ಡಿ ಸೇರಿ ಹಲವರು ಪಾಲ್ಗೊಂಡಿದ್ದರು.

ಸಭೆಯ ಬಳಿಕ ಸಚಿವ ಚೆಲುವರಾಯಸ್ವಾಮಿ ಮಾತನಾಡಿ, ಬೈ ಎಲೆಕ್ಷನ್ ಬಗ್ಗೆ ಚರ್ಚಿಸಲಾಗಿದೆ. 3 ಕ್ಷೇತ್ರಗಳನ್ನ ಗೆಲ್ಲಲು ತಯಾರಿ ಮಾಡಿಕೊಳ್ಳುವ ಬಗ್ಗೆ ಚರ್ಚೆಯಾಗಿದೆ. ಚನ್ನಪಟ್ಟಣ ನನಗೆ ಉಸ್ತುವಾರಿ ನೀಡಿದ್ದಾರೆ. ಇನ್ನುಳಿದಂತೆ ಸಂಡೂರು ಕ್ಷೇತ್ರದ ಉಸ್ತುವಾರಿ ಸಚಿವ ಜಮೀರ್‌ಗೆ ಹಾಗೂ ಶಿಗ್ಗಾಂವಿ ಕ್ಷೇತ್ರದ ಉಸ್ತುವಾರಿಯನ್ನು ಸಚಿವ ಈಶ್ವರ್ ಖಂಡ್ರೆಗೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ನಮ್ಮ ಅಭ್ಯರ್ಥಿಗಳ ಪಟ್ಟಿ ನಾಳೆ ದೆಹಲಿಗೆ ಕಳಿಸಿಕೊಡಲಾಗುತ್ತೆ. ನಾಳೆ ಸಂಜೆ ಅಭ್ಯರ್ಥಿಗಳ ಹೆಸರು ಫೈನಲ್ ಆಗಬಹುದು. ಸಂಡೂರು ವಿಧಾನಸಭಾ ಕ್ಷೇತ್ರದಿಂದ ತುಕಾರಾಮ್ ಕುಟುಂಬಕ್ಕೆ ಕೊಡುವುದರ ಬಗ್ಗೆ ಅಂತಿಮವಾಗಿದೆ. ಚನ್ನಪಟ್ಟಣ ಹಾಗೂ ಶಿಗ್ಗಾಂವಿ ಕ್ಷೇತ್ರದ ಬಗ್ಗೆ ಚರ್ಚಿಸಿ ದೆಹಲಿಗೆ ಪಟ್ಟಿ ಕಳಿಸಲಾಗುತ್ತೆ. ಚನ್ನಪಟ್ಟಣ ಅಭ್ಯರ್ಥಿ ಯಾರು ಅನ್ನೋದರ ಬಗ್ಗೆ ನಿಮಗೂ ಗೋತ್ತು ನಮಗೂ ಗೋತ್ತು ಹೈಕಮಾಂಡ್ ಅಂತಿಮ ತೀರ್ಮಾನ ಮಾಡಲಿದೆ ಎಂದು ಹೇಳಿದ್ದಾರೆ.

# 23 ರಂದು ರಾಜ್ಯದ ಅತಿ ಎತ್ತರದ ಶ್ರೀರಾಮಾಂಜನೇಯ ಮೂರ್ತಿ ಲೋಕಾರ್ಪಣೆ

**ಬೆಂಗಳೂರು:** ರಾಜಾಜಿನಗರದ ಶ್ರೀರಾಮಮಂದಿರದಲ್ಲಿ ಶ್ರೀರಾಮ ಸೇವಾ ಮಂಡಳಿಯಿಂದ ಕರ್ನಾಟಕದ ಅತಿ ಎತ್ತರದ 63 ಅಡಿ ಉದ್ದದ ಶ್ರೀರಾಮಾಂಜನೇಯ ಪ್ರತಿಮೆಯ ಚರ ಪ್ರತಿಷ್ಠಾಪನಾ ಮಹೋತ್ಸವ ಕಾರ್ಯಕ್ರಮ ಇಂದಿನಿಂದ ಮೂರು ದಿನಗಳ ಕಾಲ ಅದ್ದೂರಿಯಾಗಿ ನೆರವೇರಲಿದೆ. 23 ರಂದು ವಿಧ್ಯುಕ್ತವಾಗಿ ಮೂರ್ತಿ ಪ್ರತಿಷ್ಠಾಪಿಸಲಾಗುತ್ತದೆ ಎಂದು ಮಾಗಡಿ ಕೆಂಪೇಗೌಡ ಅಭಿವೃದ್ಧಿ ಸಮಿತಿ ಅಧ್ಯಕ್ಷ ಹೆಚ್.ಎಂ.ಕೃಷ್ಣಮೂರ್ತಿ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ, ನಿರ್ಮಲಾನಂದನಾಥ ಸ್ವಾಮೀಜಿರವರ ದಿವ್ಯ ಸಾನಿಧ್ಯದಲ್ಲಿ ಈ ಮೂರ್ತಿ ಲೋಕಾರ್ಪಣೆಯಾಗಲಿದೆ ಎಂದು ಮಾಹಿತಿ ನೀಡಿದ್ದಾರೆ. ರಾಜ್ಯದ ಪ್ರಮುಖ ಧಾರ್ಮಿಕ ಮುಖಂಡರು, ಧರ್ಮಗುರುಗಳು, ರಾಜಕೀಯ ನೇತಾರಾರರ ಸಮ್ಮುಖದಲ್ಲಿ, ಭಕ್ತರ ಅಮಿತೋತ್ಸಾಹದ ನಡುವೆ ಮೂರ್ತಿ ಪ್ರತಿಷ್ಠಾಪನೆ ನೆರವೇರಲಿದೆ.

ಇಂದು ಸಂಜೆ ಗಣಪತಿಪೂಜೆ, ವಿದ್ವಜ್ಜನ ಪ್ರಾರ್ಥನೆ, ದೇವತಾ ಪ್ರಾರ್ಥನೆ, ಕಳಸ ಪ್ರತಿಷ್ಠಾಪನೆ ಕಾರ್ಯ ಶುಭಾರಂಭವಾಗಲಿದೆ. ನಾಳೆ ಬೆಳಗ್ಗೆ 63ಅಡಿಯ ಶ್ರೀರಾಮಾಂಜನೇಯ ಚರಪ್ರತಿಷ್ಠಾನದ ಪೂಜೆ, ಹೋಮ ಸಂಕಲ್ಪವನ್ನು ಸಿದ್ದಗಂಗಾಮಠ ಸಿದ್ದಲಿಂಗಾಮಹಾಸ್ವಾಮೀಜಿ ನೇತೃತ್ವದಲ್ಲಿ ಪ್ರಾರಂಭವಾಗಲಿದೆ.

23 ರಂದು ಬೆಳಗ್ಗೆ 11ಗಂಟೆಗೆ ಶ್ರೀರಾಮಾಂಜನೇಯ ಚರ ಪ್ರತಿಷ್ಠಾಪನೆ ಮತ್ತು ಲೋಕರ್ಪಣೆಯನ್ನು ಉಡುಪಿ ಪೇಜಾವರ ಮಠದ ವಿಶ್ವಪ್ರಸನ್ನ ೞರ್ಥ ಸ್ವಾಮೀಜಿಗಳು, ಆದಿ ಚುಂಚನಗಿರಿ ಮಹಾಸಂಸ್ಥಾನದ ನಿರ್ಮಲಾನಂದನಾಥ ಸ್ವಾಮೀಜಿ ಅವರು ನೆರವೇರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ರೈಲ್ವೆ ಮತ್ತು ಜಲಶಕ್ತಿಮ ಯೋಜನಾ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ, ಸಚಿವರಾದ ರಾಮಲಿಂಗಾರೆಡ್ಡಿ, ದಿನೇಶ್ ಗುಂಡೂರಾವ್, ಗ್ಯಾರೆಂಟಿ ಯೋಜನೆ ಅನುಷ್ಠಾನ ಸಮಿತಿ



ರಾಜ್ಯಾಧ್ಯಕ್ಷ ಹೆಚ್.ಎಂ.ರೇವಣ್ಣ, ಶಾಸಕರಾದ ಡಾ.ಸಿ.ಎನ್. ಅಶ್ವಥ್ ನಾರಾಯಣ್, ಕೆ.ಗೋಪಾಲಯ್ಯ, ರಾಜ್ಯ ಸಭಾ ಸದಸ್ಯ ಸುಧಾಂಶು ತ್ರಿವೇದಿ ಭಾಗವಹಿಸಲಿದ್ದಾರೆ. ಶ್ರೀರಾಮಾಂಜನೇಯ ಚರ ಪ್ರತಿಷ್ಠಾಪನಾ ಸ್ವಾಗತ ಸಮಿತಿಯಲ್ಲಿ ಲೋಕಸಭಾ ಸದಸ್ಯ ಪಿ.ಸಿ.ಮೋಹನ್, ರಾಜಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಸ್.ಸುರೇಶ್ ಕುಮಾರ್, ರಾಜಕೀಯ ಮುಖಂಡ ಆರ್.ವಿ.ಹರೀಶ್ ರವರು ಸಹಕಾರ ನೀಡುತ್ತಿದ್ದಾರೆ. 63ಅಡಿ ಶ್ರೀರಾಮಾಂಜನೇಯ ಚರಮೂರ್ತಿ ಶಿವಮೊಗ್ಗದ ಶಿಲ್ಪಿ ಜೀವನ್ ರವರು 8ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸಿದ್ದಾರೆ. ಧರ್ಮಸ್ಥಳದ ಡಾ. ವಿರೇಂದ್ರಹೆಗಡೆ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ನೆರವೇರುತ್ತಿದ್ದು, ಮಾಜಿ ಮುಖ್ಯಮಂತ್ರಿ ಬಿಎಸ್.ಯಡಿಯೂರಪ್ಪ, ಚಲನಚಿತ್ರ ನಟರುಗಳಾದ ಹ್ಯಾಟ್ರಿಕ್ ಹಿರೋ ಶಿವರಾಜ್ ಕುಮಾರ್, ರಮೇಶ್ ಅರವಿಂದ್, ಶ್ರೀಮುರುಳಿ ಹಾಗೂ ಬಿಜೆಪಿ ರಾಷ್ಟ್ರಿಯ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್, ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ ರವರು, ಆನೇಕ ರಾಜಕೀಯ ಮುಖಂಡರು ಭಾಗವಹಿಸಲಿದ್ದಾರೆ.

# ನಾನು ಮುಡಾದಿಂದ ದಾಖಲೆ ತಂದಿದ್ದೇನೆ ಅಂತ ಶ್ರೀರಾಮನ ಮೇಲೆ ಆಣೆ ಮಾಡಲಿ

**ಬೆಂಗಳೂರು:** ನಾನು ಶ್ರೀರಾಮನ ಭಕ್ತ, ಶ್ರೀರಾಮ ನಮ್ಮ ಮನೆ ದೇವರು. ನಾನು ಮುಡಾದಿಂದ ದಾಖಲೆ ತೆಗೆದುಕೊಂಡಿದ್ದೇನೆ ಎಂದು ಶ್ರೀರಾಮನ ಮೇಲೆ ಬಂದು ಪ್ರಮಾಣ ಮಾಡಲಿ ಎಂದು ಮೈಸೂರಿನ ಬಿಜೆಪಿ ಶಾಸಕ ಟಿ.ಎಸ್.ಶ್ರೀವತ್ಸ ಹಾಗೂ ಸಚಿವೆ ಶೋಭಾ ಕರಂದ್ಲಾಜೆ ಅವರಿಗೆ ಸಚಿವ ಬೈರತ್ತಿ ಸುರೇಶ್ ಸವಾಲ್ ಹಾಕಿದ್ದಾರೆ.



ಕರ್ನಾಟಕದ ಶಿಗ್ಗಾಂವಿ, ಸಂಡೂರು ಹಾಗೂ ಚನ್ನಪಟ್ಟಣ ಕ್ಷೇತ್ರಗಳ ಉಪಚುನಾವಣೆ, ಜಾತಿ ಜನಗಣತಿ, ಮೀಸಲಾತಿ ವಿಚಾರ ಸೇರಿ ಹಲವು ವಿಷಯಗಳ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಸಭೆ ನಡೆಸಲಾಗುತ್ತಿದೆ. ಕಾವೇರಿ ನಿವಾಸದಲ್ಲಿ ಸಭೆ ನಡೆಸಲಾಗುತ್ತಿದೆ. ಸಭೆಗೆ ಸಚಿವರಾದ ಡಿ.ಕೆ.ಶಿವಕುಮಾರ್, ಬೈರತಿ ಸುರೇಶ್, ಪ್ರೀಯಾಂಕ್ ಖರ್ಗೆ, ಜಮೀರ್ ಅಹಮದ್, ಶರಣ ಬಸಪ್ಪ ದರ್ಶನಾಪುರ, ಶಿವಾನಂದ ಪಾಟೀಲ್, ಎಂ.ಸಿ ಸುಧಾಕರ್, ದಿನೇಶ್ ಗುಂಡೂರಾವ್, ಎಸ್.ಎಸ್ ಮಲ್ಲಿಕಾರ್ಜುನ್, ಚಲುವರಾಯಸ್ವಾಮಿ, ರಾಮಲಿಂಗಾ ರೆಡ್ಡಿ ಸೇರಿ ಹಲವರು ಪಾಲ್ಗೊಂಡಿದ್ದಾರೆ. ಸಭೆಗೂ ಮುನ್ನ ಮುಡಾ ದಾಖಲೆಗಳ ಸಾಗಣೆ ಆರೋಪ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವ ಬೈರತಿ ಸುರೇಶ್, ಬಿಜೆಪಿ ಶಾಸಕರ ವಿರುದ್ಧ ಹರಿಹಾಯ್ದರು.

ಮುಡಾಕ್ಕೆ ಸಂಬಂಧಪಟ್ಟ ಒಂದೇ ಒಂದು ದಾಖಲೆಯನ್ನೂ ನಾನು ತಗೆದುಕೊಂಡು ಹೋಗಿಲ್ಲ. ನಾನು ಈ ವಿಚಾರವಾಗಿ ಮೈಸೂರು ಶಾಸಕ ಶ್ರೀವತ್ಸ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರಿಗೆ ಆಣೆ ಮಾಡಲು ಸವಾಲು ಹಾಕುತ್ತೇನೆ. ಚಾಮುಂಡಿ ಬೆಟ್ಟ, ಧರ್ಮಸ್ಥಳಕ್ಕೆ ಬಂದು ಆಣೆ ಮಾಡಲಿ ನಾನೂ ಮಾಡುತ್ತೇನೆ. ಶಾಸಕ ಶ್ರೀವತ್ಸ, ಶೋಭಾ ಕರಂದ್ಲಾಜೆ ಅವರು ಮೊದಲು ಸುಳ್ಳು ಹೇಳುವುನ್ನು ಬಿಡಲಿ ಎಂದು ಕಿಡಿ ಕಾರಿದರು. ಮೈಸೂರಿನ ಬಿಜೆಪಿ ಶಾಸಕರು ಬಾಯಿಬಿಟ್ಟರೆ ಸುಳ್ಳು ಹೇಳ್ತಾರೆ. ಶ್ರೀವತ್ಸ ಅವರು ಪೂಜೆ ಮುಗಿಸಿಕೊಂಡು, ಹಣೆಗೆ ನಾಮ ಹಾಕಿಕೊಂಡು ಬಂದು ಸುಳ್ಳು ಹೇಳ್ತಾರೆ. ನಾನು ಶ್ರೀರಾಮನ ಭಕ್ತ, ಶ್ರೀರಾಮ ನಮ್ಮ ಮನೆ ದೇವರು, ಬಂದು ಆಣೆ ಮಾಡಲಿ ನಾನು ಮುಡಾ ದಾಖಲೆ ತಂದಿದ್ದೇನೆ ಅಂತ ಬಂದು ಆಣೆ ಮಾಡಲಿ ಎಂದು ಸವಾಲ್ ಹಾಕಿದರು. ಇದೇ ವೇಳೆ ಚನ್ನಪಟ್ಟಣ ಉಪಚುನಾವಣೆಗೆ ಸಂಬಂಧಿಸಿದಂತೆ ಮಾತನಾಡಿದ ಅವರು, ರಾಜ್ಯದಲ್ಲಿ ಮೂರು ಕ್ಷೇತ್ರಗಳಲ್ಲಿ ಉಪಚುನಾವಣೆ ನಡೆಯುತ್ತಿದೆ. ಹಾಗಾಗಿ ಎಲ್ಲಾ ಸಚಿವರ ಜೊತೆ ಸಿಎಂ ಸಭೆ ಇದೆ. ಮೂರು ಕ್ಷೇತ್ರಗಳಲ್ಲಿ ಗೆಲ್ಲಬೇಕು ಆ ಕಾರಣಕ್ಕೆ ಕಾರ್ಯತಂತ್ರಗಳ ಬಗ್ಗೆ ಚರ್ಚಿಸಲು ಸಭೆ ನಡೆಯುತ್ತಿದೆ ಎಂದು ತಿಳಿಸಿದರು.

# ಅಧಿಕಾರ ಕಳೆದುಕೊಳ್ಳುವ ಭಯದಿಂದ ಸಿಎಂ ಜಾತಿ ಗಣತಿ ವರದಿ ಬಿಡುಗಡೆ ಪ್ರಸ್ತಾಪಿಸುತ್ತಿದ್ದಾರೆ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರ ಕಳೆದುಕೊಳ್ಳುವ ಭಯದಿಂದ ಜಾತಿ ಗಣತಿ ಬಿಡುಗಡೆ ಮಾಡುವುದಾಗಿ ಹೇಳುತ್ತಿದ್ದಾರೆ. ಮೊದಲು ಅದನ್ನು ಬಹಿರಂಗ ಪಡಿಸಲಿ. ಸಾರ್ವಜನಿಕ ಚರ್ಚೆಯಾಗಲಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯ ಪಟ್ಟಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಜಾತಿ ಜನಗಣತಿ ಕುರಿತು ಅಖಿಲ ಭಾರತ ವೀರಶೈವ ಮಹಾಸಭೆ ರಾಷ್ಟ್ರೀಯ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ತಮ್ಮನ್ನು ಭೇಟಿ ಮಾಡಿರುವ ಕುರಿತು ಮಾಧ್ಯಮದವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಜಾತಿ ಗಣತಿ ವಿಚಾರದಲ್ಲಿ ನಮ್ಮ ನಿಲುವು ಸ್ಪಷ್ಟವಾಗಿದೆ. ಇದು ಜಾತಿ ಗಣತಿಯಲ್ಲ. ಸಾಮಾಜಿಕ ಆರ್ಥಿಕ ಸಮೀಕ್ಷೆ, ರಾಜ್ಯ ಸರ್ಕಾರಕ್ಕೆ ಜಾತಿ ಜನಗಣತಿ ಮಾಡುವ ಅಧಿಕಾರ ಇಲ್ಲ. ಕೇಂದ್ರ ಸರ್ಕಾರಕ್ಕೆ ಮಾತ್ರ ಜಾತಿ ಜನಗಣತಿ ಮಾಡುವ ಅಧಿಕಾರವಿದೆ. ಬಿಹಾರ ಸರ್ಕಾರದ ಜಾತಿ ಗಣತಿಗೂ ಸುಪ್ರೀಂ ಕೋರ್ಟ್ ತಡೆ ನೀಡಿದೆ. ಇವರು ಯಾವುದೋ ಸಮೀಕ್ಷೆ ಮಾಡಿ ಅದಕ್ಕೆ ಜಾತಿ ಜನಗಣತಿಯ ಲೇಪನ ಮಾಡುತ್ತಿದ್ದಾರೆ ಎಂದು ಹೇಳಿದರು.



ಇನ್ನು ಈ ವರದಿ ವೈಜ್ಞಾನಿಕವಾಗಿಯೂ ಇಲ್ಲ, ಅಂಕಿ ಅಂಶ ಸಮರ್ಪಕವಾಗಿಲ್ಲ, ಹಲವು ಸಮುದಾಯಗಳಿಂದ ಆಕ್ಷೇಪಣೆ ಬಂದಿದೆ. ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದ ಕಾಂತರಾಜ್ ಅವರು ಸಿದ್ಧಪಡಿಸಿದ್ದ ವರದಿ ಸಮರ್ಪಕವಾಗಿಲ್ಲ ಎಂದು ಅಂದಿನ ಆಯೋಗದ ಕಾರ್ಯದರ್ಶಿ ಹಾಗೂ ಸದಸ್ಯರು ಸಹಿ ಹಾಕಿರಲಿಲ್ಲ. ನಂತರ ಬಂದ ಆಯೋಗದ ಅಧ್ಯಕ್ಷರಾದ ಜಯಪ್ರಕಾಶ್ ಹೆಗಡೆ ಅವರು, ಯಾವುದೇ ಸಮೀಕ್ಷೆ ನಡೆಸದೇ ಹಿಂದಿನ ಆಯೋಗದ ಅಧ್ಯಕ್ಷರು ಸಿದ್ಧಪಡಿಸಿದ್ದ ವರದಿಯನ್ನೇ ಪರಿಷ್ಕರಿಸಿ ಸರ್ಕಾರಕ್ಕೆ ಸಲ್ಲಿಕೆ ಮಾಡಿದ್ದಾರೆ. ಈ ವರದಿಯನ್ನು ಒಕ್ಕಲಿಗ ಸಮುದಾಯದವರು ವಿರೋಧಿಸಿದ್ದಾರೆ. ಸ್ವತ ಡಿಸಿಎಂ ಡಿಕೆ ಶಿವಕುಮಾರ್ ಸೇರಿದಂತೆ ಅನೇಕ ಕಾಂಗ್ರೆಸ್ ಮುಖಂಡರು ಇದನ್ನು ವಿರೋಧಿಸಿದ್ದಾರೆ ಎಂದರು. ಇದನ್ನು ಅಖಿಲ ಭಾರತ ವೀರಶೈವ ಮಹಾಸಭೆ ಕೂಡ ವಿರೋಧಿಸಿದೆ. ಎಲ್ಲ ಸಮುದಾಯಗಳ ಅನುಮಾನ ದೂರ ಮಾಡುವ ಕೆಲಸ ಸಿಎಂ ಮಾಡುತ್ತಿಲ್ಲ. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಚರ್ಚಿಸಲಿ. ಇಷ್ಟೆಲ್ಲ ವಿರೋಧ ಇದ್ದರೂ ಜಾರಿ ಮಾಡುತ್ತೇವೆ ಅಂತಿದ್ದಾರೆ. ಮೊದಲು ವರದಿ ಬಹಿರಂಗಪಡಿಸಲಿ, ಸಾರ್ವಜನಿಕವಾಗಿ ಚರ್ಚೆ ಆಗಲಿ. ಸಿಎಂ ಅವರು ವರದಿಯಲ್ಲಿ ಏನಿದೆ ಎಂದು ನೋಡಿಲ್ಲ ಅಂತಿದ್ದಾರೆ, ಆದರೆ ವರದಿ ತಯಾರಿ ಮಾಡಿಸಿದವರೇ ಸಿಎಂ. ದಿವಂಗತ ವಿ.ಪಿ. ಸಿಂಗ್ ಅವರು ಪ್ರಧಾನಿಯಾಗಿದ್ದಾಗ ಅಧಿಕಾರ ಹೋಗುವ ಸಂದರ್ಭದಲ್ಲಿ ಮಂಡಲ್ ವರದಿ ಜಾರಿ ಮಾಡಿದ್ದರು. ಅದೇ ರೀತಿ ಇವರು ಈಗ ಜಾತಿ ಗಣತಿ ಜಾರಿ ಮಾಡುವುದಾಗಿ ಹೇಳುತ್ತಿದ್ದಾರೆ ಎಂದು ನುಡಿದರು.

## ಆರ್‌ಟಿಐ ಕಾರ್ಯಕರ್ತ

ಮಾಡಿಸಿಕೊಂಡಿದ್ದರು. ಈ ಹಿನ್ನೆಲೆಯಲ್ಲಿ ರಾಜ್ಯಪಾಲರಿಗೆ ದೂರು ನೀಡಲು ಗಂಗರಾಜು ನಿರ್ಧರಿಸಿದ್ದಾರೆ.

**ಇಡಿ ಕಾರ್ಯಾಚರಣೆ ಮಾಹಿತಿ ನೀಡದಂತೆ ತಾಕೀತು:** ಮುಡಾ ಹಗರಣ ಸಂಬಂಧ ಮೈಸೂರಿನಲ್ಲಿರುವ ಮುಡಾ ಕಚೇರಿ ಮೇಲೆ ದಾಳಿ ನಡೆಸಿ ದಾಖಲೆಗಳನ್ನು ವಶಪಡಿಸಿಕೊಂಡಿರುವ ಜಾರಿ ನಿರ್ದೇಶನಾಲಯ, ಕಾರ್ಯಾಚರಣೆ ಮಾಹಿತಿ ನೀಡದಂತೆ ಮುಡಾ ಅಧಿಕಾರಿಗಳಿಗೆ ತಾಕೀತು ಮಾಡಿದೆ. ಈ ಬಗ್ಗೆ ಇಡಿ ಅಧಿಕಾರಿಗಳು ಆಯುಕ್ತ ರಘುನಂದನ್, ಕಾರ್ಯದರ್ಶಿ ಪ್ರಸನ್ನ ಕುಮಾರ್ ಸೇರಿದಂತೆ ಸಿಬ್ಬಂದಿಗೆ ಖಡಕ್ ಎಚ್ಚರಿಕೆ ನೀಡಿದ್ದಾರೆ.

ಇಡಿ ದಾಳಿ ಸಂಬಂಧ ಮೊದಲ ದಿನ ಕಾರ್ಯದರ್ಶಿ ಪ್ರಸನ್ನ ಕುಮಾರ್ ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದ ಇಡಿ ಅಧಿಕಾರಿಗಳು, ಯಾವುದೇ ಮಾಹಿತಿ ನೀಡದಂತೆ ಖಡಕ್ ಸೂಚನೆ ನೀಡಿದ್ದಾರೆ.

**ಮುಡಾ ಕಚೇರಿ ಸಾರ್ವಜನಿಕರಿಗೆ ಮುಕ್ತ:** ಇಡಿ ದಾಳಿಯ ಕಾರಣ ಶುಕ್ರವಾರ ಹಾಗೂ ಶನಿವಾರ ಮುಡಾ ಕಚೇರಿ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಮುಚ್ಚಿತ್ತು. ಇದರಿಂದ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಅಡ್ಡಿಯಾಗಿತ್ತು. ಇಂದಿನಿಂದ ಎಂದಿನಂತೆ ಕಾರ್ಯ ನಿರ್ವಹಿಸಲಿದೆ.

**ಚುರುಕುಗೊಳ್ಳಲಿದೆ ಇಡಿ ತನಿಖೆ:** ಮುಡಾದಲ್ಲಿ ಇಡಿ ಅಧಿಕಾರಿಗಳು ನಡೆಸಿರುವ ಶೋಧ ಕಾರ್ಯಾಚರಣೆ ಸ್ಯಾಂಪಲ್ ಮಾತ್ರ. ಮುಡಾದಲ್ಲಿ ಸಂಗ್ರಹಿಸಿರುವ ದಾಖಲೆಗಳ ಆಧಾರದ ಮೇಲೆ ಇಡಿಯಿಂದ ಮುಂದಿನ ತನಿಖೆ ಚುರುಕುಗೊಳ್ಳಲಿದೆ. 50:50 ಅನುಪಾತದಲ್ಲಿ ಬದಲಿ ಭೂಮಿ ಹಂಚಿಕೆ ತನಿಖೆ ಚುರುಕುಗೊಳ್ಳಲಿರುವುದರಿಂದ, 50:50 ಅನುಪಾತದಲ್ಲಿ ಬದಲಿ ಭೂಮಿ ನೀಡಿದ ಆಯುಕ್ತರು, ಅಧಿಕಾರಿಗಳು, ಸಿಬ್ಬಂದಿಗೆ ಢವ ಢವ ಶುರುವಾಗಿದೆ.

ಅನುಮತಿ ನೀಡಿ ಶಿಫಾರಸ್ಸು ಮಾಡಿದ, ಅನುಮೋದನೆ ನೀಡಿದ ಜನಪ್ರತಿನಿಧಿಗಳನ್ನೂ ವಿಚಾರಣೆಗೆ ಕರೆಯಲು ಇಡಿ ಸಿದ್ಧತೆ ಮಾಡಿಕೊಳ್ಳುತ್ತಿದೆ. ಹಿಂದಿನ ಜಿಲ್ಲಾಧಿಕಾರಿ ಡಾ. ಕೆವಿ ರಾಜೇಂದ್ರ ವರದಿಯಲ್ಲಿ ಉಲ್ಲೇಖವಾಗಿರುವ ಹಿಂದಿನ ಆಯುಕ್ತರು, ಮಾಜಿ ಅಧ್ಯಕ್ಷರನ್ನು ವಿಚಾರಣೆಗೆ ಕರೆಸಲು ಸಿದ್ಧತೆ ನಡೆದಿದೆ.

## ಮಳೆಗೆ ಸಮಸ್ಯೆ ನೂರಾರು

ವರ್ತೂರು ಗುಂಜೂರು ರಸ್ತೆಯಲ್ಲಿ ಕೆಎಫ್‌ಸಿ ಬಳಿ ಮಳೆ ನೀರು ನಿಂತಿರುವುದರಿಂದ ನಿಧಾನಗತಿಯ ಸಂಚಾರವಿದೆ. ಹೀಗಾಗಿ ಪರ್ಯಾಯ ರಸ್ತೆಗಳನ್ನು ಬಳಸಲು ಸೂಚಿಸಲಾಗಿದೆ.

ಮಡಿವಾಳ ಪೊಲೀಸ್ ಠಾಣೆ, ಎಂಸಿಎಚ್‌ಎಸ್ ಕಾಲೋನಿ, ಸ್ಯಾಂಕಿ ರಸ್ತೆ, ಹಳೆ ಹೈಗ್ರೌಂಡ್, ಸೆವೆನ್ ಮಿನಿಸ್ಟರ್ಸ್ ಕ್ವಾರ್ಟರ್, ಕಾವೇರಪ್ಪ ಬಡಾವಣೆ, ವಸಂತನಗರ, ಮಿಲ್ಲರ್ಸ್ ರಸ್ತೆ, ರಾಮಕೃಷ್ಣನಗರ, ಗಂಗಾನಗರ, ಕೆಆರ್ ಸರ್ಕಲ್ ಅಂಡರ್ ಪಾಸ್ ಗಳಲ್ಲಿ ನೀರು ನಿಂತಿದೆ. ಹೀಗಾಗಿ ವಾಹನ ಸಂಚಾರ ನಿಧಾನಗತಿಯಿಂದ ಕೂಡಿದೆ.

ವಡ್ಡರಪಾಳ್ಯ ಜಂಕ್ಷನ್‌ನಲ್ಲಿ ನೀರು ನಿಂತಿರುವುದರಿಂದ, ವಿಮಾನ ನಿಲ್ದಾಣದ ಕಡೆಗೆ ನಿಧಾನಗತಿಯ ಸಂಚಾರ ವಿರುತ್ತದೆ ದಯಮಾಡಿ ಸಹಕರಿಸಿ ಎಂದು ಬೆಂಗಳೂರು ನಗರ ಸಂಚಾರಿ ಪೊಲೀಸರು ಮನವಿ ಮಾಡಿದ್ದಾರೆ.

ಕೊಡೆ ಜಂಕ್ಷನ್, ವಿಂಡ್ಸರ್ ಮ್ಯಾನರ್ ರೈಲ್ವೆ ಸೇತುವೆ, ಸ್ಯಾಂಕಿ ರಸ್ತೆ, ಪಿಜಿ ಹಳ್ಳಿ ಮಿಲ್ಲರ್ಸ್ ರಸ್ತೆ ಕೆಳಸೇತುವೆಯಲ್ಲಿ ನೀರು ನಿಂತಿರುವುದರಿಂದ ನಿಧಾನಗತಿಯ ಸಂಚಾರವಿದೆ.

ವಿಂಡ್ಸರ್ ಮ್ಯಾನರ್ ರೈಲ್ವೇ ಬ್ರಿಡ್ಜ್ ಸ್ಯಾಂಕಿ ರಸ್ತೆಯಲ್ಲಿ ನೀರು ನಿಂತಿರುವುದರಿಂದ, ಪಿಜಿ ಹಳ್ಳಿ ಕಡೆಗೆ ನಿಧಾನಗತಿಯ ಸಂಚಾರವಿದೆ ಎಂದು ಬೆಂಗಳೂರು ನಗರ ಸಂಚಾರಿ ಪೊಲೀಸರು ತಿಳಿಸಿದ್ದಾರೆ. ಯಾವುದೇ ತುರ್ತು ಸಮಯದಲ್ಲಿ ತಕ್ಷಣದ ಸಹಾಯಕ್ಕಾಗಿ 112ಗೆ ಕರೆ ಮಾಡಿ ಎಂದು ಮನವಿ ಮಾಡಿದ್ದಾರೆ.

**ಅಂಗನವಾಡಿ, ಶಾಲೆಗಳಿಗೆ ಇಂದು ರಜೆ:** ಬೆಂಗಳೂರು ನಗರದಾದ್ಯಂತ ಭಾನುವಾರ ರಾತ್ರಿ ಹಾಗೂ ಸೋಮವಾರ ಬೆಳ್ಳಂಬೆಳಗ್ಗೆಯೇ ಗುಡುಗು ಸಹಿತ ಭಾರಿ ಮಳೆ ಸುರಿದಿದೆ. ಹೀಗಾಗಿ ನಗರದ ಅಂಗನವಾಡಿ ಹಾಗೂ ಶಾಲೆಗಳಿಗೆ ಇಂದು (ಅ. 21, ಸೋಮವಾರ) ರಜೆ ಘೋಷಣೆ ಮಾಡಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.

**ಯಾರಿಗೆಲ್ಲ ರಜೆ:** ಅಂಗನವಾಡಿ, ಎಲ್ ಕೆಜಿ, ಯುಕೆಜಿ, ಶಾಲೆಗಳಿಗೆ ರಜೆ ಘೋಷಣೆ ಮಾಡಲಾಗಿದೆ. ಸರ್ಕಾರಿ, ಖಾಸಗಿ ಪ್ರಾಥಮಿಕ, ಪ್ರೌಢಶಾಲೆ, ಅನುದಾನಿತ ಶಾಲೆ, ಅನುದಾನ ರಹಿತ ಶಾಲೆ ಸೇರಿ ನಗರದ ಎಲ್ಲ ಶಾಲೆಗಳಿಗೆ ರಜೆ ಘೋಷಿಸಿ ಬೆಂಗಳೂರು ನಗರ ಜಿಲ್ಲಾಧಿಕಾರಿ ಜಗದೀಶ್ ಆದೇಶ ಹೊರಡಿಸಿದ್ದಾರೆ. ಇಂದು ಒಂದು ದಿನದ ಮಟ್ಟಿಗೆ ಈ ಆದೇಶ ಅನ್ವಯವಾಗಲಿದೆ. ಭಾರಿ ಮಳೆ ಹಿನ್ನೆಲೆ ಮುನ್ನೆಚ್ಚರಿಕಾ ಕ್ರಮವಾಗಿ ಈ ನಿರ್ಧಾರ ಪ್ರಕಟಿಸಲಾಗಿದೆ.

**ಶಿಥಿಲ ಕಟ್ಟಡಗಳನ್ನು ಪಾಠ, ಪ್ರವಚನಕ್ಕೆ ಬಳಸುವಂತಿಲ್ಲ:** ಕಾಲೇಜುಗಳ ಕಟ್ಟಡಗಳು ದುರ್ಬಲವಾಗಿದ್ದಲ್ಲಿ, ಶಿಥಿಲ ಕಟ್ಟಡಗಳು ಇದ್ದಲ್ಲಿ ಅಂತಹ ಕಟ್ಟಡಗಳನ್ನು ಪಾಠ ಪ್ರವಚನಗಳಿಗೆ ಬಳಸುವಂತಿಲ್ಲ ಎಂದೂ ಆದೇಶದಲ್ಲಿ ತಿಳಿಸಲಾಗಿದೆ.

ಮುಂಜಾಗ್ರತಾ ಕ್ರಮವಾಗಿ ರಜೆಯನ್ನು ನೀಡಿದ್ದರಿಂದ ಕಲಿಕಾ ಸಮಯ ಕೊರತೆಯನ್ನು ಶನಿವಾರ ಮಧ್ಯಾಹ್ನ ಅಥವಾ ಭಾನುವಾರ ಹೆಚ್ಚುವರಿ ತರಗತಿ ನಡೆಸಲು ಸೂಚನೆ ನೀಡಲಾಗಿದೆ. ವಿದ್ಯಾರ್ಥಿಗಳ ಪೋಷಕರು, ಕಾಲೇಜು ಮುಖ್ಯಸ್ಥರು, ವಿದ್ಯಾರ್ಥಿಗಳು ನೀರು ಇರುವ ತಗ್ಗು ಪ್ರದೇಶಗಳಿಗೆ ಹೋಗದಂತೆ ಜಾಗ್ರತೆ ವಹಿಸಬೇಕು. ವಿದ್ಯಾರ್ಥಿಗಳು ಕಾಲೇಜುಗಳಿಗೆ ಹೋಗುವ ವಾಹನಗಳ ಸುರಕ್ಷತೆಯನ್ನು ನೋಡಿಕೊಳ್ಳಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.

**ಬಿಬಿಎಂಪಿ ಮುನ್ನೆಚ್ಚರಿಕೆ ಸಂದೇಶ:** ಭಾರಿ ಮಳೆಯಾಗುತ್ತಿರುವ ಮತ್ತು ಮಳೆಯ ಮುನ್ಸೂಚನೆ ಇರುವುದರಿಂದ ಬೆಂಗಳೂರು ಜನತೆಗೆ ಬಿಬಿಎಂಪಿ ಹಲವು ಮುನ್ನೆಚ್ಚರಿಕೆ ಕ್ರಮ ವಹಿಸುವಂತೆ ಸಲಹೆ ನೀಡಿದೆ. ಈ ವಿಚಾರವಾಗಿ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂದೇಶ ಪ್ರಕಟಿಸಿ ಮಾಹಿತಿ ನೀಡಿದೆ.

ಚಂಡಮಾರುತ: ಬೆಂಗಳೂರು ಸೇರಿ ಕರ್ನಾಟಕದ 25 ಜಿಲ್ಲೆಗಳಲ್ಲಿ ಧಾರಾಕಾರ ಮಳೆ

ಚಂಡಮಾರುತದ ಪರಿಣಾಮ ಕರ್ನಾಟಕದ ಮೇಲೂ ಬೀಳುವ ಸಾಧ್ಯತೆ ಇದ್ದು, ಬೆಂಗಳೂರು ಸೇರಿ ರಾಜ್ಯದ 25 ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ಶಿವಮೊಗ್ಗ, ತುಮಕೂರು ಜಿಲ್ಲೆಗಳಿಗೆ ಯೆಲ್ಲೋ, ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಶಿವಮೊಗ್ಗ, ಮಾಗಡಿ, ಹೊಸಕೋಟೆ, ಎನ್ ಆರ್ ಪುರ, ತರೀಕೆರೆ, ಭದ್ರಾವತಿ, ಔರಾದ್, ಚಿಕ್ಕಬಳ್ಳಾಪುರ, ಬೆಂಗಳೂರು, ಮಂಗಳೂರು, ಕಡೂರು, ಕೋಲಾರ, ಕುಣಿಗಲ್, ಕೊಪ್ಪ, ಎಲೆಕ್ಟ್ರಾನಿಕ್ ಸಿಟಿ, ಶ್ರವಣಬೆಳಗೊಳ, ಕಾರ್ಕಳ, ಕೊಟ್ಟಿಗೆಹಾರ, ಲೋಕಾಪುರ, ಲಿಂಗನಮಕ್ಕಿ, ಅಜ್ಜಂಪುರ, ಹುಣಸೂರು, ಚಿಂತಾಮಣಿಯಲ್ಲಿ ಮಳೆಯಾಗಿದೆ.

ಕೃಷ್ಣರಾಜಪೇಟೆ, ತಾವರಗೇರಾ, ಹುಮನಾಬಾದ್, ಕಮ್ಮರಡಿ, ಸಿದ್ದಾಪುರ, ಉಡುಪಿ, ಕಿರವತ್ತಿ, ತ್ಯಾಗರ್ತಿ, ಹೊನ್ನಾಳಿ, ಹೆಸರಘಟ್ಟ, ನಾಗಮಂಗಲ, ದಾವಣಗೆರೆ, ರಾಮನಗರ, ಪೊನ್ನಂಪೇಟೆ, ಕಳಸ, ಮಾಣಿ, ಶಿರಹಟ್ಟಿ, ಖಜೂರಿಯಲ್ಲಿ ಮಳೆಯಾಗಿದೆ. ಕಲಬುರಗಿಯಲ್ಲಿ 33.1ಡಿಗ್ರಿ ಸೆಲ್ಸಿಯಸ್ ಅತ್ಯಂತ ಗರಿಷ್ಠ ಉಷ್ಣಾಂಶ, 18.4 ಡಿಗ್ರಿ ಸೆಲ್ಸಿಯಸ್ ಅತ್ಯಂತ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

## 7 ಮಂದಿ ಸಾವು

ಈ ಸುರಂಗ ಮಾರ್ಗವು ಗಗನೀರ್ ನಿಂದ ಮಧ್ಯ ಕಾಶ್ಮೀರದ ಗಂದರ್ಬಾಲ್ ಜಿಲ್ಲೆಯ ಸೋನಾಮಾರ್ಗ್‌ಗೆ ಸಂಪರ್ಕಿಸುತ್ತದೆ.

ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ, ಒಮರ್ ಅಬ್ದುಲ್ಲಾ ಅವರು ಸಂತಾಪ ವ್ಯಕ್ತಪಡಿಸಿದ್ದು, ಅಮಾಯಕ ಕಾರ್ಮಿಕರ ಮೇಲೆ ಹೇಡಿತನದ ದಾಳಿ ಎಂದು ಕರೆದಿದ್ದಾರೆ.

### ಮೊದಲನೇ ಪುಟದಿಂದ...

ಜಮ್ಮು ಮತ್ತು ಕಾಶ್ಮೀರದ ಗಗಂಗೀರ್‌ನಲ್ಲಿ ನಾಗರಿಕರ ಮೇಲೆ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಇದು ಹೇಡಿತನದ ಭೀಕರ ಕೃತ್ಯ ಎಂದು ಬಣ್ಣಿಸಿದ್ದಾರೆ. ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ, ಈ ಘಟನೆಗೆ ಕಾರಣರಾದವರನ್ನು ಸುಮ್ಮನೆ ಬಿಡುವುದಿಲ್ಲ ಎಂದು ಭರವಸೆ ನೀಡಿದರು.

## ಕಾರ್ಯಾಚರಣೆಗೆ ಸಿದ್ದ

ಈ ಬಗ್ಗೆ ಐಟಿ ನೌಕರ ಸಜ್ಜನ್ ರೆಡ್ಡಿ ಪ್ರತಿಕ್ರಿಯಿಸಿದ್ದು, ಮಾದಾವರದಿಂದ ನಾಗಸಂದ್ರಕ್ಕೆ ಹೋಗಿ ಅಲ್ಲಿಂದ ಆಫೀಸಿಗೆ ಹೋಗಬೇಕಿತ್ತು. ಮೆಟ್ರೋ ಆರಂಭವಾದರೆ ಸಮಯ ಮತ್ತು ಹಣ ಉಳಿತಾಯ ಆಗಲಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

**ಯಾವ ಪ್ರದೇಶದವರಿಗೆಲ್ಲ ಪ್ರಯೋಜನ:** ಏಷ್ಯಾದ ಅತಿ ದೊಡ್ಡ ಪ್ರದರ್ಶನ ಆಯೋಜಿಸುವ ಬೆಂಗಳೂರು ಇಂಟರ್ ನ್ಯಾಷನಲ್ ಎಕ್ಸಿಬಿಷನ್ ಸೆಂಟರ್ ಬಲಭಾಗಕ್ಕೆ ಚಿಕ್ಕ ಬಿದರಕಲ್ಲು ನಿಲ್ದಾಣವಿದೆ. ಈ ಮಾರ್ಗ ಪೂರ್ಣಗೊಳ್ಳುವುದರಿಂದ ನೆಲಮಂಗಲ, ಮಾದನಾಯಕನಹಳ್ಳಿ, ಮಾಕಳಿ ನಿವಾಸಿಗಳಿಗೆ, ನಾಗಸಂದ್ರ-ಮಾದಾವರ ಮಾರ್ಗದ ಮೂರು ನಿಲ್ದಾಣಗಳ ಸಮೀಪದ ಅಪಾರ್ಟ್‌ಮೆಂಟ್‌ಗಳ ನಿವಾಸಿಗಳು ಮತ್ತು ಸುತ್ತ ಮುತ್ತಲಿನ ನಿವಾಸಿಗಳಿಗೆ ಸಹಾಯ ಆಗಲಿದೆ.

**ಕೇಂದ್ರ ಸರ್ಕಾರದ ಅನುಮತಿಷ್ಟೇ ಬಾಕಿ:** ಈಗಾಗಲೇ ಮೂರು ಮೆಟ್ರೋ ಸ್ಟೇಷನ್ ಗಳು ಉದ್ಘಾಟನೆಗೆ ಸಿದ್ದವಾಗಿದ್ದು ಸಿವಿಲ್, ಪೇಂಟಿಂಗ್, ಸ್ಟೇಷನ್ ಕೆಲಸ ಸೇರಿದಂತೆ ಎಲ್ಲವೂ ಮುಗಿದಿದೆ. ಕೇಂದ್ರ ಸರ್ಕಾರದ ಅನುಮತಿಗಾಗಿ ಕಾಯಲಾಗುತ್ತಿದೆ. ಕೇಂದ್ರ ಸರ್ಕಾರ ಗ್ರೀನ್ ಕೊಟ್ಟದ್ದೇ ಆದಲ್ಲಿ ಈ ಮಾರ್ಗದಲ್ಲಿ ಮೆಟ್ರೋ ರೈಲು ಸಂಚಾರ ಮಾಡಲಿದೆ.

ಒಟ್ಟಿನಲ್ಲಿ ಈ ಮಾರ್ಗದ ಮೆಟ್ರೋಗೆ ಈಗಾಗಲೇ ರೈಲ್ವೆ ಸುರಕ್ಷತಾ ಆಯುಕ್ತರು ಅನುಮತಿ ನೀಡಿದ್ದಾರೆ. ಆದರೆ, ರಾಜ್ಯ ಸರ್ಕಾರ ಕೇಂದ್ರದ ಅನುಮತಿಗೆ ಪತ್ರ ಬರೆದಿದ್ದು, ಗ್ರೀನ್ ಸಿಗ್ನಲ್ ಗಾಗಿ ಕಾಯುತ್ತಿದೆ. ಕೇಂದ್ರ ಸರ್ಕಾರ ಶೀಘ್ರದಲ್ಲೇ ಗ್ರೀನ್ ಸಿಗ್ನಲ್ ಕೊಡುವ ನಿರೀಕ್ಷೆ ಇದ್ದು, ಈ ಮಾರ್ಗದಲ್ಲಿ ಮೆಟ್ರೋ ಸಂಚಾರ ಆರಂಭವಾಗುವುದು ಖಚಿತವಾಗಿದೆ.

## ಸಿಜೆಐ ಚಂದ್ರಚೂಡ್

ಅಯೋಧ್ಯೆಯಲ್ಲಿಯೇ ಪರ್ಯಾಯ ಐದು ಎಕರೆ ಜಾಗದಲ್ಲಿ ಮಸೀದಿ ನಿರ್ಮಿಸಲಾಗುವುದು ಎಂದು ಪೀಠವು ತೀರ್ಪು ನೀಡಿತ್ತು. ಸಿಜೆಐ ಚಂದ್ರಚೂಡ್ ಅವರು ಐತಿಹಾಸಿಕ ತೀರ್ಪು ನೀಡಿದ ಪೀಠದ ಭಾಗವಾಗಿದ್ದರು.

ಈ ವರ್ಷ ಜುಲೈನಲ್ಲಿ ಸಿಜೆಐ ಅಯೋಧ್ಯೆಯ ರಾಮ ಮಂದಿರಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದ್ದರು. ಈ ವರ್ಷದ ಜನವರಿಯಲ್ಲಿ ರಾಮಮಂದಿರದಲ್ಲಿ ರಾಮಲಲ್ಲಾನ ಪ್ರತಿಷ್ಠಾಪನೆ ಕಾರ್ಯಕ್ರಮ ನಡೆದಿದ್ದು, ಪ್ರಧಾನಿ ಮೋದಿ, ಸಿಎಂ ಯೋಗಿ ಆದಿತ್ಯನಾಥ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ರಾಮ ಜನ್ಮಭೂಮಿ-ಬಾಬ್ರಿ ಮಸೀದಿ ವಿವಾದವು 16 ನೇ ಶತಮಾನದ ಮೊಘಲ್ ಮಸೀದಿಯನ್ನು ರಾಮನ ಜನ್ಮಸ್ಥಳವೆಂದು ಹೇಳಲಾಗುವ ಸ್ಥಳದಲ್ಲಿ ದೇವಾಲಯವನ್ನು ಕೆಡವಿ ನಿರ್ಮಿಸಲಾಗಿದೆಯೇ ಎಂಬ ಬಗ್ಗೆ ದೀರ್ಘಕಾಲದ ಕಾನೂನು ಮತ್ತು ರಾಜಕೀಯ ಸಮಸ್ಯೆಯಾಗಿತ್ತು.

ನವೆಂಬರ್ 9, 2019 ರಂದು, ಆಗಿನ ಮುಖ್ಯ ನ್ಯಾಯಮೂರ್ತಿ ರಂಜನ್ ಗೊಗೊಯ್ ಮತ್ತು ನ್ಯಾಯಮೂರ್ತಿ ಚಂದ್ರಚೂಡ್ ಅವರ ನೇತೃತ್ವದ ಐದು ನ್ಯಾಯಮೂರ್ತಿಗಳ ಸುಪ್ರೀಂ ಕೋರ್ಟ್ ಪೀಠವು ತನ್ನ ತೀರ್ಪಿನ ಮೂಲಕ ವಿವಾದವನ್ನು ಪರಿಹರಿಸಿತು. ಈ ವರ್ಷದ ಜನವರಿ 22 ರಂದು ಪ್ರಧಾನಿ ನರೇಂದ್ರ ಮೋದಿಯವರ ಸಮ್ಮುಖದಲ್ಲಿ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮ ನಡೆಯಿತು.

## ಖಡಕ್ ಸೂಚನೆ

**ಪಡಿತರ ಚೀಟಿ ಹೊಂದಲು ಯಾರು ಅನರ್ಹರು:** ಸರ್ಕಾರ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳಿಂದ ವೇತನ ಪಡೆಯುತ್ತಿರುವವರು ಪಡಿತರ ಚೀಟಿ ಹೊಂದಲು ಅನರ್ಹರು.

ಆದಾಯ ತೆರಿಗೆ, ಸೇವಾ ತೆರಿಗೆ, ವ್ಯಾಟ್, ವೃತ್ತಿ ತೆರಿಗೆ ಪಾವತಿಸುವವರು ಪಡಿತರ ಚೀಟಿ ಹೊಂದಲು ಅನರ್ಹರು.

ಗ್ರಾಮೀಣ ಪ್ರದೇಶದಲ್ಲಿ ಮೂರು ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ, ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು ಪಡಿತರ ಚೀಟಿ ಹೊಂದಲು ಅನರ್ಹ.

ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರ್ಯಾಕ್ಟರ್ , ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ, ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು ಪಡಿತರ ಚೀಟಿ ಹೊಂದಲು ಅನರ್ಹ.

ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು ಪಡಿತರ ಚೀಟಿ ಹೊಂದಲು ಅನರ್ಹ.

ಸರ್ಕಾರ ನಿಗದಿಪಡಿಸಿರುವ ಈ ಮಾನದಂಡಗಳಿಗೆ ವಿರುದ್ದವಾಗಿ ಅಂತ್ಯೋದಯ ಅಥವಾ ಆದ್ಯತಾ (ಬಿಪಿಎಲ್) ಪಡಿತರ ಚೀಟಿ ಹೊಂದಿರುವವರು ತಕ್ಷಣವೆ ತಾಲೂಕು ಕಚೇರಿಯ ಆಹಾರ ಶಾಖೆಗೆ ಪಡಿತರ ಚೀಟಿಯನ್ನು ಒಪ್ಪಿಸುವಂತೆ ಸರ್ಕಾರ ಮಾಧ್ಯಮ ಪ್ರಕಟಣೆ ಹೊಡಿಸಿದೆ.

ಅಕ್ರಮ ಪಡಿತರ ಚೀಟಿ ಹೊಂದಿರುವವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955 ಮತ್ತು ಕರ್ನಾಟಕ ಅನಧಿಕೃತ ಪಡಿತರ ಚೀಟಿ ಹೊಂದುವುದರ ತಡೆ ಆದೇಶ 1977ರ ಹಾಗೂ ಐ.ಪಿ.ಸಿ. ಕಲಂಗಳಡಿಯಲ್ಲಿ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದೆ.

## ಸಿಬಿಐ

ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣದ ಸಿಬಿಐ ತನಿಖೆಯನ್ನು ವಾಪಸ್ ಪಡೆಯುವ ಕರ್ನಾಟಕ ಸರ್ಕಾರದ ನಿರ್ಧಾರ ಪ್ರಶ್ನಿಸಿ ಕೇಂದ್ರ ತನಿಖಾ ಸಂಸ್ಥೆ ಸುಪ್ರೀಂ ಕೋರ್ಟ್ ಗೆ ಅರ್ಜಿ ಸಲ್ಲಿಸಿದೆ. ಈ ಹಿಂದೆ ಸರ್ಕಾರದ ನಿರ್ಧಾರ ಪ್ರಶ್ನಿಸಿದ್ದ ಬಸನಗೌಡ ಪಾಟೀಲ್ ಯತ್ನಾಳ್ ಅರ್ಜಿ ವಿಚಾರಣೆ ವೇಳೆ ಸುಪ್ರೀಂ ಕೋರ್ಟ್ ಸಿಬಿಐ ಅಭಿಪ್ರಾಯ ಕೇಳಿತ್ತು. ವಿಚಾರಣೆಯಲ್ಲಿ ಭಾಗಿಯಾಗುವ ಬಗ್ಗೆ ಅಭಿಪ್ರಾಯ ಕೇಳಿತ್ತು. ಹೀಗಾಗಿ ಸಿಬಿಐಯಿಂದಲೂ ಈಗ ಅರ್ಜಿ ಸಲ್ಲಿಕೆಯಾಗಿದೆ.

**ಪ್ರಕರಣದ ಹಿನ್ನೆಲೆ:** ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿರುದ್ಧದ ಆದಾಯ ಮೀರಿ ಆಸ್ತಿ ಗಳಿಕೆ ಆರೋಪ ಸಂಬಂಧ ಕರ್ನಾಟಕದ ಹಿಂದಿನ ಬಿಜೆಪಿ ಸರ್ಕಾರ ಸಿಬಿಐ ತನಿಖೆಗೆ ಆದೇಶಿಸಿತ್ತು. ಅದರಂತೆ ಪ್ರಕರಣದ ತನಿಖೆಯನ್ನು ಸಿಬಿಐ ಕೈಗೆತ್ತಿಕೊಂಡಿತ್ತು. ಆದರೆ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ಬೆನ್ನಲ್ಲೇ ಸಿಬಿಐ ತನಿಖೆ ಆದೇಶ ವಾಪಸ್ ಪಡೆಯುವ ನಿರ್ಧಾರ ಕೈಗೊಳ್ಳಲಾಯಿತು. ಆ ಬಗ್ಗೆ ಸಚಿವ ಸಂಪುಟ ನಿರ್ಣಯ ಕೈಗೊಂಡಿತು.

**ಕರ್ನಾಟಕ ಹೈಕೋರ್ಟ್ ಮೆಟ್ಟಿಲೇರಿದ್ದ ಸಿಬಿಐ:** ಕರ್ನಾಟಕ ಕಾಂಗ್ರೆಸ್ ಸರ್ಕಾರದ ನಿರ್ಧಾರ ಪ್ರಶ್ನಿಸಿ ಸಿಬಿಐ ಹೈಕೋರ್ಟ್ ನಲ್ಲಿ ಅರ್ಜಿ ಸಲ್ಲಿಸಿತ್ತು. ಅರ್ಜಿಯ ವಿಚಾರಣೆ ನಡೆಸಿದ್ದ ಹೈಕೋರ್ಟ್, ಈ ಬಗ್ಗೆ ಸುಪ್ರೀಂ ಕೋರ್ಟ್ ನಿರ್ಧರಿಸಲಿ. ಸುಪ್ರೀಂ ಕೋರ್ಟ್ ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಅರ್ಜಿ ವಜಾಗೊಳಿಸಿತ್ತು.

ಏತನ್ಮಧ್ಯೆ, ಅಕ್ರಮ ಆಸ್ತಿ ಗಳಿಕೆ ಪ್ರಕರಣ ಸಂಬಂಧ ಡಿಕೆ ಶಿವಕುಮಾರ್ ವಿರುದ್ಧದ ಸಿಬಿಐ ಪ್ರಕರಣ ಹಿಂಪಡೆಯುವ ಸರ್ಕಾರದ ನಿರ್ಧಾರ ಪ್ರಶ್ನಿಸಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯನ್ನು ಆಗಸ್ಟ್ 29 ರಂದು ಹೈಕೋರ್ಟ್ ತಿರಸ್ಕರಿಸಿತ್ತು. ಅಲ್ಲದೆ, ರಾಜ್ಯ ಸರ್ಕಾರ ಮತ್ತು ಸಿಬಿಐ ನಡುವಿನ ಪ್ರಕರಣವನ್ನು ಸುಪ್ರೀಂಕೋರ್ಟ್ ತೀರ್ಮಾನಿಸಲಿ ಎಂದು ಅಭಿಪ್ರಾಯಪಟ್ಟಿತ್ತು.

**ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದ ಯತ್ನಾಳ್:** ಹೈಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಬಸನಗೌಡ ಪಾಟೀಲ್ ಯತ್ನಾಳ್ ಸುಪ್ರೀಂ ಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ್ದ ಸರ್ವೋಚ್ಚ ನ್ಯಾಯಾಲಯ, ಕಳೆದ ತಿಂಗಳು (ಸೆಪ್ಟೆಂಬರ್ ) ರಾಜ್ಯ ಸರ್ಕಾರಕ್ಕೆ ನೋಟಿಸ್ ನೀಡಿತ್ತು.

ಪ್ರಕರಣದ ವಿಚಾರಣೆ ನಡೆಸಿದ್ದ ಸುಪ್ರೀಂ ಕೋರ್ಟ್ , ರಾಜ್ಯ ಸರ್ಕಾರ ಮತ್ತು ಲೋಕಾಯುಕ್ತಗೆ ನೋಟಿಸ್ ನೀಡಿ ಸೆಪ್ಟೆಂಬರ್ 17ರಂದು ಆದೇಶ ಹೊರಡಿಸಿತ್ತು. ಪ್ರತಿವಾದಿಗಳಿಗೆ ನೋಟಿಸ್ ನೀಡಿದ್ದರ ಜತೆಗೆ ಸಿಬಿಐ ಅಭಿಪ್ರಾಯವನ್ನೂ ಕೋರಿತ್ತು. ನಂತರ ವಿಚಾರಣೆಯನ್ನು ನಾಲ್ಕು ವಾರಗಳ ಕಾಲ ಮುಂದೂಡಿತ್ತು.

## ರೈಲು

ಎಸ್‌ಎಂವಿಟಿ ಬೆಂಗಳೂರು ಎಕ್ಸ್‌ಪ್ರೆಸ್ ವೇಳಾಪಟ್ಟಿ

- ರೈಲು ಸಂಖ್ಯೆ 06597 / 06598 ಎಸ್‌ಎಂವಿಟಿ ಬೆಂಗಳೂರು ಕಾರವಾರ, ಎಸ್‌ಎಂವಿಟಿ ಬೆಂಗಳೂರು ಎಕ್ಸ್‌ಪ್ರೆಸ್ ಸ್ಪೆಷಲ್ ವಿವರಗಳು ಈ ಕೆಳಗಿನಂತಿವೆ;
- ರೈಲು ಸಂಖ್ಯೆ 06597 ಅಕ್ಟೋಬರ್ 30 ರಂದು ಮಧ್ಯಾಹ್ನ 1 ಗಂಟೆಗೆ ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್, ಬೆಂಗಳೂರು ನಿಲ್ದಾಣದಿಂದ ಹೊರಟು ಮರುದಿನ ಬೆಳಿಗ್ಗೆ 4 ಗಂಟೆಗೆ ಕಾರವಾರ ನಿಲ್ದಾಣವನ್ನು ತಲುಪಲಿದೆ.
- ರೈಲು ಸಂಖ್ಯೆ 06598 ಅಕ್ಟೋಬರ್ 31 ರಂದು ಮಧ್ಯಾಹ್ನ 12 ಗಂಟೆಗೆ ಕಾರವಾರ ನಿಲ್ದಾಣದಿಂದ ಹೊರಟು ಮರುದಿನ ಬೆಳಿಗ್ಗೆ 4 ಗಂಟೆಗೆ ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್, ಬೆಂಗಳೂರು ನಿಲ್ದಾಣವನ್ನು ತಲುಪಲಿದೆ.

ಎಲ್ಲೆಲ್ಲಿ ನಿಲುಗಡೆ: ಈ ವಿಶೇಷ ರೈಲು ಚಿಕ್ಕಬಣಾವರ, ಕುಣಿಗಲ್, ಚನ್ನರಾಯಪಟ್ಟಣ, ಹಾಸನ, ಸಕಲೇಶಪುರ, ಸುಬ್ರಮಣ್ಯ ರೋಡ್, ಕಬಕ ಪುತ್ತೂರು, ಬಂಟ್ವಾಳ, ಸುರತ್ಕಲ್, ಮುಲ್ಕಿ, ಉಡುಪಿ, ಬರ್ಕೂರು, ಕುಂದಾಪುರ, ಬೈಂದೂರು, ಭಟ್ಕಳ, ಮುರುಡೇಶ್ವರ, ಹೊನ್ನಾವರ, ಕುಮಟಾ, ಗೋಕರ್ಣ ರೋಡ್ ಮತ್ತು ಅಂಕೋಲಗಳಲ್ಲಿ ನಿಲುಗಡೆ ಹೊಂದಿರಲಿದೆ.

ಈ ರೈಲಿನಲ್ಲಿ 4 ಜನರಲ್ ಸೆಕೆಂಡ್ ಕ್ಲಾಸ್ ಬೋಗಿಗಳು, 10 ಸ್ಲೀಪರ್ ಕ್ಲಾಸ್ ಬೋಗಿಗಳು, 2 ಎಸಿ 3 ಟಯರ್ ಬೋಗಿಗಳು ಮತ್ತು 2 ಸೆಕೆಂಡ್ ಕ್ಲಾಸ್ ಲಗೇಜ್/ಬ್ರೇಕ್ ವ್ಯಾನ್ಸ್ ಮತ್ತು ಅಂಗವಿಕಲರ ಬೋಗಿಗಳು ಸೇರಿದಂತೆ ಒಟ್ಟು 12 ಬೋಗಿಗಳು ಇರಲಿವೆ.

ಯಶವಂತಪುರ ಎಕ್ಸ್‌ಪ್ರೆಸ್ ಸ್ಪೆಷಲ್ ವೇಳಾಪಟ್ಟಿ: ಯಶವಂತಪುರ ಮಂಗಳೂರು ಮಧ್ಯೆ ಸಂಚರಿಸುವ ಯಶವಂತಪುರ ಎಕ್ಸ್‌ಪ್ರೆಸ್ ಸ್ಪೆಷಲ್ 06565 / 06566 ವಿವರಗಳು ಹೀಗಿವೆ;

ರೈಲು ಸಂಖ್ಯೆ 06565 ಅಕ್ಟೋಬರ್ 30 ರಂದು ರಾತ್ರಿ 11.50ಕ್ಕೆ ಯಶವಂತಪುರ ನಿಲ್ದಾಣದಿಂದ ಹೊರಟು ಮರುದಿನ ಬೆಳಿಗ್ಗೆ 11.45 ಕ್ಕೆ ಮಂಗಳೂರು ಜಂಕ್ಷನ್ ನಿಲ್ದಾಣವನ್ನು ತಲುಪಲಿದೆ.

ರೈಲು ಸಂಖ್ಯೆ 06566 ಅಕ್ಟೋಬರ್ 31 ರಂದು ಮಧ್ಯಾಹ್ನ 1 ಗಂಟೆಗೆ ಮಂಗಳೂರು ಜಂಕ್ಷನ್ ನಿಲ್ದಾಣದಿಂದ ಹೊರಟು ರಾತ್ರಿ 9:15 ಗಂಟೆಗೆ ಯಶವಂತಪುರ ನಿಲ್ದಾಣವನ್ನು ತಲುಪಲಿದೆ.

ಎಲ್ಲೆಲ್ಲಿ ನಿಲುಗಡೆ: ಕುಣಿಗಲ್, ಚನ್ನರಾಯಪಟ್ಟಣ, ಹಾಸನ, ಸಕಲೇಶಪುರ, ಸುಬ್ರಮಣ್ಯ ರೋಡ್, ಕಬಕಪುತ್ತೂರು ಮತ್ತು ಬಂಟ್ವಾಳಗಳಲ್ಲಿ ನಿಲುಗಡೆ ಹೊಂದಿರಲಿದೆ.

ಈ ರೈಲು 4 ಜನರಲ್ ಸೆಕೆಂಡ್ ಕ್ಲಾಸ್ ಬೋಗಿಗಳು, 7 ಸ್ಲೀಪರ್ ಕ್ಲಾಸ್ ಬೋಗಿಗಳು, 6 ಎಸಿ 3 ಟಯರ್ ಬೋಗಿಗಳು, 2 ಎಸಿ ಟೂ-ಟಯರ್ ಬೋಗಿಗಳು ಮತ್ತು 2 ಲಗೇಜ್/ಬ್ರೇಕ್ ವ್ಯಾನ್ಸ್ ಕಮ್ ಜೆನರೇಟರ್ ಕಾರ್ ಸೇರಿದಂತೆ ಒಟ್ಟು 21 ಬೋಗಿಗಳನ್ನು ಹೊಂದಿರಲಿದೆ.

ಪ್ರಯಾಣಿಕರು ರೈಲಿನ ಸಮಯ ಹಾಗೂ ಇತರ ವಿವರಗಳನ್ನು ಅಧಿಕೃತ ವೆಬ್‌ಸೈಟ್ ಆದ www.enquiry.Indianrail.gov.in ಇದರಲ್ಲಿ ಪರಿಶೀಲಿಸಬಹುದು. ಅಥವಾ NTES ಆ ಯಪ್ ಮೂಲಕ ಅಥವಾ 139 ಕ್ಕೆ ಕರೆಮಾಡುವುದರ ಮೂಲಕ ತಿಳಿದುಕೊಳ್ಳಬಹುದು ಎಂದು ನೈಋತ್ಯ ರೈಲ್ವೆ ತಿಳಿಸಿದೆ.

# ನವೆಂಬರ್ 1ರ ಕನ್ನಡ ರಾಜ್ಯೋತ್ಸವ ಆಚರಣೆಗೆ ಸಿದ್ಧತೆ

**ಚಿಕ್ಕಬಳ್ಳಾಪುರ:** ಈ ಬಾರಿಯ ನವೆಂಬರ್ 1 ರಂದು ನಡೆಯುವ ಜಿಲ್ಲಾ ಮಟ್ಟದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ನಗರದ ಸರ್.ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಸಂಭ್ರಮ ಸಡಗರದೊಂದಿಗೆ ರಾಷ್ಟ್ರೀಯ ಹಬ್ಬಗಳ ಮಾದರಿಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ತಿಳಿಸಿದರು.

ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕನ್ನಡ ರಾಜ್ಯೋತ್ಸವ ದಿನಾಚರಣೆಯ ಕುರಿತು ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು, ಸದಸ್ಯರು, ಸಾಹಿತಿಗಳ ಸಲಹೆ ಸೂಚನೆಗಳನ್ನು ಆಲಿಸಿ ಮಾತನಾಡಿದರು. ಈ ಬಾರಿ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲು ನಿರ್ಧರಿಸಲಾಗಿದ್ದು, ಅಂದು ವೇದಿಕೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ, ನಾಡಗೀತೆ, ವಿದ್ಯಾರ್ಥಿಗಳಿಂದ ಸಮೂಹ ಗೀತ ಗಾಯನ ಮತ್ತು ನೃತ್ಯ, ಗೌರವ ವಂದನೆ, ಸಾಧಕರಿಗೆ ಸನ್ಮಾನ, ಪೊಲೀಸ್ ಕವಾಯತು ಕಾರ್ಯಕ್ರಮಗಳನ್ನು ಎಂದಿನಂತೆಯೇ ಆಯೋಜಿಸಲಾಗುವುದು. ಅಲ್ಲದೆ ನಗರದ ಉಪವಿಭಾಗಾಧಿಕಾರಿ ಕಚೇರಿಯಿಂದ ಬಿ.ಬಿ.ರಸ್ತೆಯ ಮೂಲಕ ಕ್ರೀಡಾಂಗಣದವರೆಗೆ ಸ್ತಬ್ಧ ಚಿತ್ರಗಳು ಹಾಗೂ ವಿವಿಧ ಕಲಾ ತಂಡಗಳೊಂದಿಗೆ ಅದ್ದೂರಿ ಮೆರವಣಿಗೆ ನಡೆಸಲಾಗುವುದು. ಸ್ಥಳೀಯ ಸಾಹಿತಿಗಳನ್ನು ಒಳಗೊಂಡಂತೆ ಪ್ರಮುಖ ಕನ್ನಡ ಸಾಹಿತಿಗಳ ಛಾಯಾಚಿತ್ರಗಳನ್ನು ಹಾಗೂ ಅವರ ಸಂದೇಶಗಳ ಫಲಕಗಳನ್ನು (ಫ್ಲೆಕ್ಸ್) ನಗರದ ಪ್ರಮುಖ ವೃತ್ತಗಳಲ್ಲಿ ಅಳವಡಿಸಲು




ಸಭೆಯಲ್ಲಿ ನಿರ್ಧರಿಸಲಾಯಿತು. ವೇದಿಕೆ ಸಿದ್ಧತೆ, ಅಲಂಕಾರ, ಸರ್ಕಾರಿ ಕಚೇರಿಗಳಿಗೆ ದೀಪಾಲಂಕಾರ, ಆಸನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಆಹ್ವಾನ ಪತ್ರಿಕೆಗಳ ಮುದ್ರಣ ಮತ್ತು ವಿತರಣೆ, ಆಂಬುಲೆನ್ಸ್ ವ್ಯವಸ್ಥೆ, ಕಾರ್ಯಕ್ರಮ ನಿರ್ವಹಣೆ, ನಿರೂಪಣೆ, ಕ್ರೀಡಾಂಗಣ ಸ್ವಚ್ಛತೆ ಇನ್ನಿತರೆ ಸಿದ್ಧತಾ ಕಾರ್ಯಗಳನ್ನು ಸಂಬಂಧ ಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ಕಾರ್ಯ ಹಂಚಿಕೆ ಮಾಡಿ ಈ ಎಲ್ಲಾ ಕಾರ್ಯಗಳನ್ನು ಸಮರ್ಪಕವಾಗಿ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ರಾಜ್ಯೋತ್ಸವದ ಅಂಗವಾಗಿ ಕನ್ನಡ ಸಾಹಿತ್ಯ ಸೇರಿದಂತೆ ವಿವಿಧ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿದ ಜಿಲ್ಲೆಯ ಸಾಧಕರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಆದ್ದರಿಂದ ಕನ್ನಡ ಸಾಹಿತ್ಯ ಕಲೆ ಕ್ಷೇತ್ರಗಳಲ್ಲಿ ಹಾಗೂ ಕನ್ನಡಪರ ಚಟುವಟಿಕೆಗಳಲ್ಲಿ ಸಾಧನೆ ಗೈದಿರುವ ಸಾಧಕರು ಉಪವಿಭಾಗಾಧಿಕಾರಿ ಕಚೇರಿಗೆ ಅರ್ಜಿಯನ್ನು ಸಹ ಸಲ್ಲಿಸಬಹುದು. ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯ ಸಮಿತಿಯು ನಿರ್ಧರಿಸುವ ಸಾಧಕರಿಗೆ ಸನ್ಮಾನ ಮಾಡಲಾಗುವುದು. ಸರ್ಕಾರಿ ಕಚೇರಿಗಳು ಸೇರಿದಂತೆ, ಖಾಸಗಿ ಶಾಲಾ ಕಾಲೇಜುಗಳಲ್ಲಿ ಕನ್ನಡ ರಾಜ್ಯೋತ್ಸವನ್ನು ಆಚರಿಸುವಂತೆ ಸಂಬಂಧ ಪಟ್ಟ ಇಲಾಖೆಯ ಮುಖ್ಯಸ್ಥರಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮತ್ತು ವಿವಿಧ ಕನ್ನಡಪರ ಸಂಘಟನೆಗಳ ಮುಖ್ಯಸ್ಥರು ಹಾಗೂ ಪದಾಧಿಕಾರಿಗಳು ಕನ್ನಡ ರಾಜ್ಯೋತ್ಸವ ಆಚರಣೆಯ ಕುರಿತು ಸಲಹೆಗಳನ್ನು ಸಭೆಗೆ ನೀಡಿದರು. ನವೆಂಬರ್ 01 ರಂದು ನಡೆಯಲಿರುವ ಸಭಾ ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲಾ ಕನ್ನಡಪರ ಸಂಘಟನೆಗಳ ಮುಖ್ಯಸ್ಥರು ಹಾಗೂ ಪದಾಧಿಕಾರಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜಿಲ್ಲಾಧಿಕಾರಿಗಳು ಈ ವೇಳೆ ಆಹ್ವಾನ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್.ಭಾಸ್ಕರ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೋಡಿರಂಗಪ್ಪ, ನಿಕಟಪೂರ್ವ ಅಧ್ಯಕ್ಷ ಕೈವಾರ ಶ್ರೀನಿವಾಸ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಿ.ಎಂ. ರವಿಕುಮಾರ್, ಸಾಹಿತಿ ಗೋಪಾಲಗೌಡ ಕಲ್ವಮಂಜಲಿ, ಯಲುವಹಳ್ಳಿ ಸೊಣ್ಣೇಗೌಡ, ಮಂಚನಬಲೆ ಶ್ರೀನಿವಾಸ್, ಕನ್ನಡ ಪರ ಚಟುವಟಿಕೆಗಳಲ್ಲಿ ತೊಡಗಿಕೊಂಡಿರುವ ಸರಸಮ್ಮ, ವೆಂಕಟಾಚಲಪತಿ, ರವಿಕುಮಾರ್, ಉಷಾಶ್ರೀನಿವಾಸ್, ಕಸಾಪ ಸದಸ್ಯರು, ವಿವಿಧ ಕನ್ನಡಪರ ಸಂಘಟನೆಗಳ ಮುಖ್ಯಸ್ಥರು, ಸದಸ್ಯರು, ಪದಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

### ವಿಭು ಅಕಾಡೆಮಿ ಸಂಸ್ಥಾಪಕಿ ಡಾ.ವಿ. ಬಿ. ಆರತಿ ಹೇಳಿಕೆ

# ಪಂಚತಂತ್ರ ಕೇವಲ ಕಥೆಗಳಲ್ಲ, ಜೀವನ ಮೌಲ್ಯದ ಪಾಠಗಳು

**ಬೆಂಗಳೂರು:** ಪಂಚತಂತ್ರದ ಕಥೆಗಳು ಕೇವಲ ಕಥೆಗಳಲ್ಲ; ಅವು ಜೀವನ ಮೌಲ್ಯಗಳು. ಅವುಗಳನ್ನು ಜೀವನಕ್ಕೆ ಅನ್ವಯ ಮಾಡಿಕೊಂಡರೆ ಅನೇಕ ಸಮಸ್ಯೆಗಳಿಗೆ ಪರಿಹಾರ ದೊರಕುತ್ತದೆ. ಜೀವನದಲ್ಲಿ ಯಾವುದನ್ನು ಮಾಡಬೇಕು, ಯಾವುದನ್ನು ಮಾಡಬಾರದು, ಎಲ್ಲಿ ಹೇಗಿರಬೇಕು ಎಂಬ ಪ್ರಜ್ಞೆ ಬೆಳೆಯುತ್ತದೆ ಎಂದು ವಿಭು ಅಕಾಡೆಮಿ ಸಂಸ್ಥಾಪಕಿ ಡಾ.ವಿ. ಬಿ. ಆರತಿ ಅವರು ಭಾನುವಾರ ಹೇಳಿದರು.

ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಬೆಂಗಳೂರು ಮಹಾನಗರದಿಂದ ಆಯೋಜಿಸಿದ್ದ ಪ್ರೌಢಶಾಲಾ ಮಕ್ಕಳಿಗಾಗಿ ಪಂಚತಂತ್ರ ಕಥೆ ಹೇಳುವ ಸ್ಪರ್ಧೆಯ ವಿಜೇತರಿಗೆ ಎನ್. ಆರ್. ಕಾಲೋನಿಯ ಸಿ. ಅಶ್ವತ್ಥ್ ಕಲಾಭವನದಲ್ಲಿ ಆಯೋಜಿಸಿದ್ದ ಬಹುಮಾನ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಇಂದು ನಾವು ಪಡೆಯುತ್ತಿರುವ ಶಿಕ್ಷಣ ಭಾರತೀಯ ಶಿಕ್ಷಣವಲ್ಲ. ಇದು ಮೆಕಾಲೆ ಪದ್ಧತಿಯ ಶಿಕ್ಷಣ. ಭಾರತೀಯರಲ್ಲಿ ಗುಲಾಮಿ ಮನಃಸ್ಥಿತಿಯನ್ನು ನಿರ್ಮಿಸುವ ಉದ್ದೇಶದಿಂದ ಮೆಕಾಲೆ ಶಿಕ್ಷಣ ಪದ್ಧತಿ ಜಾರಿಗೆ ಬಂದಿತು. ಭಾರತೀಯ ಶಿಕ್ಷಣ ಮರೆಯಾಯಿತು. ಭಾರತಕ್ಕೆ ಸ್ವಾತಂತ್ರ್ಯ ಬಂದು ಇಷ್ಟು ವರ್ಷಗಳಾದರೂ ನಾವು ಇದರಿಂದ ಹೊರಬಂದಿಲ್ಲ. ನಮ್ಮಲ್ಲಿ ಶಿಕ್ಷಣ ಕಥೆಯಿಂದಲೇ ಆರಂಭವಾಗಿ ಕಥೆಯಿಂದಲೇ ಮುಕ್ತಾಯವಾಗುತ್ತಿತ್ತು. ವೇದ, ಮಹಾಭಾರತ, ರಾಮಾಯಣ, ಪಂಚತಂತ್ರದ ಕಥೆಗಳ ಮೂಲಕ ರಾಜನೀತಿ, ಸಾಮಾಜಿಕ ನೀತಿ, ಸಾಮಾಜಿಕ ಪ್ರಜ್ಞೆಗಳನ್ನು ಬೆಳೆಸಲಾಗುತ್ತಿತ್ತು. ಮರೆಯಾಗಿರುವ ಈ ಶಿಕ್ಷಣ ಕ್ರಮವನ್ನು ಮತ್ತೆ ಅಳವಡಿಸಿಕೊಳ್ಳಬೇಕಾಗಿದೆ ಎಂದು




ತಿಳಿಸಿದರು. 'ವಸುಧೈವ ಕುಟುಂಬಕಮ್' ಎಂಬುದು ಪಂಚತಂತ್ರದಲ್ಲಿ ನರಿ ಹೇಳುವ ಮಾತು. ತನ್ನ ಎದುರಿನ ಪ್ರಾಣಿಯನ್ನು ಮೋಸಗೊಳಿಸಲು ಕುಟಿಲತೆಯಿಂದ ಅದು ಆ ಮಾತನ್ನು ಹೇಳುತ್ತದೆ. ಆದರೆ ಆ ಸಂದರ್ಭವನ್ನು ಅರ್ಥ ಮಾಡಿಕೊಳ್ಳದೆ ಇಡೀ ಜಗತ್ತೇ ಒಂದು ಕುಟುಂಬ ಎಂದು ನಂಬಿ ಮೋಸ ಹೋಗುತ್ತೇವೆ. ಕೇಂದ್ರ ಸರ್ಕಾರ ಕೂಡ ಅದನ್ನು ಘೋಷವಾಕ್ಯವೆಂದು ಪರಿಗಣಿಸಿದೆ. ಆದರೆ ಯಾರನ್ನು ನಂಬಬೇಕು, ಯಾರನ್ನು ನಂಬಬಾರದು ಎಂಬ ಸ್ವಂತ ಪ್ರಜ್ಞೆಯನ್ನು ನಮ್ಮ ವೇದ, ಉಪನಿಷತ್ತು, ಭಗವದ್ಗೀತೆಗಳು ತಿಳಿಸುತ್ತವೆ. ಅದನ್ನು ಅರ್ಥಮಾಡಿಕೊಳ್ಳಬೇಕಿದೆ ಎಂದರು.

ನಾವಿಂದು ವಿಕಿಪೀಡಿಯಾವನ್ನು ನಂಬುತ್ತೇವೆ. ನಮ್ಮ ಅಜ್ಜಿ ತಾತರನ್ನು ನಂಬುವುದಿಲ್ಲ. ಬಾಲಿವುಡ್ ನಟ ನಟಿಯರ ಮಾತುಗಳನ್ನು, ಸಿನಿಮಾಗಳನ್ನು, ಜಾಹೀರಾತುಗಳನ್ನು ನಂಬುತ್ತೇವೆ. ನಮ್ಮ ವೇದ ಪರಂಪರೆಯನ್ನು ನಂಬುವುದಿಲ್ಲ. ಇಂಗ್ಲಿಷ್‌ನಲ್ಲಿ ಹೇಳಿದ್ದೆಲ್ಲವೂ ಸತ್ಯ ಎಂದು ನಂಬುತ್ತೇವೆ. ಆದರೆ ನಮ್ಮ ಭಾಷೆ ಸಂಸ್ಕೃತಿಗಳನ್ನು ನಂಬಿ ಗೌರವಿಸುವುದಿಲ್ಲ. ಈ ಮನಃಸ್ಥಿತಿಯಿಂದ ಹೊರಬರಬೇಕಿದೆ ಎಂದು ಅಭಿಪ್ರಾಯಪಟ್ಟರು. ನಮ್ಮ ದೇಶದ ಸಂಸ್ಕೃತಿಗೆ ನಾವು ರಾಯಭಾರಿಗಳಾಗಬೇಕು. ನಮ್ಮತನವನ್ನು ನಾವು ಉಳಿಸಿಕೊಳ್ಳಬೇಕು. ಇಂದು ಸಣ್ಣ ಸಣ್ಣ ಕಾರಣಗಳಿಗಾಗಿ ಆತ್ಮಹತ್ಯೆ ಹೆಚ್ಚುತ್ತಿದೆ. ಯುವಜನರು ದುರ್ಬಲ ಮನಃಸ್ಥಿತಿಗೆ ಜಾರುತ್ತಿದ್ದಾರೆ. ದೈಹಿಕ ಬಲವೂ ಕುಂದುತ್ತಿದೆ. ಇವುಗಳಿಂದ ಹೊರಬಂದು ಶಕ್ತ ಸಮಾಜವನ್ನು, ದೇಶವನ್ನು ಕಟ್ಟಬೇಕು. ಪಂಚತಂತ್ರದಂಥ ಪ್ರಾಚೀನ ಗ್ರಂಥಗಳಲ್ಲಿ ವ್ಯಕ್ತಿನಿರ್ಮಾಣಕ್ಕೆ ಬೇಕಾದ ಮೌಲ್ಯಗಳಿವೆ. ವಿದ್ಯಾರ್ಥಿಗಳು ಕೇವಲ ಸ್ಪರ್ಧೆಗೆ ಪಂಚತಂತ್ರದ ಕಥೆಗಳನ್ನು ಸೀಮಿತಗೊಳಿಸದೆ ಅವನ್ನು ಜೀವನಕ್ಕೆ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಉದ್ಯಮಿ, ಜಸ್ಟ್ ಬುಕ್ಸ್ ಮಾಲೀಕ ಸುರೇಶ್ ನರಸಿಂಹ ಅವರು ಮಾತನಾಡಿ, ಶಿಕ್ಷಣ ಮತ್ತು ನಿಃಸ್ವಾರ್ಥ ಸೇವೆ ಇವೆರಡೂ ಉದ್ಯಮಿಯಲ್ಲಿರಬೇಕಾದ ಗುಣಗಳು. ಆದರೆ ಇಂದಿನ ಉದ್ಯಮಿಗಳಲ್ಲಿ ಮೌಲ್ಯಗಳು ಕುಸಿಯುತ್ತಿವೆ. ಮಕ್ಕಳಲ್ಲಿ ಮೌಲ್ಯಗಳು ಕಣ್ಮರೆಯಾಗುತ್ತಿವೆ. ಇದಕ್ಕೆ ಪೋ?ಕರೇ ಹೊಣೆಗಾರರು. ಪೋಷಕರು ಎಲ್ಲಿಯವರೆಗೆ ಮಕ್ಕಳಿಗೆ ನಮ್ಮ ಧರ್ಮ, ಸಂಸ್ಕೃತಿ, ಭಾಷೆ, ಸಾಹಿತ್ಯಗಳ ಪರಿಚಯ ಮಾಡಿಕೊಡುವುದಿಲ್ಲವೋ ಅಲ್ಲಿಯವರೆಗೆ ಈ ಸಮಸ್ಯೆ ಪರಿಹಾರವಾಗುವುದಿಲ್ಲ. ಜೀವನದಲ್ಲಿ ಮುಖ್ಯವಾದದ್ದು ಕೇವಲ ಅಂಕಗಳಲ್ಲ; ಮೌಲ್ಯಗಳು ಎಂಬುದನ್ನು ಪೋಷಕರು ಅರ್ಥಮಾಡಿಕೊಳ್ಳಬೇಕು. ಆ ನಿಟ್ಟಿನಲ್ಲಿ ಮಕ್ಕಳನ್ನು ಬೆಳೆಸಬೇಕು ಎಂದರು. ಮಕ್ಕಳು ಪುಸ್ತಕಗಳನ್ನು ಓದುವ ಅಭ್ಯಾಸ ಮಾಡಿಕೊಳ್ಳಬೇಕು. ಓದುವ ಹವ್ಯಾಸದಿಂದ ಜ್ಞಾನ, ತಾಳ್ಮೆ, ಸಂಯಮಗಳು ವೃದ್ಧಿಯಾಗುವುದಲ್ಲದೆ, ದುರ್ಬಲ ಮನಃಸ್ಥಿತಿ ದೂರವಾಗುತ್ತದೆ. ಅಭಾಸಾಪ ಆಯೋಜಿಸಿದ ಈ ಸ್ಪರ್ಧೆಯ ಉದ್ದೇಶವೇ ಮಕ್ಕಳಲ್ಲಿ ಓದುವಿಕೆಯನ್ನು ಬೆಳೆಸುವುದು. ಮಕ್ಕಳು ಅದನ್ನು ಅರ್ಥಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಅಭಾಸಾಪ ಬೆಂಗಳೂರು ದಕ್ಷಿಣ ಜಿಲ್ಲಾ ಅಧ್ಯಕ್ಷ ಡಾ. ಎ. ಭಾನು, ಹಿರಿಯ ಪತ್ರಕರ್ತ ಹಾಗೂ ಅಭಾಸಾಪ ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಡಿ.ಎಂ. ಘನಶ್ಯಾಮ್ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಅಭಾಸಾಪ ಬೆಂಗಳೂರು ಮಹಾನಗರ ಸಂಯೋಜಕ ಚಂದ್ರಶೇಖರ್ ಮೈಸೂರು ಅಖಿಲ ಭಾರತೀಯ ಸಾಹಿತ್ಯ ಪರಿಷತ್ತಿನ ಪರಿಚಯ ಮಾಡಿಕೊಟ್ಟರು. ಅಭಾಸಾಪ ರಾಜ್ಯ ಸಹ ಖಜಾಂಚಿ ಭ. ರಾ. ವಿಜಯ್ ಕುಮಾರ್ ಪಂಚತಂತ್ರ ಕಥೆ ಹೇಳುವ ಸ್ಪರ್ಧೆಯ ಉದ್ದೇಶವನ್ನು ವಿವರಿಸಿದರು. ಅಭಾಸಾಪ ಬೆಂಗಳೂರು ಉತ್ತರ ಕಾರ್ಯದರ್ಶಿ ಸಚಿನ್ ಮುಂಗಿಲ ನಿರೂಪಿಸಿದರು. ಭಾವನಾ ಬಿ. ಪ್ರಾರ್ಥಿಸಿದರು.ಅಭಾಸಾಪ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಾರ್ಯದರ್ಶಿ ನವೀನ್ ಭಟ್ಟ ಗಂಗೋತ್ರಿ ಸ್ವಾಗತಿಸಿದರು.ಅಭಾಸಾಪ ಬೆಂಗಳೂರು ಮಹಾನಗರ ಕಾರ್ಯದರ್ಶಿ ರಮೇಶ ದೊಡ್ಡಪುರ ವಂದಿಸಿದರು.

# ವಿವಿಧ ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತ ಸಲಕರಣೆ

**ಬೆಂಗಳೂರು ಗ್ರಾಮಾಂತರ:** ಬೆಂಗಳೂರು ಗ್ರಾಮಾಂತರ ಜಿಲ್ಲಾ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಖಾದಿ ಗ್ರಾಮೋದ್ಯೋಗ ವಿಭಾಗದ ವತಿಯಿಂದ 2024-25ನೇ ಸಾಲಿನ ಜಿಲ್ಲಾ ಉದ್ಯಮ ಕೇಂದ್ರ ಯೋಜನೆಯಡಿ ಜಿಲ್ಲೆಯ ಗ್ರಾಮೀಣ ಭಾಗದ ಅರ್ಹ 624 ವೃತ್ತಿಪರ ಕುಶಲಕರ್ಮಿಗಳಿಗೆ ಸುಧಾರಿತ ಸಲಕರಣೆ ಸರಬರಾಜು ಯೋಜನೆಯಡಿ ಉಚಿತವಾಗಿ ಸುಧಾರಿತ ಸಲಕರಣೆ ವಿತರಿಸಲು ಆಯ್ಕೆಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಯನ್ನು ಗ್ರಾಮ ಪಂಚಾಯಿತಿ ಅಥವಾ ತಾಲ್ಲೂಕು ಕೈಗಾರಿಕಾ ವಿಸ್ತರಣಾಧಿಕಾರಿಗಳ ಕಛೇರಿಯಿಂದ ಪಡೆದು ಭರ್ತಿ ಮಾಡಿ ಅಗತ್ಯ ದಾಖಲಾತಿಗಳು ಹಾಗೂ ಗ್ರಾಮ ಪಂಚಾಯಿತಿ ಧೃಡೀಕರಣದೊಂದಿಗೆ ನವ್ಹೆಂಬರ್ 30 ರೊಳಗಾಗಿ ಸಂಬಂಧಿಸಿದ ತಾಲ್ಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿ ಕಛೇರಿಗೆ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಯ ವಯಸ್ಸು ಕನಿಷ್ಠ 18 ವರ್ಷ. ಅರ್ಜಿದಾರರು ಗ್ರಾಮದಲ್ಲಿ ವಾಸವುಳ್ಳವರಾಗಿರಬೇಕು. ಸಮಾಜದಲ್ಲಿ ಸಾಮಾಜಿಕ ತೊಂದರೆಗೊಳಗಾದವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗುವುದು (ವಿಧವೆಯರು ವಿಚ್ಛೇದಿತರು, ಅನಾಥರು), ಉಚಿತ ಉಪಕರಣ ಪಡೆಯಲು ಜಿಲ್ಲೆಯ 624 ಗ್ರಾಮೀಣ ಆಧುನಿಕ ಕಸುಬುಗಳಲ್ಲಿ ತೊಡಗಿರುವ ಕುಶಲ ಕರ್ಮಿಗಳಿಗೆ ವಿದ್ಯುತ್ ಚಾಲಿತ ಉಪಕರಣಗಳಾದ Welding, Barbending, Carpentry, Borewell repair/ Motor Rewinding steel fabrication, plumbing and Electrician, ಬಡಗಿ, ಕಮ್ಮಾರಿಕೆ, ಕಲ್ಲುಕುಟಿಕೆ, ದೋಬಿ, ಕ್ಷೌರಿಕ, ಗಾರೆ, ಮತ್ತು ಇತ್ಯಾದಿ ಕೆಲಸದ ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತವಾಗಿ ಸುಧಾರಿತಾ ಸಲಕರಣ ಕಿಟ್ಗಳನ್ನು ನೀಡುವ ಕಾರ್ಯಕ್ರಮ. ಕುಶಲಕರ್ಮಿಗಳು ಮಾತ್ರ ಅರ್ಜಿಸಲ್ಲಿಸತಕ್ಕದ್ದು. ಈ ಇಲಾಖೆಯ ಯಾವುದೇ ಯೋಜನೆಯಡಿ ಈಗಾಗಲೇ ಉಪಕರಣಗಳನ್ನು ಪಡೆದಿರುವ ಫಲಾನುಭವಿಗಳು ಅರ್ಜಿ ಸಲ್ಲಿಸಲು ಅರ್ಹವಿರುವುದಿಲ್ಲ. ಒಂದು ಕುಟುಂಬಕ್ಕೆ ಒಂದು ಅರ್ಜಿ ಸಲ್ಲಿಸಲು ಮಾತ್ರ ಅವಕಾಶವಿರುತ್ತದೆ. ಸರ್ಕಾರದ ಮಾರ್ಗಸೂಚಿಯಂತೆ ಮೀಸಲಾತಿ ಅನ್ವಯ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಖಾದಿ ಗ್ರಾಮೋದ್ಯೋಗ ವಿಭಾಗದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉದ್ಯೋಗ ಮೇಳದಲ್ಲಿ ನೋಂದಾಯಿಸಿಕೊಳ್ಳಿ

**ಬೆಂಗಳೂರು ಗ್ರಾಮಾಂತರ:** ಭಾರತ ಸರ್ಕಾರದ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಮಂತ್ರಾಲಯ ಅಧೀನದಲ್ಲಿ ಬರುವ ಸ್ವಾಯತ್ತ ವೈಜ್ಞಾನಿಕ ಸಂಸ್ಥೆಯಾದ ರಾಷ್ಟ್ರೀಯ ವಿದ್ಯುನ್ಮಾನ ಮತ್ತು ತಂತ್ರಜ್ಞಾನ ಸಂಸ್ಥೆ(ಓಐಇಐಖಿ)ಯು ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯದ ನ್ಯಾಷನಲ್ ಕೆರಿಯರ್ ಸರ್ವಿಸ್ (ಓಅಖ), ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಸಹಕಾರದೊಂದಿಗೆ ಬೆಂಗಳೂರು ನಗರ ಜಿಲ್ಲೆಯ ಕೆ.ಎಲ್.ಇ ಸಂಸ್ಥೆಯ ಎಸ್ ನಿಜಲಿಂಗಪ್ಪ ಮಹಾವಿದ್ಯಾಲಯ, 1040, 28ನೇ ಕ್ರಾಸ್ ರಸ್ತೆ, 2ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-10 ಇಲ್ಲಿ 2024ರ ಅಕ್ಟೋಬರ್ 20 ರಂದು 'ಉದ್ಯೋಗ ಮೇಳ'ವನ್ನು ಆಯೋಜಿಸಲಾಗಿದೆ. ಉದ್ಯೋಗ ಮೇಳದಲ್ಲಿ 100 ಕ್ಕಿಂತ ಹೆಚ್ಚಿನ ಪ್ರತಿಷ್ಠಿತ ಬೃಹತ್/ಮಾಧ್ಯಮ/ ಸಣ್ಣಉದ್ಯೋಗದಾತರ ಸಂಸ್ಥೆಗಳು ಭಾಗವಹಿಸಿ ತಮ್ಮ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಎಸ್‌ಎಸ್‌ಎಲ್ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ನರ್ಸಿಂಗ್, ಪದವಿ, ಸ್ನಾತಕೋತರ ಪದವಿ, ಇಂಜಿನಿಯರಿಂಗ್ ಹಾಗೂ ಇತರೆ ವಿದ್ಯಾರ್ಹತೆ ಹೊಂದಿರುವ ಜಿಲ್ಲೆಯ ಉದ್ಯೋಗಾಕಾಂಕ್ಷಿಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ವಿವರಗಳನ್ನು https://jobfair.calicut.nielit.in/ ವೆಬ್ಸೈಟ್ ನಲ್ಲಿ ನೋಂದಾಯಿಸಿ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉದ್ಯೋಗಾಕಾಂಕ್ಷೀ ಅಭ್ಯರ್ಥಿಗಳು ಬಯೋಡಾಟ ಹಾಗೂ ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲಾತಿಗಳ ಪ್ರತಿಗಳೊಂದಿಗೆ ಅಕ್ಟೋಬರ್ 20 ರಂದು ನಡೆಯಲಿರುವ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಉದ್ಯೋಗ ಮೇಳದ ಸದುಪಯೋಗ ಪಡೆದುಕೊಳ್ಳಲು ಗ್ರಾಮಾಂತರ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ತಿಳಿಸಿದ್ದಾರೆ.

## ಪ್ರವಾಸಕಾರ್ಯಕ್ರಮ

**ಮಂಡ್ಯ:** ಕರ್ನಾಟಕರಾಜ್ಯಆಹಾರಆಯೋಗದ ಅಧ್ಯಕ್ಷ- ಡಾ. ಹೆಚ್‌ಕೃಷ್ಣ ಹಾಗೂ ಸದಸ್ಯರುಗಳಾದ ಲಿಂಗರಾಜಕೋಟೆ, ಸುಮಂತ್‌ರಾವ್, ಮಾರುತಿ ಎಂ.ದೊಡ್ಡಲಿಂಗಣ್ಣವರ, ಎ.ರೋಹಿಣಿ ಪ್ರಿಯ, ಕೆ.ಎಸ್ ವಿಜಯಲಕ್ಷ್ಮಿ ಅವರುಗಳು ಅಕ್ಟೋಬರ್ 22 ರಿಂದ 25 ರವರೆಗೆ ಮಂಡ್ಯಜಿಲ್ಲೆಯಲ್ಲಿ ಪ್ರವಾಸಕ್ಕೆಗೊಂಡಿದ್ದಾರೆ. ಪ್ರವಾಸದ ಸಂದರ್ಭದಲ್ಲಿಕ 'ರ್ನಾಟಕರಾಜ್ಯಆಹಾರಆಯೋಗವು ಮಂಡ್ಯಜಿಲ್ಲೆಯ ವಿವಿಧ ತಾಲ್ಲೂಕುಗಳ ನ್ಯಾಯಬೆಲೆಅಂಗಡಿ, ಆಹಾರಧಾನ್ಯ ಸಗಟು ಮಳಿಗೆ.ಅಂಗನವಾಡಿಕೇಂದ್ರ, ಎಂ.ಎಸ್.ಪಿ.ಟಿ.ಸಿ, ಮಧ್ಯಾಹ್ನಉಪಹಾರಯೋಜನೆ, ಜಿಲ್ಲಾಆಸ್ಪತ್ರೆಯಲ್ಲಿರುವ ಎನ್.ಆರ್.ಸಿ.ಘಟಕ, ಕೃಷಿ ಇಲಾಖೆ, ವಿಕಲ ಚೇತನರಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಸಾಮಾಜಿಕ ಭದ್ರತೆ ಹಾಗೂ ಪಿಂಚಣಿ ಇಲಾಖೆ ಮತ್ತು ಸರ್ಕಾರಿ ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆಎಂದುಕರ್ನಾಟಕರಾಜ್ಯಆಹಾರಆಯೋಗದ ಸದಸ್ಯ ಕಾರ್ಯದರ್ಶಿ ಹಾಗೂ ಬೆಂಗಳೂರು ಆಹಾರ, ನಾಗರಿಕ ಸರಬರಾಜು ಮತ್ತುಗ್ರಾಹಕರ ವ್ಯವಹಾರಗಳ ಇಲಾಖೆ ಅಪರ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




**ಬೆಂಗಳೂರು ನಗರ ಜಿಲ್ಲೆಯಲ್ಲಿ ಭಾರೀ ಮಳೆಯ ನಡುವೆಯೂ ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಇಲಾಖೆ ವತಿಯಿಂದ ಕಾಲುಬಾಯಿ ರೋಗ (ಎಫ್‌ಎಂಡಿ) ಲಸಿಕೆ ಅಭಿಯಾನವನ್ನು ಕೈಗೊಳ್ಳಲಾಯಿತು. ರೈತರ ಮನೆ ಬಾಗಲಿಗೆ ತೆರಳಿ ಲಸಿಕೆ ಹಾಕಲಾಗಿದೆ ಎಂದು ಪಶುಪಾಲನ ಹಾಗೂ ಪಶುಸಂಗೋಪನ ಇಲಾಖೆ ಉಪ ನಿರ್ದೇಶಕ ಡಾ. ಚಂದ್ರಶೇಖರ್ ತಿಳಿಸಿದ್ದಾರೆ.**

## ಪಟಾಕಿ ಮಾರಾಟ: ಸುರಕ್ಷಿತಕ್ರಮ ಅನುಸರಿಸಿ

**ಮಂಡ್ಯ;** 2024-25 ನೇ ಸಾಲಿನ ದೀಪಾವಳಿ ಹಬ್ಬವನ್ನುಪರಿಸರ ಸಂರಕ್ಷಿಸುವ ನಿಟ್ಟಿನಲ್ಲಿ, ಪರಿಸರ ಸ್ನೇಹಿಯಾಗಿಆಚರಿಸಲುಜಿಲ್ಲಾಧಿಕಾರಡಾ.ಕುಮಾರಅವರು ಸುರಕ್ಷಿತಕ್ರಮಅನುಸರಿಸಲು ಸೂಚನೆ ನೀಡಿದ್ದಾರೆ. ಹಸಿರು ಪಟಾಕಿಗಳನ್ನು ಬಿಟ್ಟು ಉಳಿದ ಯಾವುದೇಇತರೆ ಪಟಾಕಿಗಳ ಮಾರಾಟ ಹಾಗೂ ಬಳಕೆಯನ್ನು ನಿ?ಧಿಸಿರುತ್ತದೆ. ಹಸಿರು ಪಟಾಕಿಗಳ ಮೇಲೆ ಹಾಗೂ ಅವುಗಳ ಪ್ಯಾಕೆಟ್ ಮೇಲೆ ಹಸಿರು ಪಟಾಕಿಯಚಿಹ್ನೆಇರುತ್ತದೆ ಹಾಗೂ ಕ್ಯೂಆರ್‌ಕೋಡ್ ಸಹ ಇರುತ್ತದೆ. ಸದರಿಚಿಹ್ನೆಇಲ್ಲದಯಾವುದೇ ಪಟಾಕಿ ಹಸಿರು ಪಟಾಕಿಯೆನಿಸುವುದಿಲ್ಲ ಮತ್ತು ಅವುಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ರಾತ್ರಿ 8.00 ಗಂಟೆಯಿಂದರಾತ್ರಿ 10.00 ಗಂಟೆಯವರೆಗೆ ಮಾತ್ರ ಪಟಾಕಿ ಸಿಡಿಸುವುದಕ್ಕೆ ಅವಕಾಶ ನೀಡಿದೆ ಉಳಿದ ಸಮಯದಲ್ಲಿ ಪಟಾಕಿಗಳ ಸ್ಫೋಟವನ್ನು ಸಂಪೂರ್ಣವಾಗಿ ನಿ?ಧಿಸಲಾಗಿದೆ. ಪಟಾಕಿಗಳು ಸಿಡಿಯುವ ಜಾಗದಿಂದ 4 ಮೀಟರ್‌ದೂರದಲ್ಲಿ 125 ಡೆಸಿಬಲ್ ಗಳಿಗಿಂತ (ಎಐ) ಅಥವಾ 145 ಡೆಸಿಬಲ್ (ಸಿ) ಪಿಕೆಗಿಂತಅಧಿಕ ಶಬ್ದ ಉಂಟು ಮಾಡುವ ಪಟಾಕಿಗಳ ತಯಾರಿಕೆ ಮಾರಾಟ ಹಾಗೂ ಬಳಕೆ ಮಾಡುವುದನ್ನು ನಿಷೇಧಿಸಲಾಗಿದೆ.

ದಿನದಯಾವುದೇ ಸಮಯದಲ್ಲಿ ನಿಶ್ಯಬ್ಧ ವಲಯಗಳೆಂದು ಘೋಷಿಸಲ್ಪಟ್ಟಿರುವ ಸ್ಥಳಗಳ (ಆಸ್ಪತ್ರೆ, ಶಾಲೆ, ಪ್ರಾರ್ಥನಾ ಮಂದಿರ, ಇತ್ಯಾದಿಗಳು) ಸುತ್ತ ಮುತ್ತಯಾವುದೇರೀತಿಯ ಶಬ್ದ ಉಂಟುಮಾಡುವ ಪಟಾಕಿ ಹಾಗೂ ಸಿಡಿಮದ್ದುಗಳ ಬಳಕೆಯನ್ನು ನಿಷೇಧಿಸಲಾಗಿದೆ.

ಹಸಿರು ಪಟಾಕಿ ಮಾರುವ ಮಳಿಗೆಗಳ ಮಾಲೀಕರು ಎಕ್ಸ್‌ಪ್ಲೋಸಿವ್ ಲೈಸನ್ ‌ಅನ್ನು ಸಂಬಂಧಪಟ್ಟ ಪೋಲಿಸ್ ಇಲಾಖೆ ಹಾಗೂ ಜಿಲ್ಲಾಡಳಿತದಿಂದ ಅನುಮತಿ ಪಡೆದು ಮಳಿಗೆಗಳನ್ನು ಇಡತಕ್ಕದ್ದು. ಈ ಕ್ರಮಗಳನ್ನು ಉಲ್ಲಂಘಿಸಿರುವುದು ಕಂಡುಬಂದಲ್ಲಿಅದಕ್ಕೆಕಾರಣರಾದವರ ಮೇಲೆ ಕಾಯ್ದೆಯನುಸಾರಕಟ್ಟು ನಿಟ್ಟಿನಕ್ರಮ ಜಾರಿಗೊಳಿಸಲಾಗುವುದು ಎಂದುಆದೇಶದಲ್ಲಿತಿಳಿಸಿದ್ದಾರೆ.

## ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಪ್ರಾಣಿಗಳ ವಿನಿಮಯ

**ಬೆಂಗಳೂರು:** ನವದೆಹಲಿಯ ಕೇಂದ್ರ ಮೃಗಾಲಯ ಪ್ರಾಧಿಕಾರದ ಅನುಮೋದನೆಯಂತೆ, ಬನ್ನೇರುಘಟ್ಟ ಜೈವಿಕ ಉದ್ಯಾನವನ, ಬೆಂಗಳೂರು, ಮತ್ತು ಸಂಜಯ್ ಗಾಂಧಿ ಜೈವಿಕ ಉದ್ಯಾನವನ, ಪಾಟ್ನಾ, ಬಿಹಾರ ನಡುವೆ ಯಶಸ್ವಿ ಪ್ರಾಣಿ ವಿನಿಮಯ ಕಾರ್ಯಕ್ರಮವನ್ನು ಪೂರ್ಣಗೊಂಡಿದೆ. ಪ್ರಾಣಿ ವಿನಿಮಯವು ಎಕ್ಸ್-ಸಿಟು ಸಂರಕ್ಷಣೆಯಲ್ಲಿ ಜಾತಿಯ ವೈವಿಧ್ಯತೆಯನ್ನು ಹೆಚ್ಚಿಸಲು ನಡೆಯುತ್ತಿರುವ ಪ್ರಯತ್ನಗಳಲ್ಲಿ ಒಂದಾಗಿದೆ. ವಿನಿಮಯದ ಭಾಗವಾಗಿ, ಬನ್ನೇರುಘಟ್ಟ ಜೈವಿಕ ಉದ್ಯಾನವನ ಒಂದು ಗಂಡು ಜೀಬ್ರಾ ಮತ್ತು ಎರಡು ಗಂಡು ಥಮಿನ್ ಜಿಂಕೆಗಳನ್ನು ಪಾಟ್ನಾ ಮೃಗಾಲಯಕ್ಕೆ ಕಳುಹಿಸಿದ್ದು, ಇದರ ಪ್ರತಿಯಾಗಿ, ಅಳಿವಿನಂಚಿನಲ್ಲಿರುವ ಘಾರಿಯಲ್, ಬಿಳಿ ಹುಲಿ ಮತ್ತು ಕಾಡು ಬೆಕ್ಕನ್ನು ಸ್ವೀಕರಿಸಲಾಗಿದೆ. ಬೆಂಗಳೂರಿನ ಹವಾಮಾನಕ್ಕೆ ಹೊಂದಿಕೊಳ್ಳಲು ಈ ಹೊಸ ನಿವಾಸಿಗಳನ್ನು ಕೆಲವು ದಿನಗಳವರೆಗೆ ಕ್ವಾರಂಟೈನ್ ಪ್ರದೇಶದಲ್ಲಿ ಇರಿಸಲಾಗಿದೆ ಮತ್ತು ನಿರಂತರ ವೀಕ್ಷಣೆಯಲ್ಲಿದೆ. ಈ ಪ್ರಾಣಿ ವಿನಿಮಯವು ಎರಡೂ ಮೃಗಾಲಯಗಳಲ್ಲಿ ಸಂರಕ್ಷಣೆ ಮತ್ತು ಸಂತಾನೋತ್ಪತ್ತಿ ಕಾರ್ಯಕ್ರಮಗಳನ್ನು ಬಲಪಡಿಸುವ ಗುರಿಯನ್ನು ಹೊಂದಿದ್ದಲ್ಲದೆ, ಸಂದರ್ಶಕರಿಗೆ ಪ್ರಾಣಿಗಳನ್ನು ಹತ್ತಿರದಿಂದ ವೀಕ್ಷಿಸಿ, ತಿಳಿದುಕೊಳ್ಳಲು ಅವಕಾಶವನ್ನು ಒದಗಿಸುತ್ತದೆ. ಪ್ರಾಣಿ ವಿನಿಮಯ ಕಾರ್ಯಕ್ರಮಗಳು ಸಂರಕ್ಷಣೆ, ಶಿಕ್ಷಣ ಮತ್ತು ಜಾತಿಗಳ ನಿರ್ವಹಣೆಯನ್ನು ಮುನ್ನಡೆಸುವಲ್ಲಿ ಭಾರತೀಯ ಪ್ರಾಣಿ ಸಂಗ್ರಹಾಲಯಗಳ ಸಹಯೋಗದ ಪ್ರಯತ್ನಗಳನ್ನು ಎತ್ತಿ ತೋರಿಸುತ್ತದೆ ಎಂದು ಬನ್ನೇರುಘಟ್ಟ ಜೈವಿಕ ಉದ್ಯಾನವನದ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾ ಮತ್ತು ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆ

**ಬೆಂಗಳೂರು:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿಯ ಅಂಗವಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ಚಾಲಿತ ವಿಶ್ವದಲ್ಲಿ ಗಾಂಧೀ ತತ್ವ ಸಿದ್ಧಾಂತಗಳ ಮಹತ್ವದ ಬಗ್ಗೆ ವಿಶ್ಲೇಷಿಸಿ ಪ್ರಬಂಧವನ್ನು ಬರೆಯಲು ಅನುವಾಗುವಂತೆ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾ ಮತ್ತು ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಜಿಲ್ಲಾ ಮಟ್ಟದ ಸ್ಪರ್ಧೆಗೆ ಪ್ರಬಂಧಗಳನ್ನು ಬರೆದು ಅಕ್ಟೋಬರ್ 31 ರೊಳಗಾಗಿ ಇ-ಮೇಲ್ ವಿಳಾಸ kstaessay.kannada@gmail.com & kstaessay.english@gmail.com ಮೂಲಕ ಕಳುಹಿಸಿಕೊಡುವುದು. ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು 2024 ನೇ ನವೆಂಬರ್ 12 ರಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ಪ್ರೊ.ಯು.ಆರ್.ರಾವ್ ವಿಜ್ಞಾನ ಭವನ, ತೋಟಗಾರಿಕಾ ವಿಜ್ಞಾನಗಳ ಕಾಲೇಜು ಮಹಾದ್ವಾರ ಪಕ್ಕ, ಜಿಕೆವಿಕೆ ಆವರಣ, ಮೇಜರ್ ಸಂದೀಪ್ ಉನ್ನಿಕೃಷ್ಣನ್ ರಸ್ತೆ, ದೊಡ್ಡ ಬೆಟ್ಟಹಳ್ಳಿ ಬಸ್ ನಿಲ್ದಾಣ, ವಿದ್ಯಾರಣ್ಯಪುರ ಪೋಸ್ಟ್, ಬೆಂಗಳೂರು- 560097 ಇಲ್ಲಿ ಆಯೋಜಿಸಲಾಗುವ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಸ್ಥಳದಲ್ಲೇ ಕನ್ನಡ ಮತ್ತು ಆಂಗ್ಲಭಾಷೆಯಲ್ಲಿ ಪ್ರತ್ಯೇಕವಾಗಿ ಪ್ರಬಂಧವನ್ನು ಬರೆಯಬೇಕಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಚಂದ್ರಶೇಖರಮೂರ್ತಿ ಎಸ್. ಮೊ. ಸಂ. 9686449019 / 9686919019 ಮತ್ತು ದೂ.ಸಂ. 080-29721550 ಅಥವಾ ಅಕಾಡೆಮಿಯ ವೆಬ್ ಸೈಟ್ www.kstacademy.in ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎ.ಎಂ.ರಮೇಶ್ ತಿಳಿಸಿದ್ದಾರೆ.

## ಸಾಧಕರಿಂದ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ನವೆಂಬರ್ 1 ರಂದು ನಡೆಯುವ 69ನೇ ಕನ್ನಡ ರಾಜ್ಯೋತ್ಸವ ದಿನಾಚರಣೆಯ ದಿನದಂದು ಜಿಲ್ಲೆಯಲ್ಲಿ ಕಲೆ ಮತ್ತು ಸಂಸ್ಕೃತಿ ಕ್ಷೇತ್ರದಲ್ಲಿ ರಾಷ್ಟ್ರ ಮಟ್ಟದಲ್ಲಿ ಹಾಗೂ ರಾಜ್ಯ ಮಟ್ಟದಲ್ಲಿ ಗುರುತಿಸಿಕೊಂಡು ವಿಶಿಷ್ಟ ಕಾರ್ಯಸಾಧನೆ ಮಾಡಿ ಜಿಲ್ಲೆಯ ಕೀರ್ತಿಯನ್ನು ಎತ್ತಿಹಿಡಿದ ಸಾಧಕರನ್ನು ಸನ್ಮಾನ ಮಾಡಲು ಸಮಿತಿಗೆ ಆಯ್ಕೆ ಮಾಡಿ ಪ್ರಸ್ತಾವನೆಯನ್ನು ಸಲ್ಲಿಸಲು ಜಿಲ್ಲಾಧಿಕಾರಿಗಳು ನಿರ್ದೇಶಿಸಿರುತ್ತಾರೆ. ಆದ್ದರಿಂದ ಜಿಲ್ಲೆಯಲ್ಲಿ ರಾಷ್ಟ್ರ ಮಟ್ಟದಲ್ಲಿ ಹಾಗೂ ರಾಜ್ಯ ಮಟ್ಟದಲ್ಲಿ ಕಲೆ ಮತ್ತು ಸಂಸ್ಕೃತಿ ಕ್ಷೇತ್ರದಲ್ಲಿ ಕಾರ್ಯಸಾಧನೆ ಮಾಡಿರುವವರು ಅಕ್ಟೋಬರ್ 27 ರೊಳಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದ್ದು, ಆಸಕ್ತಿ ಉಳ್ಳವರು ಉಪವಿಭಾಗಾಧಿಕಾರಿಗಳ ಕಚೇರಿ, ಚಿಕ್ಕಬಳ್ಳಾಪುರ ಉಪವಿಭಾಗ ರವರಲ್ಲಿ ಅರ್ಜಿ ಸಲ್ಲಿಸಲು ಕೋರಿದೆ ಎಂದು ಉಪವಿಭಾಗಾಧಿಕಾರಿ ಡಿ.ಎಚ್. ಅಶ್ವಿನ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಮಿನಿ ಉದ್ಯೋಗ ಮೇಳ

**ಮಂಡ್ಯ:** ಮಂಡ್ಯಜಿಲ್ಲಾಉದ್ಯೋಗ ವಿನಿಮಯಕಛೇರಿ ಹಾಗೂ ಮೆ॥ಇಕ್ವಿಟಾಸ್ ಸ್ಮಾಲ್ ಫೈನಾನ್ಸ್, ಮೆ॥ ಬಿ.ಜೆಡ್ ಫೈನಾನ್ಸ್ ಲಿಮಿಟೆಡ್, ಮೆ॥ ಇಂದೂಸ್‌ಟಿ.ಎಂ.ಟಿ ಇಂಡಸ್ಟ್ರೀಸ್ ಹಾಗೂ ಮೆ॥ ಡೆಕ್ಕನ್ ಮ್ಯಾನೇಜ್‌ಮೆಂಟ್ ಸಂಸ್ಥೆ ಸಹಯೋಗದಲ್ಲಿಅಕ್ಟೋಬರ್ 22 ರಂದು ಬೆಳಿಗ್ಗೆ 10.30 ಗಂಟೆಗೆಮಂಡ್ಯಜಿಲ್ಲಾಉದ್ಯೋಗ ವಿನಿಮಯಕಛೇರಿಯಲ್ಲಿಮಿನಿಉದ್ಯೋಗ ಮೇಳ ನಡೆಯಲಿದೆ. ಸಂಸ್ಥೆಯಲ್ಲಿ ಖಾಲಿಯಿರುವ ಹಲವಾರು ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ, ಡಿಪ್ಲಮೊಹಾಗೂಯಾವುದೇ ಪದವಿ ಉತ್ತೀರ್ಣರಾದ 18 ರಿಂದ 35 ವರ್ಷದೊಳಗಿನ ಅಭ್ಯರ್ಥಿಗಳು ಮಿನಿ ಉದ್ಯೋಗ ಮೇಳದಲ್ಲಿ ಹಾಜರಾಗತಕ್ಕದ್ದು. ದೂ.ಸಂ: 08232-295124 ಮತ್ತು 9164642684, 8970646629 / 8660061488 ಸಂಪರ್ಕಿಬಹುದು.

## ಪ್ರಗತಿ ಪರಿಶೀಲನಾ ಸಭೆ

**ಮಂಡ್ಯ:** ಬೆಂಗಳೂರು ಕರ್ನಾಟಕರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಅಧ್ಯಕ್ಷೆ ಜಿ ಪದ್ಮಾವತಿಅವರುಅಕ್ಟೋಬರ್ 22 ರಂದು ಬೆಳಿಗ್ಗೆ 10 ಗಂಟೆಗೆ ಮಂಡ್ಯಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಇಲಾಖೆಯಡಾ. ಜೆ.ಎಲ್‌ಜವರೇಗೌಡ ಸಭಾಂಗಣದಲ್ಲಿ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನ ಸಭೆಯನ್ನು ಹಮ್ಮಿಕೊಳ್ಳಲಾಗಿದೆ .

# ಬಹುಮಹಡಿ ಕಟ್ಟಡಗಳು ಆತ್ಮಹತ್ಯೆಯ ತಾಣವಾಗಬಾರದು

**ಚಿತ್ರದುರ್ಗ:** ಬಹುಮಹಡಿ ಕಟ್ಟಡಗಳು, ಶಾಲೆಗಳು, ಕಾಲೇಜುಗಳ ವಿದ್ಯಾರ್ಥಿಗಳ ಆತ್ಮಹತ್ಯೆ ತಾಣವಾಗಬಾರದು, ಅವುಗಳನ್ನ ಎಚ್ಚರಿಕೆಯಿಂದ ಸಂರಕ್ಷಿಸಿ, ವಿದ್ಯಾರ್ಥಿಗಳು ಯಾವುದೇ ಸಂದರ್ಭದಲಿ ಬೀಳುವುದಾಗಲಿ, ಅಪಘಾತ ಮಾಡಿಕೊಳ್ಳುವುದಾಗಲಿ, ನೂಕಾಟ, ಜಗ್ಗಾಟಗಳಿಂದ ಕೆಳಗೆ ಬೀಳುವಂತೆ ಆಗಲಿ, ಆಗದಂತೆ ಸುರಕ್ಷತಾ ಸಾಧನೆಗಳನ್ನ ಅಳವಡಿಸಿ, ಎತ್ತರದ ಕಂಬಿಗಳನ್ನ ಅಳವಡಿಸಿ, ಸಾಧ್ಯವಾದರೆ ಜಾಲರಿಗಳನ್ನು ನಿರ್ಮಿಸಿ ಅವರನ್ನ ರಕ್ಷಿಸಬೇಕಾಗಿದೆ. ವ್ಯಕ್ತಿಗಳು ಅಚಾನಕ್ಕಾಗಿ ಬಿಲ್ಡಿಂಗ್ನಿಂದ ಕೆಳಗೆ ಬೀಳುವಂತಹ ಸಂಭವಗಳು ಹೆಚ್ಚಾಗುತ್ತಿರುವುದರಿಂದ, ಅವರುಗಳ ಸೂಕ್ತ ರಕ್ಷಣೆಗಾಗಿ ಸರ್ಕಾರ ಹೊಸ ನಿಯಮಗಳನ್ನ ಜಾರಿಗೆ ತಂದು, ಬಹುಮಹಡಿ, ಕಟ್ಟಡಗಳನ್ನ ಸುರಕ್ಷತೆಯ ಜೊತೆಗೆ ನಿರ್ಮಾಣವಾಗಬೇಕು ಎಂಬ ನಿಯಮವನ್ನು ಜಾರಿಗೆ ತರಬೇಕು ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ.ಎಚ್ ಕೆ. ಎಸ್. ಸ್ವಾಮಿ ವಿನಂತಿಸಿಕೊಂಡಿದ್ದಾರೆ.

ವಿದ್ಯಾರ್ಥಿಗಳು ಯಾವುದಾದರೂ ಒಂದು ಸಂಕಷ್ಟ ಸಮಯದಲ್ಲಿ ಆತ್ಮಹತ್ಯೆ ಮಾಡಿಕೊಳ್ಳುವ ದಾರಿಗಳನ್ನು ಹುಡುಕುತ್ತಿದ್ದು, ಅಂತಹುದಕ್ಕೆ ಕಾಲೇಜು ಬಿಲ್ಡಿಂಗ್ ಗಳು, ಎತ್ತರದ ಕಟ್ಟಡಗಳು, ನೀರಿನ ಟ್ಯಾಂಕರ್ ಗಳು, ರೈಲು ನಿಲ್ದಾಣಗಳು, ಮೆಟ್ರೋ ರೈಲು ಹಳಿಗಳು, ಹರಿಯುತ್ತಿರುವ ನದಿಗಳನ್ನು ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಹೆಚ್ಚುತ್ತಿರುವ ಆತ್ಮಹತ್ಯೆಯು ಒಂದು ಆತಂಕಕಾರಿ ವಿಚಾರವಾಗಿದೆ. ವಿದ್ಯಾರ್ಥಿಗಳನ್ನ ಗಮನದಲ್ಲಿಟ್ಟುಕೊಂಡು ಇಂತಹ ಕಟ್ಟಡಗಳ ಬಳಿ ಸುರಕ್ಷತೆಯನ್ನ ಕಾಪಾಡಿಕೊಳ್ಳುವಂತಹ



ಎಲ್ಲಾ ವ್ಯವಸ್ಥೆಯನ್ನು ಮಾಡಿಕೊಳ್ಳಬೇಕಾಗಿದೆ, ಅದಕ್ಕಾಗಿ ಕಟ್ಟಡ ನಿರ್ಮಾಣದಲ್ಲೇ ನಾವು ಆದಷ್ಟು ಎತ್ತರದ ಭಾಗಕ್ಕೆ ವಿದ್ಯಾರ್ಥಿಗಳು ತಲುಪದ ರೀತಿಯಲ್ಲಿ, ತಲುಪಿದರು ಸಹ ಜಾರಿ ಬೀಳುವುದಾಗಲಿ, ನೂಕಿ ಬೀಳುವುದಾಗಲಿ ಆಗದಂತೆ ತಡೆಯುವ ಎಲ್ಲಾ ಪರಿಕರಗಳನ್ನು ಅಳವಡಿಸಬೇಕು ಎಂದು ವಿನಂತಿಸಿಕೊಂಡಿದ್ದಾರೆ. ಬಹಳಷ್ಟು ಎತ್ತರದ ಕಟ್ಟಡಗಳನ್ನ ಈಗ ಕಟ್ಟುತ್ತಿರುವಾಗ, ಮುಂಭಾಗದಲ್ಲಿ ಹಾಕುವ ಕಬ್ಬಿಣದ ಸರಗಳು ಬಹಳ ಕೆಳ ಮಟ್ಟದಲ್ಲಿದ್ದು, ಒಬ್ಬ ವ್ಯಕ್ತಿ ನಿಂತರೆ ಅವನ ಸೊಂಟಕ್ಕಿಂತ ಕೆಳ ಭಾಗದಲ್ಲಿದ್ದು, ಅಚಾನಕ್ಕಾಗಿ ಆತ ದೇಹವನ್ನು ಬಗ್ಗಿಸಿದರೆ, ಕಟ್ಟಡದಿಂದ ಕೆಳಗೆ ಬೀಳುವ ಸಂಭವಗಳು ಹೆಚ್ಚಾಗಿರುತ್ತವೆ. ಹಾಗಾಗಿ ಮಲ್ಟಿ ಸ್ಟೋರಿ ಬಿಲ್ಡಿಂಗ್ ಗಳಲ್ಲಿ ಇನ್ನು ಮುಂದಾದರು ಸಹ ನಾವು ಎತ್ತರದ ಕಬ್ಬಿಣದ ಅಡ್ಡಪಟ್ಟಿಯನ್ನ ಎತ್ತರಿಸಬೇಕಾಗಿದೆ. ಅದು ವ್ಯಕ್ತಿಯ ಎದೆ ಮಟ್ಟಕ್ಕಿದ್ದಷ್ಟು ಒಳ್ಳೆಯದು. ಆತನ ತಲೆ ಮಾತ್ರ ಬಗ್ಗಿ ನೋಡುವಂತ ವ್ಯವಸ್ಥೆ ಕಲ್ಪಿಸಬೇಕು, ಈಗ ಕಟ್ಟಿರುವ ಕಟ್ಟಡಗಳಲ್ಲಿ ಸೊಂಟದ ಕೆಳಭಾಗದಲ್ಲಿ ಕಬ್ಬಿಣದ ಪಟ್ಟಿ ಇದ್ದು, ಆತ ಬಗ್ಗಿ ನೋಡುವಷ್ಟು, ಬೀಳುವಷ್ಟು ದೇಹ ಹೊರಚಾಚಿರುವಂತಿದೆ. ಹಾಗಾಗಿ ಮತ್ತೊಮ್ಮೆ ನಾವು ಸುರಕ್ಷಿತ ದೃಷ್ಟಿಯಿಂದ ಆ ಸರಳಿನ ಕಂಬಿಗಳನ್ನ ಎತ್ತರಿಸಬೇಕಾಗಿದೆ. ಇದರ ಬಗ್ಗೆ ಪ್ರತಿಯೊಬ್ಬರು ಯೋಚಿಸಬೇಕಾಗಿದೆ. ಇದು ಒತ್ತಡದಿಂದ ಮಾಡುವ ಕೆಲಸವಲ್ಲ, ಇದು ಪ್ರತಿಯೊಬ್ಬರ ಪ್ರಾಣ ರಕ್ಷಣೆ ಗೋಸ್ಕರ ಕಬ್ಬಿಣದ ಪಟ್ಟಿಯ ಸರಳುಗಳನ್ನ ಎತ್ತರಿಸಬೇಕಾಗಿ ಎಂದು ವಿನಂತಿಸಿಕೊಂಡಿದ್ದಾರೆ.

ಬಹಳಷ್ಟು ತಂದೆ ತಾಯಿಗಳು ಹೊರಗಡೆ ದುಡಿಯಲು ಹೋಗುತ್ತಿರುವುದರಿಂದ, ಬಹು ಮಹಡಿಯ ಕಟ್ಟದಲ್ಲಿ ವಾಸವಾಗಿದ್ದ ಸ್ಥಳದಲ್ಲಿ, ಮಕ್ಕಳು, ವಿದ್ಯಾರ್ಥಿಗಳು ಕಟ್ಟಡದಿಂದ ಹೊರಬೀಳುವ ಸಂಭವಗಳು ಹೆಚ್ಚಾಗಿರುತ್ತವೆ. ಯಾವುದೇ ಕಬ್ಬಿಣದ ಪಟ್ಟಿಯ ಎತ್ತರ ವ್ಯಕ್ತಿಯ ಎದೆ ಮಟ್ಟಕ್ಕಿದ್ದರೆ ಮಾತ್ರ ಸುರಕ್ಷಿತವಾಗಿರುತ್ತದೆ. ಎದೆ ಎತ್ತರಕ್ಕಿಂತ ಕೆಳಗಿದ್ದರೆ, ಬಗ್ಗಿ ಜಾರಿ ಬೀಳುವ, ಮಗುಚಿ ಬೀಳುವ ಸಂಭವಗಳು ಹೆಚ್ಚಾಗಿರುತ್ತವೆ, ಇದರ ಬಗ್ಗೆ ಕಟ್ಟಡ ನಿರ್ಮಾಪಕರು, ಇಂಜಿನಿಯರ್ ಗಳು ಸ್ವಲ್ಪ ಯೋಚಿಸಿ, ಯುವಜನರ, ಮಕ್ಕಳ ಜೀವ ರಕ್ಷಣೆಗಾಗಿ ಸ್ವಲ್ಪ ಹಣ ಖರ್ಚಾದರೂ ಪರವಾಗಿಲ್ಲ, ಮಕ್ಕಳನ್ನು ಮತ್ತು ವಿದ್ಯಾರ್ಥಿಗಳ ಸುರಕ್ಷಿತವನ್ನ ಗಮನದಲ್ಲಿಟ್ಟು ನಿರ್ಮಾಣ ಮಾಡಬೇಕಾಗಿದೆ ಎಂದು ವಿನಂತಿಸಿಕೊಂಡಿದ್ದಾರೆ.

# ಸಾಗಾಣಿಕದಾರರು ತಪಾಸಣೆ ವರದಿ ಸಲ್ಲಿಸಿ

**ಬೆಂಗಳೂರು:** ಕರ್ನಾಟಕ ರಾಜ್ಯದಲ್ಲಿ ತಯಾರಕರು/ಸಂಸ್ಕರಣಾ ಕೇಂದ್ರಗಳು/ಸಂಗ್ರಹಣಾ ಕೇಂದ್ರಗಳು ಮತ್ತು ಸಾಗಾಣಿಕದಾರರು ಸೇರಿದಂತೆ 01-Dairy products and analogues, 08-Meat and meat products including poultry, 09-Fish and fish products, including molluscs, crustaceans and echinoderms, 10-Eggs and egg products, 13-Foodstuffs intended for particular nutritional uses, 16-Prepared Foods) 18.1-Indian Sweets 99.5-Nutrients and their preparations (Fortified Rice Kernels only) High Risk Food Category ಗಳ ಆಹಾರ ಉದ್ದಿಮೆದಾರರು ರಾಜ್ಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ಪರವಾನಿಗೆ ಪಡೆದಿರುತ್ತಾರೆ. ಈ ಎಲ್ಲಾ ಆಹಾರ ಉದ್ದಿಮೆದಾರರು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006 ಮತ್ತು ನಿಯಮಗಳು 2011ರ Part-V of Schedule 4ರಲ್ಲಿ ನಿಗದಿಪಡಿಸಿರುವಂತೆ ನೈರ್ಮಲ್ಯತೆ ಮತ್ತು ಶುಚಿತ್ವಗಳನ್ನು ಕಾಪಾಡಿಕೊಳ್ಳಬೇಕಾಗಿರುತ್ತದೆ.

High Risk Food Category ಗಳಿಗೆ ಒಳಪಡುವ ಉದ್ದಿಮೆಗಳ ಅಹಾರ ಪದಾರ್ಥಗಳನ್ನು ಸಾರ್ವಜನಿಕರು ಪ್ರತಿನಿತ್ಯ ಸೇವಿಸುವ ಹಿನ್ನೆಲೆಯಲ್ಲಿ ಈ ಆಹಾರ ಉದ್ದಿಮಗಳಲ್ಲಿ ನೈರ್ಮಲ್ಯತೆಯನ್ನು ಮತ್ತು ಆಹಾರದಲ್ಲಿ ಸುರಕ್ಷತೆ ಮತ್ತು ಗುಣಮಟ್ಟವನ್ನು ಕಾಪಾಡುವುದು ಅತ್ಯಂತ ಅವಶ್ಯಕವಾಗಿರುತ್ತದೆ. ರಾಜ್ಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ಪರವಾನಿಗೆ ಪಡೆದಿರುವ High Risk Food Category ಗಳ ತಯಾರಕರು/ಸಂಸ್ಕರಣೆದಾರರ ಉದ್ದಿಮೆಗಳು Third Party Food Safety Auditing Agencyಗಳಿಂದ ತಪಾಸಣೆ ಮಾಡಿಸಿಕೊಳ್ಳುವುದನ್ನು ಕಡ್ಡಾಯ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ಪರವಾನಿಗೆ ಪಡೆದಿರುವ 0101-Dairy products and analogues, 08-Meat and meat products including poultry, 09-Fish and fish products, including molluscs, crustaceans and echinoderms, 10-Eggs and egg products, 13-Foodstuffs intended for particular nutritional uses, 16-Prepared Foods) 18.1-Indian Sweets, 99.5-Nutrients and their preparations (Fortified Rice Kernels only) High Risk Food Category ಗಳ ತಯಾರಕರು/ಸಂಸ್ಮರಣೆದಾರರ ಉದ್ದಿಮೆಗಳು (Kind of Business: Manufacturer/Processer, Food Service Establishments, Storage [Frozen, Refrigerated & Controlled Atmosphere) Transporter (Frozen & Refrigerated) ) FSSAI ಅನುಮೋದಿತ Third Party Food Safety Auditing Agencಗಳಿಂದ ಕಡ್ಡಾಯವಾಗಿ ವರ್ಷಕ್ಕೆ ಒಂದು ಬಾರಿ ಸ್ವಂತ ಹಣದಿಂದ ಆಡಿಟ್/ ತಪಾಸಣೆ ಮಾಡಿಸಿಕೊಳ್ಳಲು ಮತ್ತು ಸಂಬಂಧಿಸಿದ ವರದಿಯನ್ನು FoSCoS ತಂತ್ರಾಂಶದಲ್ಲಿ ಅಪ್ ಲೋಡ್ ಮಾಡಿ ನಂತರ ತಮ್ಮ ವ್ಯಾಪ್ತಿಯ ಜಿಲ್ಲಾ ಅಂಕಿತಾಧಿಕಾರಿಗಳಿಗೆ ಸಲ್ಲಿಸುವುದು. ತಪ್ಪಿದ್ದಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006 ಮತ್ತು ನಿಯಮಗಳು 2011 ರನ್ವಯ ಕಾನೂನಾತ್ಮಕ ಕ್ರಮ ಜರುಗಿಸಲಾಗುವುದು ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹೊಸ ಬಾಂಬ್ ಸಿಡಿಸಿದ ಸಚಿವ ಭೈರತಿ ಸುರೇಶ್

# ಬಿಎಸ್‌ವೈ ಪತ್ನಿ ಸಾವಿನಲ್ಲಿ ಶೋಭಾ ಕರಂದ್ಲಾಜೆ ಪಾತ್ರ

**ಬೆಂಗಳೂರು:** ಸದ್ಯ ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಮುಡಾ ಹಗರಣ ಭಾರಿ ಸದ್ದು ಮಾಡುತ್ತಿದೆ. ಇದರಿಂದ ಸಿಎಂ ಸಿದ್ದರಾಮಯ್ಯ ಅವರು ಕೂಡ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇದೀಗ ಮತ್ತೊಂದು ಸುದ್ದಿ ಭಾರಿ ಸದ್ದು ಮಾಡುತ್ತಿದ್ದು ಸಚಿವ ಭೈರತಿ ಸುರೇಶ್ ಅವರು ಬಿಎಸ್ ಯಡಿಯೂರಪ್ಪ ಪತ್ನಿ ಮೈತ್ರಾದೇವಿ ಸಾವಿನಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪಾತ್ರವಿದೆ ಎಂದು ಹೊಸ ಬಾಂಬ್ ನಡೆಸಿದ್ದಾರೆ. ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಎಸ್ ಯಡಿಯೂರಪ್ಪ ಪತ್ನಿ ಮೈತ್ರಾದೇವಿ ಸಾವಿನಲ್ಲಿ ಶೋಭಾ ಕರಂದ್ಲಾಜೆ ಪಾತ್ರವಿದೆ. ಬಿಎಸ್ ಯಡಿಯೂರಪ್ಪ ಪಾಪ ಒಳ್ಳೆಯವರು. ಆದರೆ ಮೈತ್ರಾದೇವಿ ಸಾವು ಹೇಗಾಯಿತು? ಮೈತ್ರಾದೇವಿ ಸಾವು ತನಿಖೆಯಾಗಿ ಶೋಭಾ ಕರಂದ್ಲಾಜೆ ಅವರನ್ನು ಬಂಧಿಸಬೇಕು ಈ ಬಗ್ಗೆ ತನಿಖೆ ಆಗಲಿ ಅಂತ ಹೇಳುತ್ತಿದ್ದೇನೆ ಇದನ್ನು ಅವರು ಒಪ್ಪಿಕೊಳ್ಳುತ್ತಾರಾ ಎಂದು ಪ್ರಶ್ನಿಸಿದ್ದಾರೆ.



### ಭೈರತಿ ಸುರೇಶ್ ಬಂಧನವಾದೊಡನೆ ಸತ್ಯ ಹೊರಕ್ಕೆ ಬರಲಿದೆ



**ಬೆಂಗಳೂರು:** ಭೈರತಿ ಸುರೇಶ್ ಬಂಧನವಾದೊಡನೆ ಸತ್ಯ ಹೊರಕ್ಕೆ ಬರಲಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸ್ಫೋಟಕ ಹೇಳಿಕೆ ನೀಡಿದ್ದಾರೆ. ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ರಾಜೀನಾಮೆಗೂ ಆಗ್ರಹಿಸಿದರು. ಮುಖ್ಯಮಂತ್ರಿಗಳು ತಮ್ಮ ಪರಮಾಪ್ತ, ಮುಡಾ ಚಯರ್ಮನ್ ಮರಿಗೌಡರ ರಾಜೀನಾಮೆ ಪಡೆದುದು ಯಾಕೆ? ಅವರ ರಾಜೀನಾಮೆ ಪಡೆದು ಅವರ ಮೇಲೆ ಹಗರಣವನ್ನು ಹೊರಿಸಲು ಹೊರಟಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಸಿದ್ದರಾಮಯ್ಯನವರು ರಾಜೀನಾಮೆ ಕೊಡಬೇಕು; ಭೈರತಿ ಸುರೇಶ್ ಅವರನ್ನು ತಕ್ಷಣ ಬಂಧಿಸಬೇಕು. ಭೈರತಿ ಸುರೇಶ್ ಬಂಧನವಾದೊಡನೆ ಸತ್ಯ ಹೊರಕ್ಕೆ ಬರಲಿದೆ. ಅವರ ತನಿಖೆ ನಡೆಸಬೇಕಿದೆ. ತಪಾಸಣೆ ಮಾಡಬೇಕಿದೆ; ಅವರು ತಂದ ಕಡತಗಳ ವಿವರ ಪಡೆದುಕೊಳ್ಳಬೇಕು ಎಂದು ಆಗ್ರಹಿಸಿದರು. ಮುಡಾ ಕಾರ್ಯದರ್ಶಿಯನ್ನು ಅಮಾನತು ಮಾಡಿದ್ದಾರೆ. ಬಳಿಕ ಅಮಾನತು ವಾಪಸ್ ಪಡೆದಿದ್ದಾರೆ. ಸಿದ್ದರಾಮಯ್ಯನವರು 2013ರಲ್ಲಿ ತಮ್ಮ ಕೇಸುಗಳಿಂದ ಹೊರಕ್ಕೆ ಬರಲು ಲೋಕಾಯುಕ್ತವನ್ನು ಮುಚ್ಚಿದ್ದರು. ಟರ್ಫ್ ಕ್ಲಬ್ ಕೇಸಿನಲ್ಲಿ ಸ್ಟೂವರ್ಡ್ ಮಾಡಲು ಚೆಕ್ನಲ್ಲಿ 1.30 ಕೋಟಿ ಪಡೆದವರು ಸಿದ್ದರಾಮಯ್ಯ. ಸಿದ್ದರಾಮಯ್ಯನವರು ಹೇಗೆ ಭ್ರಷ್ಟಾಚಾರರಹಿತರು? ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರು ಮೈಸೂರಿಗೆ ಹೋಗಿ 1997ರ ನಂತರದ ಎಲ್ಲ ಕಡತಗಳನ್ನು ಕಾರಿನಲ್ಲಿ ತುಂಬಿಸಿ ತಂದಿದ್ದಾರೆ. ಅವು ಎಲ್ಲಿ ಹೋಗಿವೆ ಎಂದು ಕೇಳಿದರು. ಅವನ್ನು ಸುಟ್ಟು ಹಾಕಲಾಗಿದೆ ಎಂದು ದೂರಿದರು.

## ಹೈಕಮಾಂಡ್ ಸೂಚಿಸಿದರೆ ಚನ್ನಪಟ್ಟಣದಿಂದ ಸ್ಪರ್ಧೆಗೆ ಸಿದ್ಧ

ಚನ್ನಪಟ್ಟಣ ಕ್ಷೇತ್ರದಿಂದ ಸ್ಪರ್ಧಿಸುವಂತೆ ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರಿಂದ ಒತ್ತಡವಿದೆ. ಆದರೆ, ವರಿಷ್ಠರು ತೆಗೆದುಕೊಳ್ಳುವ ತೀರ್ಮಾನಕ್ಕೆ ಬದ್ಧನಾಗಿರುತ್ತೇನೆ ಎಂದು ಮಾಜಿ ಸಂಸದ ಡಿ.ಕೆ. ಸುರೇಶ್ ಹೇಳಿದರು. ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಭಾನುವಾರ ಮಾತನಾಡಿದ ಅವರು, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಚನ್ನಪಟ್ಟಣ ತಾಲೂಕಿನ ಮುಖಂಡರು,



ಕಾರ್ಯಕರ್ತರೊಂದಿಗೆ ಚರ್ಚೆ ನಡೆಸಿ ಅಭಿಪ್ರಾಯ ಸಂಗ್ರಹಿಸಿದ್ದೇವೆ. ಅಭ್ಯರ್ಥಿ ಆಯ್ಕೆ ವಿಚಾರವಾಗಿ ಪಕ್ಷದ ಬದ್ಧರಿರುವುದಾಗಿ ಎಲ್ಲರೂ ಹೇಳಿದ್ದಾರೆ. ಸ್ಪರ್ಧಿಸುವಂತೆ ನನ್ನ ಮೇಲೂ ಒತ್ತಡ ಹೇರಿದ್ದಾರೆ ಎಂದು ಹೇಳಿದರು. ಅಭ್ಯರ್ಥಿಗಿಂತಲೂ ಹೆಚ್ಚಾಗಿ ಪಕ್ಷದ ಕಾರ್ಯಕರ್ತನಾಗಿ ಕೆಲಸ ಮಾಡಲು ಇಚ್ಛಿಸುತ್ತೇನೆ. ನನಗೆ ಅವಕಾಶ ನೀಡುವಂತೆ ಪಕ್ಷದ ಮುಖಂಡರನ್ನು ನಾನೂ ಸಹ ಕೇಳಿದ್ದೇನೆ. ಎರಡು ಮೂರು ದಿನಗಳಲ್ಲಿ ವರಿಷ್ಠರು ಏನೇ ನಿರ್ಧಾರ ಕೈಗೊಂಡರೂ ಎಲ್ಲಾ ಮುಖಂಡರು ಮತ್ತು ಕಾರ್ಯಕರ್ತರು ಪಾಲಿಸುತ್ತೇವೆ ಎಂದರು. ನ. 13 ರಂದು ಸಂಡೂರು, ಶಿಗ್ಗಾವಿ ಹಾಗೂ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಲಿದೆ. ಬಿಜೆಪಿ–ಜೆಡಿಎಸ್ ಮೈತ್ರಿಕೂಟ ಚನ್ನಪಟ್ಟಣ ಕ್ಷೇತ್ರಕ್ಕೆ ಇನ್ನೂ ಅಭ್ಯರ್ಥಿಯನ್ನು ಅಂತಿಮಗೊಳಿಸಿಲ್ಲ. ಮೈತ್ರಿ ಪಕ್ಷಗಳ ನಾಯಕರ ಪ್ರಕಾರ ಜೆಡಿಎಸ್ ತನ್ನ ಅಭ್ಯರ್ಥಿ ಘೋಷಿಸಲಿದೆ. ಯೋಗಿಶ್ವರ್ ಅವರನ್ನೇ ಜೆಡಿಎಸ್ ಚಿಹ್ನೆಯಡಿ ಕಣಕ್ಕಿಳಿಸಬಹುದು ಎಂಬ ವರದಿಗಳೂ ಇವೆ ಎಂದು ಹೇಳಿದರು.

## ಬಸ್ ಚಾಲಕನ ಪುತ್ರನಿಗೆ ಸಂಡೂರು ಬಿಜೆಪಿ ಟಿಕೆಟ್!

**ಬಳ್ಳಾರಿ:** ಸಂಡೂರು ಬಿಜೆಪಿ ಅಭ್ಯರ್ಥಿಯಾಗಿ ಆಯ್ಕೆಯಾಗಿರುವ ಬಂಗಾರು ಹನುಮಂತು ಮೂಲತಃ ವಿಜಯನಗರ ಜಿಲ್ಲೆಯ ಮರಿಯಮ್ಮನಹಳ್ಳಿಯವರು. ಬಿ.ಎ, ಬಿಇಡ್ ಪದವೀಧರ. ಇವರ ತಂದೆ ಸೋಮಣ್ಣ ಅವರು ಕೆಎಸ್ಆರ್ಟಿಸಿ ಚಾಲಕರಾಗಿದ್ದರು. ಕೂಡ್ಲಿಗಿಯಲ್ಲಿ ನಿವೃತ್ತಿಯಾದರು. ಹೀಗಾಗಿ ಬಂಗಾರು ಹನುಮಂತು ಕುಟುಂಬ ಕೂಡ್ಲಿಗಿಯಲ್ಲಿ ನೆಲೆಸಿದೆ. ಹನುಮಂತು ಅವರ ತಾಯಿ ಹುಲಿಗೆಮ್ಮ ಕೂಡ್ಲಿಗಿ ಪಟ್ಟಣ ಪಂಚಾಯಿತಿ



ಬಿಜೆಪಿಯ ಹಾಲಿ ಸದಸ್ಯರಾಗಿದ್ದಾರೆ. ಬಂಗಾರು ಹನುಮಂತು ರಿಯಲ್ ಎಸ್ಟೇಟ್, ಟ್ರಾನ್ಸ್‌ಪೋರ್ಟ್, ಕ್ರಷರ್, ಸಿವಿಲ್ ವರ್ಕ್ಸ್, ಉದ್ಯಮ ನಡೆಸುತ್ತಿದ್ದಾರೆ. ಕೃಷಿಯಲ್ಲೂ ತೊಡಗಿಸಿಕೊಂಡಿದ್ದಾರೆ. ಸದ್ಯ ಬಿಜೆಪಿಯ ಎಸ್ಟಿ ಮೋರ್ಚಾ ರಾಜ್ಯಾಧ್ಯಕ್ಷರಾಗಿದ್ದಾರೆ. 2018ರ ಚುನಾವಣೆಯಲ್ಲಿ ಸಂಡೂರು ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರು. 7,191 ಮತಗಳಿಸಿದ್ದರು. ಬಳಿಕ ಬಿಜೆಪಿ ಸೇರಿದರು.

## ಕಾಂಗ್ರೆಸ್ ಬಿಕೆ ಹರಿಪ್ರಸಾದ್ ವ್ಯಂಗ್ಯ

**ಚಿತ್ರದುರ್ಗ:** ಕಾಂಗ್ರೆಸ್ ಸರ್ಕಾರ ಐದು ವರ್ಷ ಇರಲ್ಲ ಎಂದು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಹೇಳಿಕೆಗೆ ಬಿಕೆ ಹರಿಪ್ರಸಾದ್ ತಿರುಗೇಟು ನೀಡಿದ್ದು, ಬಿಲ್ಲ ರಂಗ ಜೊತೆ ಎಚ್ ಡಿ ಕುಮಾರಸ್ವಾಮಿ ಸೇರಿದ್ದಾರೆ ಎಂದು ಬಿಜೆಪಿ ಜೆಡಿಎಸ್ ಮೈತ್ರಿ ಕುರಿತು ವ್ಯಂಗ್ಯವಾಡಿದರು.



ಚಿತ್ರದುರ್ಗದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿ ಜೊತೆ ಈಗ ಜೆಡಿಎಸ್ ಪಕ್ಷ ಸೇರಿಕೊಂಡಿದೆ. ಕಮಲದ ಬದಲು ಬೇರೆ ಹೆಸರಲ್ಲಿ ಆಪರೇಷನ್ ಮಾಡ್ತಾರ ನೋಡಬೇಕು. ಕಾಂಗ್ರೆಸ್ ಪಕ್ಷ ಅಷ್ಟೊಂದು ದುರ್ಬಲ ಆಗಿಲ್ಲ. ಬಿಜೆಪಿ ಜೆಡಿಎಸ್ ಪಕ್ಷ ಹಗಲು ಗನಸು ಕಾಣುವುದರಲ್ಲಿ ತಪ್ಪೇನಿಲ್ಲ ಎಂದು ಚಿತ್ರದುರ್ಗದಲ್ಲಿ ಕಾಂಗ್ರೆಸ್ ಎಂಎಲ್ಸಿ ಬಿಕೆ ಹರಿಪ್ರಸಾದ್ ಹೇಳಿಕೆ ನೀಡಿದರು.

ಮುಡಾ ಕಚೇರಿಯಿಂದ ಇಡಿ ದಾಖಲೆ ತೆಗೆದುಕೊಂಡ ಹೋದ ವಿಚಾರವಾಗಿ ಇಡಿ ಅಧಿಕಾರಿಗಳು ನ್ಯೂಸ್ ಪೇಪರ್ ತೆಗೆದುಕೊಂಡು ಹೋಗಿರುತ್ತಾರೆ. ಮುಡಾ ಪ್ರಕರಣಕ್ಕೆ ಸಂಬಂಧಿಸಿದ ಕಡತಗಳು 2 ಬ್ಯಾಗ್ ನಷ್ಟು ಇರಲ್ಲ. ರಾಜಕೀಯ ಲಾಭವನ್ನು ಪಡೆಯಲು ಎರಡು ಬ್ಯಾಗ್ ಪ್ರದರ್ಶನ ಮಾಡಿದ್ದಾರೆ. ಬಿಜೆಪಿ ವಿವಿಧ ಪ್ರಕರಣಗಳಲ್ಲಿ ದೋಚಿದಂತೆ ತೋರಿಕೆಗಾಗಿ ಪ್ರದರ್ಶನ ಮಾಡಿದ್ದಾರ. ಇಡಿ ಒಂದು ಸಂಘಟನೆಯ ನಿಯಂತ್ರಣದಲ್ಲಿದೆ. ಸಮಯ ಬರಲಿ ಹೇಳುತ್ತೇನೆ ಎಂದರು.

ಮುಡಾ ಸೈಟ್ ಹಂಚಿಕೆ ವಿಚಾರ 25 ವರ್ಷದ ಹಿಂದಿನ ಪ್ರಕರಣ. ಇದನ್ನು ಬಿಜೆಪಿ ಮುಡಾ ಮೂಲಕ ರಾಜಕೀಯ ದ್ವೇಷಕ್ಕೆ ಬಳಸುತ್ತಿದೆ. ಚುನಾವಣಾ ಬಾಂಡ್, ಪಿಎಂ ಕೇರ್, ನೋಟ್ ಬ್ಯಾನ್ ಹಗರಣ ನಡೆಸಿದೆ. ಮುಂದಿನ ಚುನಾವಣೆಯಲ್ಲಿ ಬಿಜೆಪಿ ಸರ್ಕಾರ ಹೆಸರು ಬದಲಾವಣೆ ಮಾಡಿಕೊಳ್ಳಲಿ. ಬಿಜೆಪಿಯ ಬದಲು ಭ್ರಷ್ಟಾಚಾರ ಜನತಾ ಪಾರ್ಟಿ ಎಂದು ಹೆಸರು ಬದಲಿಸಿಕೊಳ್ಳಲಿ ಎಂದು ಕಾಂಗ್ರೆಸ್ ಎಂಎಲ್ಸಿ ಬಿಕೆಹಾರಿ ಪ್ರಸಾದ್ ತಿಳಿಸಿದರು.

## ಕಾವೇರಿ, ಮೇಕೆದಾಟು ವಿಚಾರದಲ್ಲಿ ಕರುನಾಡಿಗೆ ಬೆಂಬಲ

**ಬೆಂಗಳೂರು :** ಕನ್ನಡಿಗರು ಮತ್ತು ತಮಿಳರು ದ್ರಾವಿಡ ಕುಲಕ್ಕೆ ಸೇರಿದವರು. ನಮ್ಮಲ್ಲಿ ಯಾವುದೇ ಭೇದ ಇಲ್ಲ ಎಂದು ಮಾಜಿ ಸಿಎಂ ಬಿ. ಎಸ್ ಯಡಿಯೂರಪ್ಪ ಹೇಳಿದರು. ಬೆಂಗಳೂರಿನಲ್ಲಿ ಭಾನುವಾರ ನಡೆದ ಕನ್ನಡಿಗರು ಹಾಗೂ ಕರ್ನಾಟಕ ತಮಿಳರ ಸಾಂಸ್ಕೃತಿಕ ಮತ್ತು ಒಗ್ಗಟ್ಟಿನ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು. ನಾನು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ತಮಿಳರು ಮತ್ತು ಕನ್ನಡಿಗರ ನಡುವೆ ಸಾಮರಸ್ಯ ಮೂಡಿಸಲು ಯತ್ನಿಸಿದ್ದೆ. ಹಲಸೂರಿನಲ್ಲಿ ನನೆಗುದಿಗೆ ಬಿದ್ದಿದ್ದ ತಿರುವಳ್ಳವರ್ ಪ್ರತಿಮೆ ಯೋಜನೆ ಮುಗಿಸಿ ಎರಡೂ ಭಾಷಿಕರ ನಡುವೆ ಭ್ರಾತೃತ್ವ ಸೃಷ್ಟಿಸಿದ್ದೆ. ಆಗಿನ ಮುಖ್ಯಮಂತ್ರಿ ಕರುಣಾನಿಧಿ ಜತೆ ಮಾತನಾಡಿ ಚೆನ್ನೈನಲ್ಲಿ ಸರ್ವಜ್ಞರ ಪ್ರತಿಮೆ ನಿರ್ಮಿಸಲು ಕೋರಿದ್ದೆ, ಎಂದು ಅವರು ಹೇಳಿದರು. ನಾನು ಸಿಎಂ ಆಗಿ ಅಧಿಕಾರದಲ್ಲಿದ್ದ ಅವಧಿಯಲ್ಲಿ ಪ್ರತಿ ಬಾರಿಯೂ ಕರ್ನಾಟಕದಲ್ಲಿರುವ ತಮಿಳರ ಏಳಿಗೆಗೆ ಪ್ರಯತ್ನಿಸಿದ್ದೆ. ಕನ್ನಡ ಮತ್ತು ತಮಿಳು ಭಾಷಿಕರ ನಡುವೆ ಉತ್ತಮ ಬಾಂಧವ್ಯ ಸೃಷ್ಟಿಸಿದ್ದೆ. ಮುಂದೆಯೂ ಅದೇ ರೀತಿ ಇರಲು ಬಯಸುವೆ, ಎಂದು ಹೇಳಿದರು. ಕರವೇ ಅಧ್ಯಕ್ಷ ನಾರಾಯಣ ಗೌಡ ಅವರು ಮಾತನಾಡಿ ಕಾವೇರಿ ವಿಚಾರಕ್ಕೆ ಬಂದಾಗ ತಮಿಳರು ಮತ್ತು ಕನ್ನಡಿಗರ ನಡುವೆ ಅಂತರ ಸೃಷ್ಟಿಯಾಗಿರುವುದು ನಿಜ. ಉಳಿದಂತೆ ತಮಿಳುನಾಡು ಮತ್ತು ಕರ್ನಾಟಕ ನಡುವೆ ಉತ್ತಮ ಸಂಬಂಧ ಇರಬೇಕು ಎಂದು ಬಯಸುತ್ತೇನೆ,' ಎಂದು ಹೇಳಿದರು.

## ಇಶಾ ಫೌಂಡೇಷನ್‌ನಲ್ಲಿ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯಗಳು ನಡೆದಿವೆ: ಮಾಜಿ ಸಿಬ್ಬಂದಿ ಆರೋಪ

**ಹೈದರಾಬಾದ್:** ಸದ್ಗುರು ಜಗ್ಗಿ ವಾಸುದೇವ ನಡೆಸುತ್ತಿರುವ ಇಶಾ ಫೌಂಡೇಷನ್ (ಇಷಾ ಪ್ರತಿಷ್ಠಾನ) ಆಧ್ಯಾತ್ಮಿಕತೆಯ ಸೋಗಿನಲ್ಲಿ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ನಡೆಸುವವರ ಕೇಂದ್ರವಾಗಿದೆ ಎಂದು ಅದರ ಇಬ್ಬರು ಮಾಜಿ ಸಿಬ್ಬಂದಿಗಳು ಆರೋಪಿಸಿದ್ದಾರೆ ಎಂದು thesouthfirst.com ವರದಿ ಮಾಡಿದೆ. ಗುರುವಾರ ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಇಶಾ ಹೋಮ್ ಸ್ಕೂಲ್ನ ಮಾಜಿ ಅಧ್ಯಾಪಕಿ ಯಾಮಿನಿ ರಾಗನಿ ಮತ್ತು ಅವರ ಪತಿ, ಆಂಧ್ರಪ್ರದೇಶ ಮತ್ತು ತೆಲಂಗಾಣ ಪ್ರಾದೇಶಿಕ ಸಮಿತಿಯ ಮಾಜಿ ಸದಸ್ಯ ಸತ್ಯ ಎನ್.ರಾಗನಿ ಅವರು ಪ್ರತಿಷ್ಠಾನವು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಪ್ರಕರಣಗಳ ಆರೋಪಗಳನ್ನು ಮಾಡಿದರು. ಪ್ರತಿಷ್ಠಾನಕ್ಕೆ ಸಂಬಂಧಿಸಿದ ಇತ್ತೀಚಿನ ದೌರ್ಜನ್ಯ ಪ್ರಕರಣಗಳಿಗೆ ತಾವೇ ಹೊಣೆ ಎಂದು ಭಾವಿಸಿರುವುದರಿಂದ ಇದೀಗ ಮಾಧ್ಯಮಗಳ ಮುಂದೆ ಬಂದಿದ್ದೇವೆ ಎಂದು ಸತ್ಯಾ ತಿಳಿಸಿದರು. ಪೋಕ್ಸೊ ಕಾಯ್ದೆಯಡಿ ಆರೋಪ ಎದುರಿಸುತ್ತಿರುವ, ಪ್ರತಿಷ್ಠಾನದೊಂದಿಗೆ ಗುರುತಿಸಿಕೊಂಡಿರುವ ವೈದ್ಯರೋರ್ವರನ್ನು ಉಲ್ಲೇಖಿಸಿದ ದಂಪತಿ, ಎಫ್ಐಆರ್ ದಾಖಲಾಗಿದ್ದರೂ ತನಿಖೆಯಲ್ಲಿ ವಿಳಂಬವಾಗಿದೆ ಎಂದು ಹೇಳಿದರು. ಇಶಾ ಹೋಮ್ ಸ್ಕೂಲ್ನಲ್ಲಿ ವಿಶ್ವ ಯೋಗ ದಿನದಂದು ಮಗುವೊಂದು ವಿದ್ಯುದಾಘಾತದಿಂದ ಸಾವನ್ನಪ್ಪಿದ ಇನ್ನೊಂದು ಘಟನೆಯ ಬಗ್ಗೆ ಸತ್ಯ ಮಾತನಾಡಿದರು. '2013ರಲ್ಲಿ ಇದೇ ರೀತಿಯ ಘಟನೆಗಳು ಸಂಭವಿಸಿದ್ದಾಗ ನಮಗೆ ಮಾತನಾಡಲು ಅವಕಾಶವಿತ್ತು, ಆದರೆ ನಾವು ಪ್ರತಿಷ್ಠಾನದ ಸ್ವಯಂಸೇವಕರಾಗಿದ್ದರಿಂದ ಆ ಬಗ್ಗೆ ಗಮನ ಹರಿಸಿರಲಿಲ್ಲ 'ಎಂದ ಸತ್ಯ, 'ನನ್ನ ಪತ್ನಿ ಈ ವರ್ಷದ ಜೂನ್ನಲ್ಲಿ ತನ್ನ ಪ್ರಾಧ್ಯಾಪಕಿ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ.

## ಮುನಿಸ್ವಾಮಿ ತಿರುಗೇಟು

**ಕೋಲಾರ :** ನಸೀರ್ ಅಹಮದ್ ಅವರ ಕೊಡುಗೆ ಏನು ಕೋಲಾರಿಗೆ. ಅವರ ಅಭಿವೃದ್ಧಿ ಶೂನ್ಯ. ನಗರದಲ್ಲಿರುವ ಮುಸಾಲ್ಮಾನರ ಗಲ್ಲಿಗ್ಗಳಲ್ಲಿ ಕೊಳಚೆ ನೀರು ಕಸ ಕಡ್ಡಿ ತುಂಬಿ ಗಬ್ಬುವಾಸನೆ ಬರುತ್ತಿದೆ. ಒಂದು ರೂಪಾಯಿ ಕೆಲಸ ಮಾಡಿಲ್ಲ. ಏನಾದ್ರು ಮಾಡಿದ್ರೆ ಹೇಳ್ತೀರಾ. ನನ್ ಬಗ್ಗೆ ಮಾತಾಡೋ ಅಷ್ಟು ದೊಡ್ಡ ವ್ಯಕ್ತಿ ಅಲ್ಲ ನೀನು. ಮಿಸ್ಟರ್ ನಸೀರ್ ಅಹಮದ್ ಅವರೆ ನಾನು ನಿಮ್ಮತರ ನಾಮಿನೇಟೆಡ್ ಒಐಅ ಅಲ್ಲ. ಎಲೆಕ್ಟ್ ಬಾಡಿ ಎಂದು ಮಾಜಿ ಸಂಸದ ಎಸ್ ಮುನಿಸ್ವಾಮಿ ತಿರುಗೇಟು ನೀಡಿದರು. ನಗರ ಹೊರವಲಯದ ಜಿಲ್ಲಾ ಬಿಜೆಪಿ ಕಛೇರಿಯಲ್ಲಿ ಶನಿವಾರದಂದು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಕಾಂಗ್ರೆಸ್ ಸರ್ಕಾರ ಭ್ರಷ್ಟ ಸರ್ಕಾರ. ಅವರ ಸರ್ಕಾರದ ಅವಧಿಯಲ್ಲಿ ಯಾವುದೇ ಅಭಿವೃದ್ಧಿ ಇಲ್ಲ. ಅಭಿವೃದ್ಧಿ ಮಾಡಲು ಖಜಾನೆಯಲ್ಲಿ ಕಾಸಿಲ್ಲ. ಕಾಂಗ್ರೆಸ್ ಶಾಸಕರೇ ರಸ್ತೆಗಿಳಿದು ಪ್ರತಿಭಟನೆ ಮಾಡಲು ತಯಾರಾಗುತ್ತಿದ್ದಾರೆ. ಸಿದ್ದರಾಮಯ್ಯ ಅವರು ಮುಡಾ ಹಗರಣದಲ್ಲಿ ಯಾವುದೇ ತಪ್ಪು ಮಾಡಿಲ್ಲ ಅಂತಾರೆ ಆಗಾದರೆ ಆ ಸೈಟುಗಳನ್ನು ವಾಪಾಸ್ ಕೊಡಲು ನಿರ್ಧಾರ ಮಾಡಿದ್ದೇಕೆ. ಇವರ ಅವಧಿಯಲ್ಲಿ ವಾಲ್ಮೀಕಿ ನಿಗಮದ ಹಣವನ್ನು ದೋಚುವ ಕೆಲಸ ಪಕ್ಷದವರೇ ಮಾಡಿದ್ದಾರೆ. ಇದಕ್ಕಿಂತ ಇನ್ಯಾವ ಸಾಕ್ಷಿಗಳು ಬೇಕು. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ನಾಲಾಯಕ್. ಹಾಗಾಗಿ ಕೂಡಲೇ ಅವರು ರಾಜೀನಾಮೆ ಕೊಡಬೇಕು. ಮುಡಾ ಹಗರಣದ ವಿಚಾರ ಸೂಕ್ತ ತನಿಖೆಯಗಲು ಸಿಬಿಐಗೆ ಒಪ್ಪಿಸಬೇಕು ಎಂದರು. ಈ ಸಮಯದಲ್ಲಿ ಜಿಲ್ಲಾ ಬಿಜೆಪಿ ಮುಖಂಡರಾದ ಎಸ್ ಬಿ ಮುನಿವೆಂಕಟಪ್ಪ, ವಿಜಿಕುಮಾರ್, ಕೆಂಬೋಡಿ ನಾರಾಯಣಸ್ವಾಮಿ, ಕೋಲಾರ್ ಸೂರಿ ಇದ್ದರು.

## ಒಳಮೀಸಲಾತಿ ಜಾರಿಗೊಳಿಸಲು ಸಭೆ

**ಬೆಂಗಳೂರು:** ಸುಪ್ರೀಂಕೋರ್ಟ್ ನ ತೀರ್ಪಿನಂತೆ ಒಳಮೀಸಲಾತಿ ಜಾರಿಗೊಳಿಸಲು ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಇಂದು ನಮ್ಮ ಸಮುದಾಯದ ಎಲ್ಲಾ ಮಂತ್ರಿಗಳು ಶಾಸಕರು ಮಾಜಿ ಸಚಿವರು, ಮಾಜಿ ಸಂಸದರು ಸಭೆಯನ್ನು ನಡೆಸಿದ್ದು. ಮುಖ್ಯಮಂತ್ರಿಗಳು ಮುಂದಿನ ಕ್ಯಾಬಿನೆಟ್ ನಲ್ಲಿ ಇದರ ಕುರಿತು ಚರ್ಚೆ ನಡೆಸಿ ಅಂತಿಮವಾಗಿ ಹೈಕಮಾಂಡ್ ನ ಒಪ್ಪಿಗೆ ಪಡೆದು ಜಾರಿಗೊಳಿಸಲು ಬದ್ದರಾಗಿದ್ದಾರೆ ಎಂದರು. ಒಳಮೀಸಲಾತಿ ಜಾರಿಯಾಗುವವರೆಗೂ ಯಾವುದೇ ನೇಮಕಾತಿಗಳು ಆಗದೆ ಅವುಗಳು ರದ್ದು ಮಾಡಲು ಮುಖ್ಯಮಂತ್ರಿ ಗಳಿಗೆ ಮನವಿ ನೀಡಿದ್ದು ಯಾವುದೇ ನೇಮಕಾತಿ ಮಾಡದಿರಲು ಮುಖ್ಯಮಂತ್ರಿಗಳು ಸ್ಪಂದಿಸಿದ್ದು ಒಳ ಮೀಸಲಾತಿ ಜಾರಿಗೊಳಿಸಲು ನಮ್ಮ ಸರ್ಕಾರ ಬದ್ದವಾಗಿದೆ ಎಂದರು.

## ಗ್ರಾಮ ಪಂಚಾಯಿತಿಗಳ ಉಪಚುನಾವಣೆ ವೇಳಾಪಟ್ಟಿ ಪ್ರಕಟಿಸಿದ ಆಯೋಗ

**ಬೆಂಗಳೂರು:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 308ರಲ್ಲಿ ದತ್ತವಾಗಿರುವ ಅಧಿಕಾರದ ಮೇರೆಗೆ ವಿವಿಧ ಕಾರಣಗಳಿಂದಾಗಿ ತೆರವಾಗಿರುವ ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನಗಳಿಗೆ ರಾಜ್ಯ ಚುನಾವಣಾ ಆಯೋಗವು ಉಪಚುನಾವಣೆ ಘೋಷಣೆ ಮಾಡಿದ್ದು, ವೇಳಾಪಟ್ಟಿಯನ್ನು ಪ್ರಕಟಿಸಿದೆ. ರಾಜ್ಯದ 195 ತಾಲೂಕಿನ 531 ಗ್ರಾಮಪಂಚಾಯಿತಿಗಳ ಒಟ್ಟು 641 ಸ್ಥಾನಗಳಿಗೆ ಚುನಾವಣೆ ಪ್ರಕಟಿಸಲಾಗಿದೆ. ನವೆಂಬರ್ 6ರಂದು ಚುನಾವಣೆಗೆ ಅಧಿಸೂಚನೆ ಪ್ರಕಟವಾಗಲಿದ್ದು, ನವೆಂಬರ್ 12ರಂದು ನಾಮಪತ್ರ ಸಲ್ಲಿಕೆ ಮಾಡಲು ಕೊನೆಯ ದಿನವಾಗಿದೆ. ನವೆಂಬರ್ 13ರಂದು ನಾಮಪತ್ರಗಳ ಪರಿಶೀಲನೆ ಕಾರ್ಯ ನಡೆಯಲಿದೆ. ನವೆಂಬರ್ 15ರಂದು ನಾಮಪತ್ರಗಳ ವಾಪಸ್ ಪಡೆಯಲು ಕಡೆಯ ದಿನವಾಗಿದೆ. ನವೆಂಬರ್ 23ರಂದು ಚುನಾವಣೆ ನಡೆಯಲಿದ್ದು, ಮರು ಮತದಾನ ಅವಶ್ಯವಿದ್ದರೆ ನವೆಂಬರ್ 25 ರಂದು ಜರುಗಲಿದೆ. ನವೆಂಬರ್ 26ರಂದು ಮತ ಎಣಿಕೆ ನಡೆಯಲಿದೆ. ಚುನಾವಣೆ ನಡೆಯುವ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ನವೆಂಬರ್ 6 ರಿಂದ 26 ರವರೆಗೆ ಚುನಾವಣಾ ನೀತಿ ಸಂಹಿತೆಯು ಜಾರಿಯಲ್ಲಿರುತ್ತದೆ ಎಂದು ಚುನಾವಣಾ ಆಯೋಗವು ಪ್ರಕಟಣೆಯಲ್ಲಿ ತಿಳಿಸಿದೆ.

## ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಣೆ

**ಮೈಸೂರು:** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯನ್ನು ಅಕ್ಟೋಬರ್ 23 ರಂದು ಬೆಳಗ್ಗೆ 10.30 ಗಂಟೆಗೆ ಕರ್ನಾಟಕ ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.



ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರ ಘನ ಉಪಸ್ಥಿತಿಯಲ್ಲಿ, ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಡಾ.ಹೆಚ್.ಸಿ ಮಹದೇವಪ್ಪನವರು ಕಾರ್ಯಕ್ರಮದ ಉದ್ಘಾಟನೆ ಮಾಡಲಿದ್ದು, ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ಹರೀಶ್ ಗೌಡ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವರಾದ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷರು ಹಾಗೂ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಅನಿಲ್ ಕುಮಾರ್.ಸಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷರಾದ ಎ.ಬಿ ರಮೇಶ್ ಬಂಡಿ ಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ.ಪುಷ್ಪ ಅಮರನಾಥ್ ಅವರು ಗೌರವ ಉಪಸ್ಥಿತರಿರಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಶಾಸಕರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದ ಶಾಸಕರಾದ ಸುನಿಲ್ ಬೋಸ್ ಅವರು ಆಗಮಿಸಲಿದ್ದಾರೆ. ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ತನ್ವೀರ್ ಸೇಠ್, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಟಿ ದೇವೇಗೌಡ, ಕೃಷ್ಣರಾಜನಗರ ವಿಧಾನಸಭಾ ಶಾಸಕರಾದ ರವಿಶಂಕರ್ ಡಿ, ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಟಿ.ಎಸ್.ಶ್ರೀವತ್ಸ, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಧ್ರುವನಾರಾಯಣ್, ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಡಿ ಹರೀಶ್ ಗೌಡ ಹಾಗೂ ವಿಧಾನ ಪರಿಷತ್ ಸದಸ್ಯರುಗಳಾದ ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ.ಮಾದೇಗೌಡ, ಯತಿಂದ್ರ.ಎಸ್ ಮತ್ತು ವಿವೇಕಾನಂದ. ಎಸ್ ಅವರು ಸಮಾರಂಭದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಮೈಸೂರು ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮರಿಸ್ವಾಮಿ ಹಾಗೂ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್ ಖಾನ್ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಮೈಸೂರು ಬಸವ ಜ್ಞಾನ ಮಂದಿರದ ಪೀಠಾಧ್ಯಕ್ಷರಾದ ಡಾ.ಮಾತೆ ಬಸವಾಂಜಲಿ ದೇವಿ ಅವರ ದಿವ್ಯ ಸಾನಿಧ್ಯದಲ್ಲಿ ಮಂಡ್ಯ ಹಿರಿಯ ಸಾಹಿತಿಗಳಾದ ಡಾ.ಪ್ರದೀಪ್ ಕುಮಾರ್ ಹೆಬ್ರಿ ಅವರು ಉಪನ್ಯಾಸ ಮಾಡಲಿದ್ದಾರೆ.

### ದೇಶಹಳ್ಳಿ ಕೆರೆಯಲ್ಲಿ ಘೋರ ದುರಂತ

# ಇಬ್ಬರು ಯುವಕರು ನೀರುಪಾಲು

**ಮಂಡ್ಯ :** ಮದ್ದೂರು ತಾಲೂಕಿನ ದೇಶಹಳ್ಳಿ ಗ್ರಾಮದ ಶ್ರೀ ಮದ್ದೂರಮ್ಮನ ಕೆರೆಯಲ್ಲಿ ಈಜಲು ಹೋದ ಇಬ್ಬರು ಯುವಕರು ನೀರು ಪಾಲಾಗಿರುವ ದುರ್ಘಟನೆ ಭಾನುವಾರ ಸಂಜೆ ಜರುಗಿದೆ. ಮದ್ದೂರು ತಾಲೂಕಿನ ಶಂಕರಪುರ ಗ್ರಾಮದ ಸೋಮು ಅವರ ಪುತ್ರ ಮುತ್ತುರಾಜು (14) ಮತ್ತು ತೇಜಸ್ ರವರ ಪುತ್ರ ರಂಜು (17) ಮೃತಪಟ್ಟ ಯುವಕರಾಗಿದ್ದಾರೆ. ಇಬ್ಬರು ಯುವಕರು ಭಾನುವಾರ ಮಧ್ಯಾಹ್ನ ತಮ್ಮ ಸ್ನೇಹಿತರೊಂದಿಗೆ ಕೆರೆಗೆ ಈಜಲು ಹೋಗಿದ್ದಾರೆ. ಕೆಲಕಾಲ ಆಟವಾಡಿದ್ದು, ಬಳಿಕ ಕೆರೆ ನೀರಿನ



ಆಳಕ್ಕೆ ಹೋದ ಪರಿಣಾಮ ನೀರಿನಲ್ಲಿ ಸಿಲುಕಿ ಮೃತಪಟ್ಟಿದ್ದಾರೆ. ಐವರು ಯುವಕರು ಕೆರೆಗೆ ಈಜಲು ಹೋಗಿದ್ದು, ಇಬ್ಬರು ಮೃತಪಟ್ಟಿದ್ದು, ಮೂವರು ಸ್ಥಳದಿಂದ ಆತಂಕಗೊಂಡು ಓಡಿ ಹೋಗಿದ್ದಾರೆ. ಮೃತ ಯುವಕ ಮುತ್ತುರಾಜು ಎಸ್ ಎಸ್ ಎಲ್ ಸಿ ವ್ಯಾಸಂಗ ಮಾಡುತ್ತಿದ್ದು, ರಂಜು ಸೋಮನಹಳ್ಳಿಯ ಐಟಿಐ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ ಎಂದು ತಿಳಿದು ಬಂದಿದೆ. ಇನ್ನು ತಿಳಿದು ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ದಳ ಮತ್ತು ಪೋಲೀಸರು ಮೃತದೇಹಗಳ ಶೋಧ ಕಾರ್ಯ ನಡೆಸುತ್ತಿದ್ದಾರೆ. ಬೆಸಗರಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಮಳೆಗೆ 5 ಮನೆಗಳು ಕುಸಿತ

**ಶಿವಮೊಗ್ಗ:** ರಾಜ್ಯ ರಾಜಧಾನಿ ಬೆಂಗಳೂರು ಮಾತ್ರವಲ್ಲ, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವರುಣಾರ್ಭಟ ಜೋರಾಗಿದ್ದು, ಜನರ ಬದುಕು ಅಯೋಮಯವಾಗಿದೆ. ಶಿವಮೊಗ್ಗ ಜಿಲ್ಲೆಯಲ್ಲಿ ಮಳೆ ಅಬ್ಬರಕ್ಕೆ 5 ಮನೆಗಳು ಕುಸಿದು ಬಿದ್ದಿವೆ. ಶಿವಮೊಗ್ಗ ಜಿಲ್ಲೆಯಲ್ಲಿ ಮಳೆಯ ಅವಾಂತರದಿಂದಾಗಿ ಜನಜೀವನ ಅಸ್ತವ್ಯಸ್ತವಾಗಿವೆ. ಧಾರಾಕಾರ ಮಳೆಯಿಂದಾಗಿ ತುಂಗಾ ಕಾಲುವೆ ಉಕ್ಕಿ ಹರಿಯುತ್ತಿದ್ದು, ವಿನೋಬಾನಗರದ ಮೊದಲ ಹಂತದಲ್ಲಿ 5 ಮನೆಗಳು ಕುಸಿದು ಬಿದ್ದಿವೆ. ರಾಜಕಾಲುವೆ ನೀರು ರಸ್ತೆ ಮೇಲೆ ಹರಿಯುತ್ತಿದ್ದು, ವೆಂಕಟೇಶ ನಗರದ ಐದು ಕ್ರಾಸ್ ಗಳಿಗೆ ನೀರು ನುಗ್ಗಿದೆ. ಇದರಿಂದಾಗಿ ಮನೆಗಳಲ್ಲಿ ಮೂರು ಅಡಿಯಷ್ಟು ನೀರು ನಿಂತಿದೆ. ಮನೆಗಳಲ್ಲಿರುವ ದಿನಸಿ ಸಾಮಾನುಗಳು ನೀರುಪಾಲಾಗಿದ್ದು, ಊಟಕ್ಕೂ ಪರದಾಡುವಂತಹ ಸ್ಥಿತಿ ನಿರ್ಮಾಣವಾಗಿದೆ. ಇನ್ನೊಂದೆಡೆ ಗೋಪಾಲ ಬಡಾವಣೆ ಜಲಾವೃತಗೊಂಡಿದ್ದು ಜನರು ಸಂಕಷ್ಟಕ್ಕೀಡಾಗಿದ್ದಾರೆ. ಮಳೆಯಿಂದಾಗಿ



ಪರ್ವೀನ್ ತಾಜ್ ಚಾನೆಲ್ ಏರಿಯಾ 18ನೇ ವಾರ್ಡ್ 7ನೇ ಕ್ರಾಸ್ ನ ಲ್ಲಿನ ಶಾಂತಮ್ಮ ಮೋಹನ್ ಎಂಬುವವರ ಮನೆ ಕುಸಿದು ಬಿದ್ದಿದೆ. ಗಾಜನೂರು ಸಕ್ರೆಬೈಲ್ ಬಳಿಯ ಫಿಶ್ ಹೋಟೆಲ್ ಜಲಾವೃತಗೊಂಡಿದೆ. ಶಿವಮೊಗ್ಗ ಹಾಗೂ ಸವಳಂಗ ಮಾರ್ಗದಲ್ಲಿ ರಸ್ತೆ ಮೇಲೆ ನೀರು ನಿಂತಿದ್ದು, ವಾಹನ ಸಂಚಾರಕ್ಕೆ ಅಡ್ಡಿಯುಂಟಾಗಿದೆ. ತುಂಗಾ ಕಾಲುವೆ ಅಬ್ಬರಕ್ಕೆ ನವೋದಯ ಶಾಲೆ ಬಳಿ ನೀರು ಉಕ್ಕಿ ಹರಿಯುತ್ತಿದ್ದು, ಅಡಿಕೆ ತೋಟಗಳು ಸಂಪೂರ್ಣ ನೀರಿನಿಂದ ತುಂಬಿದೆ. ಭತ್ತದ ಗದ್ದೆಗಳು, ತೋಟಗಳು ಜಲಾವೃತಗೊಂಡಿದ್ದು, ಜನರು ಬದುಕು ಮೂರಾಬಟ್ಟೆಯಾಗಿದೆ.

## ಮಾದಪ್ಪನ ಬೆಟ್ಟದ ಬಸ್ ಚಾಲಕನಿಂದಲೇ ಮದ್ಯ ಸಾಗಾಟ– ಬಂಧನ

**ಚಾಮರಾಜನಗರ:** ನಾಡಿನ ಪುಣ್ಯಕ್ಷೇತ್ರಗಳಲ್ಲಿ ಒಂದಾದ ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಅಕ್ರಮ ಮದ್ಯ ಸಾಗಾಟ ನಡೆಸುವಾಗ ಪ್ರಾಧಿಕಾರದ ಬಸ್ ಚಾಲಕನೇ ಸಿಕ್ಕಿಬಿದ್ದಿದ್ದಾನೆ.

ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟ ಪ್ರಾಧಿಕಾರದ ಬಸ್ ಚಾಲಕ ರಾಜು ಎಂಬಾತ ಬಂಧಿತ ಆರೋಪಿ. ಬಸ್ ನಲ್ಲಿ ಕ್ಷೇತ್ರಕ್ಕೆ ಬೆಂಗಳೂರು, ಮೈಸೂರು, ಕೊಳ್ಳೇಗಾಲದಿಂದ ಭಕ್ತಾದಿಗಳನ್ನು ಕರೆತರುವ ಜೊತೆಗೆ ಅಕ್ರಮವಾಗಿ ಮದ್ಯ ಸಾಗಾಟ ನಡೆಸುತ್ತಿದ್ದನು. ಅಕ್ರಮ ಮದ್ಯ ಸಾಗಾಟದ ಖಚಿತ ಮಾಹಿತಿ ಮೇರೆಗೆ ಮಲೆ ಮಹದೇಶ್ವರ ಬೆಟ್ಟ ಪೊಲೀಸರು ದಾಳಿ ನಡೆಸಿ ಮದ್ಯದ ಪೌಚುಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಚಾಲಕನ ವಿರುದ್ಧ ಶಿಸ್ತು ಕ್ರಮ. ಕೈಗೊಳ್ಳುವಂತೆ ಪೊಲೀಸರು ಪ್ರಾಧಿಕಾರಕ್ಕೆ ಪತ್ರ ಕೂಡ ಬರೆದಿದ್ದಾರೆ. ದೀಪದ ಕೆಳಗೆ ಕತ್ತಲು ಎಂಬಂತೆ ಪ್ರಾಧಿಕಾರದ ಬಸ್ ನಲ್ಲೇ ಮದ್ಯ ಸಾಗಾಟ ನಡೆಸಿರುವುದಕ್ಕೆ ಭಕ್ತಾದಿಗಳು ಆಕ್ರೋಶ ಹೊರಹಾಕಿದ್ದಾರೆ.

## ವಾಲ್ಮೀಕಿ ಮೂರ್ತಿ ವಿವಾದ- ಅಧಿಕಾರಿ ವಿರುದ್ಧ ನಾಲಿಗೆ ಹರಿಬಿಟ್ಟ ಕೆ.ಎನ್.ರಾಜಣ್ಣ..!

**ತುಮಕೂರು:** ಕೊರಟಗೆರೆಯಲ್ಲಿ ವಾಲ್ಮೀಕಿ ಮೂರ್ತಿಯ ವಿವಾದಕ್ಕೆ ಸಂಬಂಧಪಟ್ಟಂತೆ ವಾಲ್ಮೀಕಿ ಜಯಂತೋತ್ಸವ ಕಾರ್ಯಕ್ರಮದಲ್ಲಿ ಸಹಕಾರಿ ಸಚಿವ ಕೆ.ಎನ್ ರಾಜಣ್ಣ ಮಾತನಾಡಿದ್ದಾರೆ. ರಾತ್ರೋ ರಾತ್ರಿ ಕೊರಟಗೆರೆಯಲ್ಲಿ ವಾಲ್ಮೀಕಿ ಪ್ರತಿಮೆ ಇಟ್ಟ ವಿಚಾರದ ಬಗ್ಗೆ ಕೆ.ಎನ್ ರಾಜಣ್ಣ ಗರಂ ಆಗಿದ್ದಾರೆ.

ಕೊರಟಗೆರೆಯಲ್ಲಿ ಮೂರ್ತಿ ಇಟ್ಟುಬಿಟ್ಟರು. ಯಾಕಪ್ಪ ಹಾಗೇ ಮಾಡಲು ಹೋದ್ರಿ. ಏನೇ ಕೆಲಸ ಮಾಡಬೇಕಾದರೂ ವ್ಯವಸ್ಥಿತವಾಗಿ ಮಾಡಬೇಕು. ಕದ್ದು ಇಡುವಂತಹದು ಯಾಕೆ..?. ಈ ರೀತಿಯ ಕಾರ್ಯ ಮಾಡ್ಬೇಕಾದ್ರೆ ಎಲ್ಲರೂ ಸೇರಿಕೊಳ್ಳೋಣ, ಒಟ್ಟಿಗೆ ಮೂರ್ತಿ ಇಡೋಣ. ಆದರೆ ನೀವು ದಿಢೀರ್ ಅಂತ ಇಟ್ಟಿದ್ದೀರಿ. ಅವನ್ಯಾರೋ ಅಧಿಕಾರಿ ಮೂರ್ಖ ರಾತ್ರೋರಾತ್ರಿ ಅದನ್ನ ತೆಗೆದುಬಿಟ್ಟಿದ್ದಾನೆ. ಅದರ ಬದಲು ಜನರಿಗೆ ಮನವೊಲಿಸಿ ಇನ್ನೊಂದು ಕಡೆ ಇಡಬಹುದಾಗಿತ್ತು ಎಂದಿದ್ದಾರೆ.



ನೀವು ಮಾಡೋದು ತಪ್ಪು, ಅವರು ಮಾಡೋದು ತಪ್ಪು. ಯಾರೇ ಆಗಲಿ ಕಾನೂನು ಕೈಗೆ ಎತ್ತಿಕೊಳ್ಳಬಾರದು ಎಂದ ಅವರು ಮುಡಾ ಹಗರಣದ ಬಗ್ಗೆಯೂ ಮಾತನಾಡಿದ್ದಾರೆ. ಈ ಪ್ರಕರಣದಲ್ಲಿ ಸಿದ್ದರಾಮಯ್ಯ ಏನು ತಮಗೆ ಸೈಟ್ ಬೇಕು ಅಂತ ಅರ್ಜಿ ಹಾಕಿದ್ರಾ..? ಯಾರಿಗಾದ್ರೂ ಫೋನ್ ಮಾಡಿದ್ರಾ..? 15 ವರ್ಷದ ಹಿಂದಿನ ನಡವಳಿಕೆಗಳನ್ನ, ಇಂದಿನ ರಾಜಕೀಯ ಅಧಿಕಾರವನ್ನ ದುರುಪಯೋಗ ಮಾಡಿಕೊಂಡು ಅವರಿಗೆ ಕೆಟ್ಟ ಹೆಸರು ಬರುವಂತೆ ಕೆಲಸ ಮಾಡ್ತಿದ್ದಾರೆ ಎಂದು ಆರೋಪ ಮಾಡಿದ್ದಾರೆ.

ಸಿಎಂ ಸಿದ್ದರಾಮಯ್ಯ ಅನ್ನಭಾಗ್ಯ ಯೋಜನೆ ತಂದವರು. ಹಸಿವಿನಿಂದ ಯಾರೂ ಮಲಗಬಾರದು ಅಂತ ಈ ಯೋಜನೆ ಮಾಡಿದ್ರು. ಸಿಎಂ ಸಿದ್ದರಾಮಯ್ಯ ಏನು ಕುರುಬರಿಗೆ ಮಾತ್ರ ಅನುಕೂಲ ಮಾಡಿದ್ರಾ..? ಎಲ್ಲಾ ಜಾತಿಯ ಬಡವರು ನೆಮ್ಮದಿಯ ಜೀವನ ಮಾಡ್ಲಿ ಅಂತ ಅದನ್ನ ಮಾಡಿದ್ರು. ಅವರ ವಿರುದ್ಧದ ಈ ಆರೋಪಗಳು ಸುಳ್ಳು ಎಂದು ಅಲ್ಲಗಳೆದಿದ್ದಾರೆ.

## ಚುನಾವಣಾ ವೀಕ್ಷಕರು ಆಯೋಗದ ಕಣ್ಣು, ಕಿವಿಗಳಿದ್ದಂತೆ

**ರಾಮನಗರ:** ಚುನಾವಣೆಗೆ ನಿಯೋಜಿಸಲಾದ ವೀಕ್ಷಕರು ಕೇಂದ್ರ ಚುನಾವಣಾ ಆಯೋಗದ ಕಣ್ಣು ಹಾಗೂ ಕಿವಿಗಳಂತೆ ಕೆಲಸ ಮಾಡುತ್ತಾರೆ. ಚುನಾವಣಾ ಪ್ರಕ್ರಿಯೆಗಳನ್ನು ಸೂಕ್ಷ್ಮವಾಗಿ ಗಮನಿಸಿ, ಕಾಲಕಾಲಕ್ಕೆ ಚುನಾವಣಾ ಆಯೋಗ ಹೊರಡಿಸುವ ಮಾರ್ಗಸೂಚಿಗಳಂತೆ ಕರ್ತವ್ಯ ನಿರ್ವಹಿಸಿ ವರದಿ ಮಾಡುವ ಕೆಲಸವನ್ನು ಅವರು ಮಾಡುತ್ತಾರೆ ಎಂದು ಚನ್ನಪಟ್ಟಣ ಉಪ ಚುನಾವಣೆಗೆ ಖರ್ಚುವೆಚ್ಚಗಳ ವೀಕ್ಷಕರಾಗಿ ನಿಯೋಜಿಸಲಾಗಿರುವ ಐಆರ್‌ಎಸ್ ಅಧಿಕಾರಿ ಪ್ರಶಾಂತ್ ಗಡೇಕರ್ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಚನ್ನಪಟ್ಟಣ ಉಪ ಚುನಾವಣೆಗೆ ಸಂಬಂಧಿಸಿದಂತೆ ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ಚುನಾವಣೆಗಾಗಿ ಮಾಡುವ ಖರ್ಚುವೆಚ್ಚಗಳಿಗೆ ಸಂಬಂಧಿಸಿದಂತೆ ಪ್ರತಿದಿನ ನಿಗದಿತ ನಮೂನೆಯಲ್ಲಿ ವರದಿ ಸಲ್ಲಿಸುವಂತೆ ಸಹಾಯಕ ವೆಚ್ಚ ವೀಕ್ಷಕರು ಹಾಗೂ ಅವರ ತಂಡಕ್ಕೆ ಸೂಚಿಸಿದರು.

ಈ ಉಪ ಚುನಾವಣೆಗೆ ನಿಯೋಜಿಸಲಾದ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಗಳು ಮುಕ್ತ ಹಾಗೂ ಪಾರದರ್ಶಕವಾಗಿ ಕರ್ತವ್ಯ ನಿರ್ವಹಿಸುವಂತೆ ಸಲಹೆ ನೀಡಿದ ಅವರು ಚುನಾವಣಾ ಆಯೋಗದ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ಚನ್ನಪಟ್ಟಣ ಉಪ ಚುನಾವಣೆಗೆ ಜಿಲ್ಲಾಡಳಿತದಿಂದ



ಕೈಗೊಳ್ಳಲಾಗಿರುವ ಸಿದ್ದತೆಗಳ ಬಗ್ಗೆ ಮಾಹಿತಿ ನೀಡಿದರು.

ಜಿಲ್ಲಾ ಅಪರ ಪೊಲೀಸ್ ವರಿಷ್ಠಾಧಿಕಾರಿ ಟಿ.ವಿ. ಸುರೇಶ್ ಅವರು ಪೊಲೀಸ್ ಇಲಾಖೆಯಿಂದ 276 ಮತಗಟ್ಟೆಯಲ್ಲಿ ಕೈಗೊಂಡಿರುವ ಭದ್ರತೆ, ಮತ ಎಣಿಕೆ ಕೊಠಡಿ ಹಾಗೂ ಚೆಕ್ ಪೋಸ್ಟ್‌ಗಳ ಬಳಿ ಕೈಗೊಂಡಿರುವ ಬಂದೋಬಸ್ತ್ ಕ್ರಮಗಳ ಕುರಿತು ಮಾಹಿತಿ ನೀಡಿದರು. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಚುನಾವಣಾಧಿಕಾರಿ ಬಿನೋಯ್ ಅವರು ಇದೂವರೆಗೂ ನಡೆದಿರುವ ಚುನಾವಣಾ ಪ್ರಕ್ರಿಯೆ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಚುನಾವಣಾ ಕರ್ತವ್ಯಕ್ಕೆನಿಯೋಜನೆಗೊಂಡಿರುವ ವಿವಿಧ ತಂಡಗಳ ನೋಡಲ್ ಅಧಿಕಾರಿಗಳು, ಚನ್ನಪಟ್ಟಣದ ಡಿವೈಎಸ್‌ಪಿ ಗಿರಿ ಹಾಗೂ ಇತರೆ ಅಧಿಕಾರಿಗಳಿದ್ದರು.

# ಸಂಜೆ ಟಿಪ್ಸ್

## ಬೆಂಗಳೂರಿನಲ್ಲಿ 350 ಜಾವಾ 42 ಎಫ್ಜೆ ಅನಾವರಣಗೊಳಿಸಿದ ಜಾವಾ ಯೆಜ್ಡಿ ಮೋಟರ್ ಸೈಕಲ್ಸ್

ಭಾರತದಲ್ಲಿ 'ನಿಯೊ-ಕ್ಲಾಸಿಕ್' ಮೋಟರ್ಸೈಕಲ್ ವಿಭಾಗದ ಪ್ರವರ್ತಕ ಕಂಪನಿಯಾಗಿರುವ ಜಾವಾ ಯೆಜ್ಡಿ ಮೋಟರ್ಸೈಕಲ್ಸ್, ಸಂಪೂರ್ಣ ಹೊಸದಾದ 350 ಜಾವಾ 42 ಎಫ್ಜೆ ಮೋಟರ್ ಸೈಕಲ್ ಅನ್ನು ಕರ್ನಾಟಕದ ಮಾರುಕಟ್ಟೆಗೆ ಪರಿಚಯಿಸಿದೆ. ಇದು ಜಾವಾ 42 ಲೈಫ್ ಶ್ರೇಣಿಗೆ ಹೊಸ ಸೇರ್ಪಡೆಯಾಗಿದೆ. ಬ್ರ್ಯಾಂಡ್ನ ಸಂಸ್ಥಾಪಕ ಫ್ರಾಂಟಿಸೆಕ್ ಜಾನೆಚೆಕ್ಗೆ ಗೌರವ ಸಲ್ಲಿಸುವ ಈ ಹೊಸ ಮೋಟರ್ಸೈಕಲ್, ಈಗಾಗಲೇ 42 ಮತ್ತು 42 ಬಾಬರ್ನಂತಹ ಮಾದರಿಗಳೊಂದಿಗೆ ಸವಾರರನ್ನು ಆಕರ್ಷಿಸಿರುವ ಜಾವಾ 42 ಸರಣಿಗೆ ಮತ್ತೊಂದು ಮಹತ್ವದ ಸೇರ್ಪಡೆಯಾಗಿದೆ. ಸದ್ಯಕ್ಕೆ ನಡೆಯುತ್ತಿರುವ ಹಬ್ಬಗಳ ರೋಮಾಂಚಕ ಆಚರಣೆಗಳ ಮಧ್ಯೆ, ಈ ಪ್ರದೇಶದಲ್ಲಿನ ನಮ್ಮ ಉತ್ಸಾಹಿ ಗ್ರಾಹಕರಿಗೆ ಕೀಗಳನ್ನು ಹಸ್ತಾಂತರಿಸುವ ಮೂಲಕ ಬ್ರ್ಯಾಂಡ್, ಹೊಸ ಮೋಟರ್ಸೈಕಲ್ನ ವಿತರಣೆಗೆ ಚಾಲನೆ ನೀಡಿದೆ. ಬೆಂಗಳೂರಿನಲ್ಲಿ ಈ ಮೋಟರ್ಸೈಕಲ್ ಮಾಲೀಕರ ಮೊದಲ ಗುಂಪು, ಬೈಕ್ ತಮ್ಮ ಕೈಸೇರುತ್ತಿದ್ದಂತೆ ಉತ್ಸಾಹದಿಂದ ಕುಣಿದಾಡಿತು. ಇದು ಹೊಸ ಆರಂಭ ಉತ್ಸವದ ಸಂಭ್ರಮಾಚರಣೆಯಾಗಿತ್ತು. ಯೆಜ್ಡಿ ಮೋಟರ್ಸೈಕಲ್ಗೆ ಸಂಬಂಧಿಸಿದ ಉತ್ಸಾಹಕ್ಕೆ ಪೂರಕವಾಗಿ ಕಂಪನಿಯು ಈ ಪ್ರದೇಶದಲ್ಲಿ ನಾಲ್ಕು ಜಾವಾ ಯೆಜ್ಡಿ ಕೆಫೆಗಳನ್ನು ತೆರೆದಿದೆ. ವರ್ಷಾಂತ್ಯದ ವೇಳೆಗೆ ಇನ್ನೂ ಆರು ಇಂತಹ ಕೆಫೆಗಳನ್ನು ಪರಿಚಯಿಸಲು ಯೋಜಿಸಿದೆ. ಈ ಮೂಲಕ ಕರ್ನಾಟಕದಾದ್ಯಂತ ತನ್ನ ಮಾರಾಟ ಮತ್ತು ಸೇವಾ ಜಾಲವನ್ನು ಗಮನಾರ್ಹವಾಗಿ ವಿಸ್ತರಿಸಲಿದೆ. ಕಂಪನಿಯು ಆಕ್ರಮಣಕಾರಿ ವಿಸ್ತರಣಾ ಕಾರ್ಯತಂತ್ರದ ಮೇಲೆ ತನ್ನ ಗಮನ ಕೇಂದ್ರೀಕರಿಸಿದೆ. ಇದಕ್ಕೆ ಅನುಗುಣವಾಗಿ ಬೆಂಗಳೂರಿನಲ್ಲಿ ಆರು ಮತ್ತು ಕರ್ನಾಟಕದಾದ್ಯಂತ 11 ಡೀಲರ್ಶಿಪ್ಗಳನ್ನು ಆರಂಭಿಸಿದೆ.2024 ಜಾವಾ 42 ಮೋಟರ್ಸೈಕಲ್ ಎಂಜಿನಿಯರಿಂಗ್, ನಮ್ಮ ವಿನ್ಯಾಸ-ನೇತೃತ್ವದ ನಮ್ಮ ವಿಧಾನವನ್ನು ಪ್ರತಿಬಿಂಬಿಸುತ್ತದೆ ಎಂದು ಜಾವಾ ಯೆಜ್ಡಿ ಮೋಟರ್ಸೈಕಲ್ನ ಸಹ-ಸಂಸ್ಥಾಪಕ ಅನುಪಮ್ ಥರೇಜಾ ಅವರು ಹೇಳಿದ್ದಾರೆ.ನಾವು ಕಾರ್ಯಕ್ಷಮತೆ, ಶೈಲಿ ಮತ್ತು ನಿಖರತೆಯ ಪರಿಪೂರ್ಣ ಮಿಶ್ರಣವನ್ನು ರೂಪಿಸಲು 'ಬೆಲೆ-ಕಾರ್ಯಕ್ಷಮತೆಗೆ ಸಂಬಂಧಿಸಿದ ಅನಿಸಿಕೆಗಳನ್ನು ಬದಲಿಸಿದ್ದೇವೆ. ಭಾರತದಲ್ಲಿ ನಿಯೊ-ಕ್ಲಾಸಿಕ್ನ ಪ್ರವರ್ತಕರಾಗಿ, 42 ಎಫ್ಜೆ ನಮ್ಮ ಸವಾಲಿನ ಉತ್ಸಾಹ ಮತ್ತು ಆಮೂಲಾಗ್ರ ಬದಲಾವಣೆಯ ಸಮಗ್ರ ದೃಷ್ಟಿಕೋನವನ್ನು ಸಾಕಾರಗೊಳಿಸಲಿದೆ. ಸದ್ಯಕ್ಕೆ ನಡೆಯುತ್ತಿರುವ ಹಬ್ಬಗಳ ಜೊತೆಗೆ , ರಸ್ತೆಯ ಮೇಲಿನ ಸವಾರಿ ಹೋಗುವ ಪ್ರೀತಿ ಮತ್ತು ಸಾಹಸದ ಮನೋಭಾವದಿಂದ ಬದ್ಧವಾಗಿರುವ ಸಮುದಾಯವನ್ನು ಒಟ್ಟುಗೂಡಿಸುವ ಗುರಿಯನ್ನು ನಾವು ಹೊಂದಿದ್ದೇವೆ ಎಂದು ಹೇಳಿದ್ದಾರೆ.

## ಚಿಕನ್ ಫಿಂಗರ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಚಿಕನ್ ಬ್ರೆಸ್ಟ್ - 6, ಮೊಟ್ಟೆ - 1, ಮಜ್ಜಿಗೆ - 1 ಕಪ್, ಬೆಳ್ಳುಳ್ಳಿ ಪುಡಿ - 1 ಟೀ ಸ್ಪೂನ್, ಬೆಳ್ಳುಳ್ಳಿ ಪೇಸ್ಟ್ - 1 ಟೀ ಸ್ಪೂನ್, ಮೈದಾ ಹಿಟ್ಟು - 1 ಕಪ್, ಬ್ರೆಡ್ ಕ್ರಮ್ಸ್ - 1 ಕಪ್, ಸೋಯಾ ಸಾಸ್ - 1/2 ಟೀ ಸ್ಪೂನ್, ಮೆಣಸಿನ ಪುಡಿ - 1/2 ಟೀ ಸ್ಪೂನ್, ಚಿಲ್ಲಿ ಫ್ಲೇಕ್ಸ್ - 1/2 ಟೀ ಸ್ಪೂನ್, ಉಪ್ಪು - ರುಚಿಗೆ ತಕ್ಕಷ್ಟು, ಬೇಕಿಂಗ್ ಪೌಡರ್ - 1 ಟೀ ಸ್ಪೂನ್, ಎಣ್ಣೆ - ಕರಿಯಲು

### ಮಾಡುವ ವಿಧಾನ

ಚಿಕನನ್ನು ಸಣ್ಣದಾಗಿ ಉದ್ದ ತುಂಡುಗಳನ್ನಾಗಿ ಕತ್ತರಿಸಿಕೊಳ್ಳಿ ಒಂದು ಬೌಲ್ನಲ್ಲಿ ಅದರಲ್ಲಿ ಚಿಕನ್ ಸ್ಟ್ರಿಪ್ಸ್ ಸೇರಿಸಿ, ಅದಕ್ಕೆ ಮೊಟ್ಟೆ, ಮಜ್ಜಿಗೆ, ಬೆಳ್ಳುಳ್ಳಿ ಪುಡಿ, ಉಪ್ಪು, ಚಿಲ್ಲಿ ಫ್ಲೇಕ್ಸ್, ಸೋಯಾ ಸಾಸ್, 1 ಚಮಚ ಎಣ್ಣೆಯನ್ನು ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ಅಗತ್ಯವಿದ್ದರೆ ಈ ಮಿಶ್ರಣಕ್ಕೆ ಅರ್ಧ ಕಪ್ ನೀರು ಸೇರಿಸಿ. 20 ನಿಮಿಷಗಳ ಕಾಲ ರೆಫ್ರಿಜರೇಟರ್ನಲ್ಲಿಡಿ. ಒಂದು ಪ್ಲೇಟ್ನಲ್ಲಿ ಮೈದಾ, ಬೆಳ್ಳುಳ್ಳಿ ಪುಡಿ, ಬ್ರೆಡ್ ತುಂಡುಗಳನ್ನು ಬೆರೆಸಿ ಪಕ್ಕಕ್ಕೆ ಇರಿಸಿ. ರೆಫ್ರಿಜರೇಟರ್ನಿಂದ ತೆಗೆದ ಚಿಕನ್ ಚಿಕನ್ ತುಂಡುಗಳನ್ನು ಮೈದಾ ಮಿಶ್ರಣದಲ್ಲಿ ಅದ್ದಿ ಬಿಸಿ ಎಣ್ಣೆಗೆ ಬಿಡಿ ಚಿಕನ್ ತುಂಡುಗಳನ್ನು ಎರಡೂ ಕಡೆ ಕಂದು ಬಣ್ಣ ಬರುವವರೆಗೂ ಫ್ರೈ ಮಾಡಿ ಕ್ರಿಸ್ಪಿ, ಜ್ಯೂಸಿ ಚಿಕನ್ ಫಿಂಗರನ್ನು ಟೊಮ್ಯಾಟೋ ಸಾಸ್ ಜೊತೆ ಸವಿಯಿರಿ.

## ಪುಷ್ಪ-2 ಹೊಸ ಪೋಸ್ಟರ್ ರಿಲೀಸ್




ಈ ವರ್ಷದ ಬಹುನಿರೀಕ್ಷಿತ ಪ್ಯಾನ್ ಇಂಡಿಯಾ ಸಿನಿಮಾಗಳಲ್ಲೊಂದು ಪುಷ್ಪ-2. ಡಿಸೆಂಬರ್ 6ಕ್ಕೆ ವಿಶ್ವಾದ್ಯಂತ ಚಿತ್ರ ಬಿಡುಗಡೆಯಾಗ್ತಿದೆ. ಪುಷ್ಪ ಸೀಕ್ವೆಲ್ ತೆರೆಗೆ ಬರೋದಿಕ್ಕೆ ಹೆಚ್ಚು ಕಮ್ಮಿ 50 ದಿನಗಳು ಬಾಕಿ ಉಳಿದಿವೆ. ಈಗ ಚಿತ್ರತಂಡ ಪುಷ್ಪರಾಜ್ ನ ಹೊಸ ಲುಕ್ ಬಿಟ್ಟು ಕಿಕ್ ಹೆಚ್ಚಿಸಿದೆ.

ಇತ್ತೀಚೆಗಷ್ಟೇ ಚಿತ್ರತಂಡ ಹೊಸ ಪೋಸ್ಟರ್ ಬಿಡುಗಡೆ ಮಾಡಿದೆ. ಕಾಲು ಮೇಲೆ ಕಾಲು ಹಾಕಿ ಸೀರಿಯಸ್ ಮೋಡ್ನಲ್ಲಿ ಕುಳಿತಿರುವ ಪುಷ್ಪ ರಾಜ್ ಪೋಸ್ಟರ್ ಅನಾವರಣ ಮಾಡಲಾಗಿದೆ. ಈ ಹೊಸ ಪೋಸ್ಟರ್ಗೆ ಪ್ರೇಕ್ಷಕರು ಮತ್ತು ಅಭಿಮಾನಿಗಳು ಫಿದಾ ಆಗಿದ್ದಾರೆ.

ಪುಷ್ಪ 2 ಸಿನಿಮಾದ ಟೀಸರ್ ಹಾಗೂ ಹಾಡುಗಳು ಈಗಾಗ್ಲೇ ಭಾರೀ ಸದ್ದು ಮಾಡಿವೆ. ಮಿಲಿಯನ್ಸ್ ಗಟ್ಟಲೇ ವೀವ್ಸ್ ಪಡೆದುಕೊಂಡಿವೆ. ಮೈತ್ರಿ ಮೂವೀ ಮೇಕರ್ಸ್ ಹಾಗೂ ಸುಕುಮಾರ್ ರೈಟಿಂಗ್ ನಿರ್ಮಾಣದಡಿ ಮೂಡಿಬರ್ತಿರುವ ಪುಷ್ಪ ಸೀಕ್ವೆಲ್ ಗಾಗಿ ರಾಕ್ ಸ್ಟಾರ್ ದೇವಿಪ್ರಸಾದ್ ಸಂಗೀತ, ಮಿರೆಸ್ಲೋ ಕುಬಾ ಬ್ರೋಜೆಕ್ ಛಾಯಾಗ್ರಾಹಣ ಒದಗಿಸಿದ್ದಾರೆ.

ಈ ಚಿತ್ರಕ್ಕೆ ಸುಕುಮಾರ್ ಆಕ್ಷನ್ ಕಟ್ ಹೇಳಿದ್ದಾರೆ. ಅಲ್ಲು ಅರ್ಜುನ್ ಗೆ ಜೊತೆಯಾಗಿ ಶ್ರೀವಲ್ಲಿಯಾಗಿ ರಶ್ಮಿಕಾ ಮಂದಣ್ಣ ನಟಿಸಿದ್ದಾರೆ. ಫಹದ್ ಫಾಸಿಲ್ , ಡಾಲಿ ಧನಂಜಯ್, ಜಗಪತಿ ಬಾಬು, ಪ್ರಕಾಶ್ ರಾಜ್, ಸುನೀಲ್ ಮತ್ತು ಅನಸೂಯಾ ಪ್ರಮುಖ ಪಾತ್ರಗಳಲ್ಲಿ ನಟಿಸುತ್ತಿದ್ದಾರೆ. ಈ ಮೊದಲು ಪುಷ್ಪ ದಿ ರೂಲ್ ಸಿನಿಮಾವನ್ನು ಆಗಸ್ಟ್ 15ಕ್ಕೆ ಚಿತ್ರತಂಡ ತೆರೆಗೆ ತರಲು ಚಿತ್ರತಂಡ ಯೋಜನೆ ಹಾಕಿಕೊಂಡಿತ್ತು. ಬಳಿಕ ಚಿತ್ರದ ಕೆಲಸಗಳು ಬಾಕಿ ಉಳಿದಿದ್ದರಿಂದ ಬಿಡುಗಡೆ ದಿನಾಂಕವನ್ನು ಪೋಸ್ಟ್ ಪೋನ್ ಮಾಡಲಾಗಿತ್ತು. ಡಿಸೆಂಬರ್ 6ಕ್ಕೆ ಮುಹೂರ್ತ ಫಿಕ್ಸ್ ಮಾಡಿಕೊಂಡಿರುವ ಪುಷ್ಪರಾಜ್ ತಗ್ಗೋದೇ ಇಲ್ಲ ಅಂತಾ ತೆರೆಗಪ್ಪಳಿಸಲಿದ್ದಾನೆ.

## ಗಂಟಲಿನಲ್ಲಿ ಮೀನಿನ ಮುಳ್ಳು ಸಿಲುಕಿಕೊಂಡರೆ ಚಿಂತಿಸಬೇಡಿ



### ಹೆಲ್ತ್ ಟಿಪ್ಸ್

ಮಾಂಸ ಪ್ರಿಯರಿಗೆ ಇಷ್ಟವಾದ ಆಹಾರ ಮೀನು. ಮೀನಿನ ಪಲ್ಯ, ಹುರಿದ, ಬಿರಿಯಾನಿ. ಏನೇ ಇರಲಿ ಅಥವಾ ಹೇಗೆ ಮಾಡಿದರೂ ಮೀನುಗಳನ್ನು ಚೆನ್ನಾಗಿ ತಿಂದು ಬಾರಿಸುತ್ತಾರೆ.ಆದರೆ ಮೀನು ತಿನ್ನುವಾಗ ಅದರ ಮುಳ್ಳು ಗಂಟಲಿನಲ್ಲಿ ಸಿಲುಕಿಕೊಂಡರೆ ಏನಾಗುತ್ತದೆ? ಹಾಗಾಗಿ ಮಕ್ಕಳು ಸೇರಿ ಕೆಲವರು ಮೀನು ತಿನ್ನಲು ಹಿಂಜರಿಯುತ್ತಾರೆ.

ಮೀನಿನ ಮುಳ್ಳುಗಳು ಗಂಟಲಿನಲ್ಲಿ ಸಿಲುಕಿಕೊಂಡರೆ ಏನಾಗುತ್ತದೆ? ಆಗ ಏನು ಮಾಡಬೇಕೆಂದು ನಿಮಗೆ ತಿಳಿದಿದೆಯೇ?

ಮೀನಿನ ಮುಳ್ಳು ಗಂಟಲಿನಲ್ಲಿ ಸಿಲುಕಿಕೊಂಡರೆ, ಹೊಟ್ಟೆಯನ್ನು ಒತ್ತಲು ಯಾರಿಗಾದರೂ ಹೇಳಬೇಕು. ಇದು ಅನ್ನನಾಳಕ್ಕೆ ಗಾಳಿ ಹರಡಲು ಕಾರಣವಾಗುತ್ತದೆ.ಆಗ ಮುಳ್ಳು ಗಾಳಿಯಿಂದ ಹೊರಬರುತ್ತದೆ. ಇಲ್ಲದಿದ್ದರೆ, ಅದು ಒಳಗಿನ ಜೀರ್ಣಾಂಗವ್ಯೂಹವನ್ನು ಪ್ರವೇಶಿಸುತ್ತದೆ.

ಮೀನಿನ ಮುಳ್ಳು ಸಿಕ್ಕಿಬಿದ್ದಾಗ ವ್ಯಕ್ತಿಯ ಬೆನ್ನಿಗೆ ಹೊಡೆಯಬೇಕು. ಇದು ಮುಳ್ಳನ್ನು ಹೊರತರುತ್ತದೆ. ಆ ಸಮಯದಲ್ಲಿ ಬಾಯಿಯನ್ನು ತೆರೆಯಬೇಕು.ಮೀನಿನ ಮುಳ್ಳು ಗಂಟಲಿನಲ್ಲಿ ಸಿಲುಕಿಕೊಂಡರೆ, ಒಂದು ಕಪ್ ಬೇಯಿಸಿದ ಅನ್ನವನ್ನು ತೆಗೆದುಕೊಂಡು ಅದನ್ನು ಜಗಿಯದೆ ನುಂಗಿ. ತಕ್ಷಣ ನೀರು ಕುಡಿಯಿರಿ. ಇದು ಗಂಟಲಿನಲ್ಲಿರುವ ಮುಳ್ಳನ್ನು ತೆಗೆದುಹಾಕುತ್ತದೆ. ಒಂದು ಬಾಳೆಹಣ್ಣನ್ನು ತೆಗೆದುಕೊಂಡು ಅದನ್ನು ಅರ್ಧಕ್ಕೆ ಕತ್ತರಿಸಿ ಜಗಿಯದೆ ನುಂಗಿ. ನಂತರ ನೀರು ಕುಡಿಯಿರಿ. ನೀವು ಇದನ್ನು ಮಾಡಿದರೆ, ಗಂಟಲಿನ ಮುಳ್ಳು ಹೋಗುತ್ತದೆ. ಎರಡು ಚಮಚ ಬೇಳೆಕಾಳುಗಳನ್ನು ತೆಗೆದುಕೊಂಡು ಚೆನ್ನಾಗಿ ಜಗಿಯಿರಿ ನುಂಗಿ. ಅದು ಮುಳ್ಳನ್ನು ಸಹ ಒಳಗೆ ಒಯ್ಯುತ್ತದೆ. ಕಂದು ಬ್ರೆಡ್ ತುಂಡನ್ನು ತೆಗೆದುಕೊಂಡು ಅದರ ಎರಡೂ ಬದಿಗಳಲ್ಲಿ ಕಡಲೆಕಾಯಿ ಬೆಣ್ಣೆಯನ್ನು ಬರೆಯಿರಿ. ನಂತರ ಬ್ರೆಡ್ ಅನ್ನು ಬಾಯಿಯಲ್ಲಿ ಹಾಕಿ ಮೃದುವಾಗುವವರೆಗೆ ಇರಿಸಿ. ನಂತರ ಅದನ್ನು ಜಗಿಯದೆ ನುಂಗಿ. ಕೂಡಲೆ ಮುಳ್ಳು ಹೋಗುತ್ತದೆ.

## 'ಜಟ್' ಸಿನಿಮಾಗಾಗಿ ಮಾಸ್ ಅವತಾರ ತಾಳಿದ ಸನ್ನಿ ಡಿಯೋಲ್



'ಗದರ್-2 ಹಿಟ್ ಬಳಿಕ ಸನ್ನಿ ಡಿಯೋಲ್ ಸಾಲು ಸಾಲು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಈ ಪೈಕಿ ನಿರೀಕ್ಷೆ ಹೆಚ್ಚಿಸಿರುವ ಸಿನಿಮಾ 'ಜಟ್'. ತೆಲುಗಿನಲ್ಲಿ ಕ್ರ್ಯಾಕ್, ವೀರ ಸಿಂಹ ರೆಡ್ಡಿ ಸಿನಿಮಾಗಳ ನಿರ್ದೇಶಕ ಗೋಪಿಚಂದ್ ಈ ಚಿತ್ರಕ್ಕೆ ನಿರ್ದೇಶನ ಮಾಡಿದ್ದಾರೆ. 'ಜಟ್' ಸಿನಿಮಾದ ಫಸ್ಟ್ ಲುಕ್ ರಿಲೀಸ್ ಮಾಡಲಾಗಿದೆ.

'ಜಟ್' ಸಿನಿಮಾಗಾಗಿ ಸನ್ನಿ ಡಿಯೋಲ್ ಮಾಸ್ ಅವತಾರವೆತ್ತಿದ್ದಾರೆ. ಕೈಯಲ್ಲಿ ಭಾರೀ ಗಾತ್ರದ ಫ್ಯಾನ್ ಹಿಡಿದು ಗಂಭೀರವಾದ ಲುಕ್ ಕೊಟ್ಟಿರುವ ಸನ್ನಿ ಕೈ ತುಂಬಾ ಹಾಗೂ ಫ್ಯಾನ್ಸ್ ಮುಂಭಾಗ ರಕ್ತ ಹೈಲೆಟ್ ಆಗಿದೆ. ಈ ಚಿತ್ರದಲ್ಲಿ ಸನ್ನಿ ಡಿಯೋಲ್ ಕಂಪ್ಲೀಟ್ ಮಾಸ್ ಅವತಾರದಲ್ಲಿ ದರ್ಶನ ಕೊಡಲಿದ್ದಾರೆ.

ಆಕ್ಷನ್ ಪ್ಯಾಕ್ಡ್ ಜಟ್ ಸಿನಿಮಾದಲ್ಲಿ ರಣದೀಪ್ ಹೂಡಾ, ವಿನೀತ್ ಕುಮಾರ್ ಸಿಂಗ್, ಸೈಯಾಮಿ ಖೇರ್ ಮತ್ತು ರೆಜಿನಾ ಕಸ್ಸಂದ್ರ ಸೇರಿದಂತೆ ಹಲವರು ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ತಮನ್ ಎಸ್ ಸಂಗೀತ, ರಿಷಿ ಪಂಜಾಬಿ ಛಾಯಾಗ್ರಹಣ, ನವೀನ್ ನೂಲಿ ಸಂಕಲನ ಚಿತ್ರಕ್ಕಿದೆ. ಪೀಟರ್ ಹೆನ್, ಅನ್ಲ್ ಅರಸು, ರಾಮ್ ಲಕ್ಷ್ಮಣ್ ಮತ್ತು ವೆಂಕಟ್ ಸಾಹಸ ನಿರ್ದೇಶನ 'ಜಟ್' ಸಿನಿಮಾದಲ್ಲಿರಲಿದೆ. ಮೈತ್ರಿ ಮೂವೀ ಮೇಕರ್ಸ್ ಬ್ಯಾನರ್ ನಡಿ ನವೀನ್ ಯೆರ್ನೇನಿ ಹಾಗೂ ವೈ ರವಿಶಂಕರ್, ಪೀಪಲ್ ಮೀಡಿಯಾ ಫ್ಯಾಕ್ಟರಿ ಬ್ಯಾನರ್ ನಡಿ ಟಿ.ಜಿ ವಿಶ್ವ ಪ್ರಸಾದ್ ಚಿತ್ರ ನಿರ್ಮಾಣ ಮಾಡುತ್ತಿದ್ದಾರೆ, ಬಹಳ ಅದ್ಧೂರಿಯಾಗಿ ಪ್ಯಾನ್ ಇಂಡಿಯಾ ಲೆವೆಲ್ ನಲ್ಲಿ ತಯಾರಾಗುತ್ತಿರುವ ಚಿತ್ರದ ಶೂಟಿಂಗ್ ಸದ್ಯ ಹೈದರಾಬಾದ್ನಲ್ಲಿ ಭರದಿಂದ ಸಾಗುತ್ತಿದೆ.

## ಹೇರ್ ಜೆಲ್ ಬಳಸ್ತೀರಾ..?

### ಬ್ಯೂಟಿ ಟಿಪ್ಸ್



ಬಹಳ ಹೊತ್ತಿನ ಕಾಲ ಕೂದಲನ್ನು ಒಂದೇ ರೀತಿ ನಿಲ್ಲುವಂತೆ ಮಾಡುವ ಹೇರ್ ಜೆಲ್ ಗಳೆಂದರೆ ಯುವಕರಿಗೆ ಬಹಳ ಇಷ್ಟ. ಅದರೆ ಇದನ್ನು ನಿತ್ಯ ಬಳಸುವುದರಿಂದ ಎಷ್ಟೆಲ್ಲಾ ಸಮಸ್ಯೆಗಳಿವೆ ಎಂಬುದು ನಿಮಗೆ ಗೊತ್ತೇ? ಹೆಚ್ಚಿನ ಜೆಲ್ ಗಳಲ್ಲಿ ಆಲ್ಕೋಹಾಲ್ ಮತ್ತು ಹಾನಿಕಾರಕ ರಾಸಾಯನಿಕಗಳಿವೆ.

ಇವು ಸುಮಾರು ಹೊತ್ತಿನ ಕಾಲ ಕೂದಲನ್ನು ನೇರವಾಗಿ ನಿಲ್ಲಿಸುತ್ತವೆ. ಬಳಿಕ ಅಲ್ಲೇ ಒಣಗುತ್ತವೆ. ಇವು ತೇವಾಂಶವನ್ನು ಕಡಿಮೆ ಮಾಡಿ ಕೂದಲನ್ನು ಒರಟಾಗಿಸುತ್ತವೆ. ಇದರಿಂದ ನೆತ್ತಿಯಲ್ಲಿ ತುರಿಕೆ, ಹೊಟ್ಟಿನ ಸಮಸ್ಯೆ ಮೂಡುವುದೂ ಉಂಟು. ನಿರಂತರ ಜೆಲ್ ಬಳಕೆಯಿಂದ ನಿಮ್ಮ ಕೂದಲು ದುರ್ಬಲವಾಗುತ್ತದೆ. ಕೂದಲು ತೆಳುವಾಗಿ ಉದುರುವುದೂ ಹೆಚ್ಚುತ್ತದೆ. ಹೆಚ್ಚಿನ ಜೆಲ್ ಬಳಕೆಯಿಂದ ಕೂದಲ ಬಣ್ಣವೂ ಬದಲಾಗುತ್ತದೆ. ಸಣ್ಣ ವಯಸ್ಸಿನಲ್ಲಿ ಕೂದಲು ಬೆಳ್ಳಗಾಗಲು ಇದೂ ಒಂದು ಕಾರಣವಿರಬಹುದು. ಹಾಗಾಗಿ ನಿತ್ಯ ಇದನ್ನು ಬಳಸುವ ಬದಲು ವಾರಕ್ಕೊಮ್ಮೆ ಅಥವಾ ತಿಂಗಳಿಗೊಮ್ಮೆ ಬಳಸಿ. ಸಭೆ ಸಮಾರಂಭಗಳಿದ್ದಾಗ ಮಾತ್ರ ಬಳಸಿ. ಬಳಿಕ ಸ್ವಚ್ಛವಾಗಿ ತೊಳೆದು ತೆಂಗಿನೆಣ್ಣೆಯಿಂದ ಮಸಾಜ್ ಮಾಡಿ.

## ಕೂಚಿಪುಡಿ ನಾಟ್ಯ ಪರಂಪರ ಏಕಾದಶಮಾನೋತ್ಸವ -2024



ಅಚ್ಚ ಶಾಸ್ತ್ರೀಯ ಕೂಚಿಪುಡಿಯ ನೃತ್ಯ ಪರಂಪರೆಗೆ ತನ್ನದೇ ಆದ ವಿಶಿಷ್ಟ ಚಾರಿತ್ರಿಕ ಮಹತ್ವವಿದೆ. ಈ ಕೂಚಿಪುಡಿಯ ನೃತ್ಯಶೈಲಿಯಲ್ಲಿ ನಾಲ್ಕುದಶಕಗಳಿಂದ ಪರಿಶ್ರಮಿಸುತ್ತಿರುವ ಆಚಾರ್ಯ ದೀಪಾ ನಾರಾಯಣನ್ ಶಶೀಂದ್ರನ್ ಸುಮಾರು ಐದುನೂರು ವರ್ಷಗಳ ಇತಿಹಾಸವುಳ್ಳ ಕೂಚಿಪುಡಿ ನೃತ್ಯಶೈಲಿಯ ಖ್ಯಾತ ಗುರು ಪದ್ಮಭೂಷಣ ಡಾ. ವೆಂಪಟಿ ಚಿನ್ನಸತ್ಯಂ ಅವರ ಎರಡನೆಯ ಪರಂಪರೆಗೆ ಸೇರಿದವರು. ಖ್ಯಾತ ಕೂಚಿಪುಡಿ ನಾಟ್ಯಗುರು-ನೃತ್ಯ ಕಲಾವಿದೆ, ಸಂಯೋಜಕಿಯಾಗಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಖ್ಯಾತರಾಗಿರುವ ಇವರು, 'ಕೂಚಿಪುಡಿ ಪರಂಪರ ಫೌಂಡೇಶನ್ ಟ್ರಸ್ಟ್'ನ ಲೈಫ್ ಟ್ರಸ್ಟಿಯಾಗಿ ವರ್ಷಪೂರ್ತಿ ನಿರಂತರ ಒಂದಲ್ಲ ಒಂದು ನೃತ್ಯ ಚಟುವಟಿಕೆಗಳಲ್ಲಿ ಕಾರ್ಯನಿರತರು. ಇವರ ಇತ್ತೀಚಿನ ಅದ್ಭುತ ನೃತ್ಯರೂಪಕ ಪ್ರಯೋಗ 'ನಂದನಾರ್' ದೇಶ-ವಿದೇಶಗಳಲ್ಲಿ ಪ್ರದರ್ಶಿತವಾಗಿ ಮನೆಮಾತಾಗಿದೆ.

ತಮ್ಮ ಅಸಂಖ್ಯ ನೃತ್ಯಪ್ರದರ್ಶನಗಳಿಂದ ಖ್ಯಾತರಾದ ಇವರು, ತಮ್ಮ 'ಕೂಚಿಪುಡಿ ಪರಂಪರಾ ಫೌಂಡೇಶನ್ ' ಮೂಲಕ ನೃತ್ಯಾಭಿವೃದ್ಧಿಯ ಸಾಧನೆಯಲ್ಲಿ ನಿರತರಾಗಿ, ಪರಿಣಿತ ಅಭಿನಯ-ಮನೋಜ್ಞ ನೃತ್ಯಪ್ರಸ್ತುತಿಗಳಿಂದ ಕಲಾರಸಿಕರ ಗಮನ ಸೆಳೆದಿದ್ದಾರೆ. ಶಂಕರಾಭರಣ ಚಲನಚಿತ್ರ ಖ್ಯಾತಿಯ ಮಂಜುಭಾರ್ಗವಿ ಅವರ ಪ್ರಧಾನಶಿಷ್ಯರಾಗಿ ಅವರಲ್ಲಿ ಸತತ ಇಪ್ಪತ್ತೈದು ವರುಷಗಳು ನಾಟ್ಯಶಿಕ್ಷಣ ಪಡೆದು ಗುರುಪರಂಪರೆಯನ್ನು ಮುಂದುವರಿಸಿಕೊಂಡು ಹೋಗುತ್ತಿರುವ ಅಗ್ಗಳಿಕೆ ಇವರದು.

ಭಾರತ ನೃತ್ಯೋತ್ಸವದ ಪ್ರತೀಕವಾದ 'ನಾಟ್ಯ ಪರಂಪರ ಉತ್ಸವ'ವು ಭಾರತ ಮಾತ್ರವಲ್ಲದೆ, ಯು ಎಸ್, ರಷ್ಯಾ, ತೈವಾನ್, ಕೆನಡಾ ಮುಂತಾದೆಡೆಗಳ ಕುಚಿಪುಡಿ ಮತ್ತು ಇನ್ನಿತರ ನೃತ್ಯಶೈಲಿಗಳ ಖ್ಯಾತ ಕಲಾವಿದರ ನೃತ್ಯ ಪ್ರದರ್ಶನಗಳನ್ನು ಅರ್ಪಿಸುತ್ತ ಬಂದಿರುವುದು ಹೆಗ್ಗಳಿಕೆಯ ಸಂಗತಿ. ಈ ನೃತ್ಯೋತ್ಸವವು, ಕಲಾರಸಿಕರ ಬೆಂಬಲ-ಸಹಾಯದ ಜೊತೆಗೆ, ನವದೆಹಲಿಯ ಸಂಗೀತ ನಾಟಕ ಅಕಾಡೆಮಿ ಮತ್ತು ಕರ್ನಾಟಕದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮುಂತಾದ ಸರ್ಕಾರಿ ಸಂಸ್ಥೆಗಳ ಆಶ್ರಯ-ಪ್ರೋತ್ಸಾಹಗಳನ್ನು ಪಡೆದುಕೊಂಡಿರುವುದು ನಿಜಕ್ಕೂ ಹೆಮ್ಮೆಯ ವಿಷಯ.

ಇದೀಗ 'ನಾಟ್ಯ ಪರಂಪರ 'ಏಕಾದಶಮಾನೋತ್ಸವ -2024 ' ರ ಸಂಭ್ರಮಾಚರಣೆ ಇದೇ ತಿಂಗಳ 26 ಶನಿವಾರ ಸಂಜೆ 6 ಗಂಟೆಗೆ ಕೋರಮಂಗಲದ 'ಮೇದೈ' ನಲ್ಲಿ ವಿಶ್ವ ವಿಖ್ಯಾತ ನೃತ್ಯ ಕಲಾವಿದೆ ಯಾಮಿನಿ ಕೃಷ್ಣಮೂರ್ತಿ ಅವರ ಸ್ಮರಣಾರ್ಥ ವೈವಿಧ್ಯಪೂರ್ಣ ನೃತ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಸಮಾರಂಭದಲ್ಲಿ ನೆಲ್ಲೂರಿನ ಕುಚಿಪುಡಿ ನಾಟ್ಯ ಕಲಾನಿಧಿ ಗುರು ವೇದಾಂತಂ ವಿಧುಮೌಳಿ ಅವರಿಗೆ ಮತ್ತು ತುಮಕೂರಿನ ಭರತನಾಟ್ಯ ನೃತ್ಯಜ್ಞೆ ಶ್ರೀಮತಿ. ಬಾಲಾ ವಿಶ್ವನಾಥ್ ಅವರ ಕಲಾಸೇವೆಯನ್ನು ಗುರುತಿಸಿ ಗೌರವಾರ್ಪಣೆ ಮಾಡಲಿದೆ. ಅಂದು- ಕಣ್ಮನ ಸೂರೆಗೊಳ್ಳುವ ವಿವಿಧ ಶೈಲಿಯ ನೃತ್ಯರಂಜನೆಯೂ ಇರಲಿದೆ. ಶ್ರೀಮತಿ ಸಂಧ್ಯಾ ರಾಜು ಶಿಷ್ಯೆ ಜನನಿ ರಾವ್, ಕಲ್ಯಾಮಾಮಣಿ ಶೈಲಜಾ ಶಿಷ್ಯ ದಿಲೀಪ್ ಸೇಲರ್, ದೀಪಾ ಶಶೀಂದ್ರನ್ ಶಿಷ್ಯೆ ಕಾರ್ತಿಕ ಮೋಹನ್ ಅವರಿಂದ ಕುಚಿಪುಡಿ ನೃತ್ಯ ಪ್ರದರ್ಶನ ಮತ್ತು ಕಲಾಮಂಡಲಂ ರೋಶಿನ್ ಚಂದ್ರನ್ ಅವರಿಂದ ನೇರ ಸಂಗೀತದೊಂದಿಗೆ ಒತ್ತಂತುಲಲ್ ಕಥಕ್ಕಳಿ ನೃತ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಈ ನಯನ ಮನೋಹರವಾದ ಕಾರ್ಯಕ್ರಮಗಳಿಗೆ ಟಿಕೆಟ್ ಮೂಲಕ ಪ್ರವೇಶ ಎಂದು ಕೆ.ಪಿ.ಎಫ್. ಟ್ರಸ್ಟಿ ಆಚಾರ್ಯ ದೀಪಾ ಶಶೀಂದ್ರನ್ ತಿಳಿಸಿದ್ದಾರೆ.

। ವೈ.ಕೆ.ಸಂಧ್ಯಾ ಶರ್ಮ

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಪರಿಶ್ರಮಕ್ಕೆ ತಕ್ಕ ಫಲ, ವಾಹನ ಯೋಗ, ದಾಂಪತ್ಯದಲ್ಲಿ ಪ್ರೀತಿ, ಭಾಗ್ಯ ವೃದ್ಧಿ, ಸುಖ ಭೋಜನ.

**ವೃಷಭ:** ಸಹಚರರ ಜೊತೆ ಮುನಿಸು, ನಿಮ್ಮ ಸಾಮರ್ಥ್ಯದಿಂದ ಪ್ರಗತಿ, ಮಹಿಳೆಯರಿಗೆ ಶುಭ.

**ಮಿಥುನ:** ನೆಮ್ಮದಿ ಇಲ್ಲದ ಜೀವನ, ನೀಚರ ಸಹವಾಸದಿಂದ ತೊಂದರೆ, ಸಣ್ಣಪುಟ್ಟ ವಿಷಯಗಳಿಂದ ಕಲಹ.

**ಕಟಕ:** ಸ್ತ್ರೀ ಸೌಖ್ಯ, ಅತಿಯಾದ ನಿದ್ರೆ, ಸುಳ್ಳು ಮಾತನಾಡುವಿರಿ, ವಾಹನ ಅಪಘಾತ, ಯಾರನ್ನು ಹೆಚ್ಚಾಗಿ ನಂಬಬೇಡಿ.

**ಸಿಂಹ:** ಅನೇಕ ವಿಷಯಗಳ ಚರ್ಚೆ, ವಿದೇಶ ಪ್ರಯಾಣ, ಕೆಲಸದ ಒತ್ತಡ, ಗೊಂದಲಮಯ ವಾತಾವರಣ, ಹಿರಿಯರಿಂದ ಬೋಧನೆ.

**ಕನ್ಯಾ:** ದುಡುಕು ಸ್ವಭಾವ, ದೂರಲೋಚನೆ, ದಂಡ ಕಟ್ಟುವಿರಿ, ಅನಾರೋಗ್ಯ, ಉದ್ಯೋಗದಲ್ಲಿ ಬಡ್ತಿ, ಸ್ನೇಹಿತರ ಭೇಟಿ.

**ತುಲಾ:** ವಿವಾದಗಳಿಂದ ವೈರತ್ವ, ಅನಾವಶ್ಯಕ ಹಣವ್ಯಯ, ಅನಿರೀಕ್ಷಿತ ಪ್ರಯಾಣ, ಸಾಲ ಬಾಧೆ.

**ವೃಶ್ಚಿಕ:** ಶುಭ ಸಮಾಚಾರ, ಕೃಷಿಕರಿಗೆ ಅಲ್ಪ ಲಾಭ, ಕುಟುಂಬ ಸೌಖ್ಯ, ತೀರ್ಥ ಯಾತ್ರೆಯ ದರ್ಶನ.

**ಧನಸ್ಸು:** ಸ್ಥಗಿತ ಕಾರ್ಯಗಳಲ್ಲಿ ಮುನ್ನಡೆ, ಆರ್ಥಿಕ ಪರಿಸ್ಥಿತಿ ಚೇತರಿಕೆ, ಮಹತ್ವದ ಕಾರ್ಯವನ್ನು ಸಾಧಿಸುವಿರಿ.

**ಮಕರ:** ಅತಿಥಿಗಳ ಆಗಮನ, ಸ್ವಲ್ಪ ಹಣ ಬಂದರೂ ಉಳಿಯುವುದಿಲ್ಲ, ತಾಳ್ಮೆ ಅಗತ್ಯ, ದೃಷ್ಟಿ ದೋಷದಿಂದ ಸಮಸ್ಯೆ.

**ಕುಂಭ:** ಪಾಲುದಾರಿಕೆಯ ಮಾತುಕತೆ, ಮಾತಿಗೆ ಮರುಳಾಗದಿರಿ. ಆರೋಗ್ಯದ ಬಗ್ಗೆ ಎಚ್ಚರ.

**ಮೀನ:** ವಿಪರೀತ ಕೋಪ, ಕೈಗೆ ಬಂದ ತುತ್ತು ಬಾಯಿಗಿಲ್ಲ, ಚಂಚಲ ಮನಸ್ಸು, ಅಲ್ಪ ಪ್ರಗತಿ.

## ಜಾಗತಿಕ ಅಯೋಡಿನ್ ಕೊರತೆಯ ಅಸ್ವಸ್ಥತೆಗಳ ತಡೆಗಟ್ಟುವ ದಿನ




ಜಾಗತಿಕ ಅಯೋಡಿನ್ ಕೊರತೆ ತಡೆಗಟ್ಟುವ ದಿನವನ್ನು ಪ್ರತಿ ಅಕ್ಟೋಬರ್ 21 ರಂದು ಆಚರಿಸಲಾಗುತ್ತದೆ. ಈ ದಿನವು ಮಾನವನ ಆರೋಗ್ಯದಲ್ಲಿ ಅಯೋಡಿನ್ ವಹಿಸುವ ನಿರ್ಣಾಯಕ ಕಾರ್ಯದ ಬಗ್ಗೆ ಸಾರ್ವಜನಿಕ ಜಾಗೃತಿ ಮೂಡಿಸುತ್ತದೆ. ಅಯೋಡಿನ್ ಒಂದು ಸೂಕ್ಷ್ಮ ಪೋಷಕಾಂಶವಾಗಿದ್ದು, ಇದು ಸರಿಯಾದ ಥೈರಾಯ್ಡ್ ಕಾರ್ಯಕ್ಕೆ, ಹಾಗೆಯೇ ಆರೋಗ್ಯಕರ ಬೆಳವಣಿಗೆ ಮತ್ತು ಬೆಳವಣಿಗೆಗೆ ಅಗತ್ಯವಾಗಿರುತ್ತದೆ. ಸರಿಸುಮಾರು 3600 ಃ.ಅ. ವರೆಗಿನ ಆರಂಭಿಕ ಚೀನೀ ವೈದ್ಯಕೀಯ ಗ್ರಂಥಗಳು, ಐತಿಹಾಸಿಕ ದಾಖಲೆಗಳ ಪ್ರಕಾರ, ಕಡಲಕಳೆ ಮತ್ತು ಸುಟ್ಟ ಸಮುದ್ರ ಸ್ಪಂಜಿನ ಸೇವನೆಯ ನಂತರ ಗಾಯಿಟರ್ ಗಾತ್ರದಲ್ಲಿನ ಕಡಿತವನ್ನು ದಾಖಲಿಸಿದವರು. ಅಯೋಡಿನ್ ಇನ್ನೂ ಕಂಡುಬಂದಿಲ್ಲವಾದರೂ, ಈ ಔಷಧಿಗಳು ಯಶಸ್ವಿಯಾಗಿ ಉಳಿದಿವೆ ಮತ್ತು ನಂತರದ ಶತಮಾನಗಳಲ್ಲಿ ಹಿಪ್ಪೊಕ್ರೇಟ್ಸ್, ಗ್ಯಾಲೆನ್ ಮತ್ತು ರೋಜರ್ ಅವರ ಕೃತಿಗಳಲ್ಲಿ ದೃಢೀಕರಿಸಿದಂತೆ ಅವರ ಬಳಕೆಯು ಪ್ರಪಂಚದಾದ್ಯಂತ ಮುಂದುವರೆಯಿತು. ಹತ್ತೊಂಬತ್ತನೇ ಶತಮಾನದ ಮೊದಲಾರ್ಧದಲ್ಲಿ ಅಯೋಡಿನ್ ಆವಿಷ್ಕಾರವು ಆಕಸ್ಮಿಕವಾಗಿ ಸಂಭವಿಸಿತು. 1811 ರಲ್ಲಿ ಗನ್ ಪೌಡರ್ ಉತ್ಪಾದನೆಯಲ್ಲಿ ಬಳಕೆಗಾಗಿ ಸೋಡಿಯಂ ಲವಣಗಳನ್ನು ಹೊರತೆಗೆಯುವಾಗ, ಫ್ರೆಂಚ್ ರಸಾಯನಶಾಸ್ತ್ರಜ್ಞ ಬರ್ನಾರ್ಡ್ ಕೋರ್ಟೋಯಿಸ್, ಸಲ್ಫ್ಯೂರಿಕ್ ಆಮ್ಲದೊಂದಿಗೆ ಸಂಸ್ಕರಿಸಿದ ಕಡಲಕಳೆ ಬೂದಿಯಿಂದ ಅಸಾಮಾನ್ಯ ನೇರಳೆ ಆವಿ ಏರುತ್ತಿರುವುದನ್ನು ಗಮನಿಸಿದರು. ಫ್ರೆಂಚ್ ರಸಾಯನಶಾಸ್ತ್ರಜ್ಞ ಗ್ಯಾಸ್ಪರ್ಡ್ ಅಡಾಲ್ಫ್ ಚಾಟಿನ್, ಜನಸಂಖ್ಯೆಯ ಅಯೋಡಿನ್ ಕೊರತೆಯನ್ನು ಸ್ಥಳೀಯ ಗಾಯಿಟರ್ ಗೆ ಕಾರಣವೆಂದು ಮೊದಲು ಪ್ರಕಟಿಸಿದರು, ಇದನ್ನು ಆರಂಭದಲ್ಲಿ 1852 ರಲ್ಲಿ ಪ್ರಸ್ತಾಪಿಸಲಾಯಿತು. ಇದನ್ನು ಯುಜೆನ್ ಬೌಮನ್ ಅವರು ದೃಢಪಡಿಸಿದರು, ಅವರು 1896 ರಲ್ಲಿ ಆವಿಷ್ಕಾರವನ್ನು ವಿವರಿಸುವ ಕಾಗದವನ್ನು ಪ್ರಕಟಿಸಿದರು. ಥೈರಾಯ್ಡ್ ಗ್ರಂಥಿಯೊಳಗೆ ಅಯೋಡಿನ್. ಮಕ್ಕಳಿಗಾಗಿ 1990 ರ ವಿಶ್ವ ಶೃಂಗಸಭೆಯಲ್ಲಿ ವಿಶ್ವ ನಾಯಕರು 2000 ರ ವೇಳೆಗೆ ಅಯೋಡಿನ್ ಕೊರತೆಯನ್ನು ತೊಡೆದುಹಾಕುವ ಗುರಿಯನ್ನು ಹೊಂದಿದ್ದರು. ಇದರ ಪರಿಣಾಮವಾಗಿ, ಭಾರತ ಮತ್ತು ಚೀನಾದಂತಹ ದೇಶಗಳು ಅಯೋಡಿನ್ ಕೊರತೆಯ ಅಸ್ವಸ್ಥತೆಗಳ ತಡೆಗಟ್ಟುವಿಕೆಗಾಗಿ ತಮ್ಮದೇ ಆದ ರಾಷ್ಟ್ರೀಯ ದಿನಗಳನ್ನು ಸ್ಥಾಪಿಸಿದವು. ಪ್ರಪಂಚದಾದ್ಯಂತದ ದೇಶಗಳು ಈ ಉಪಕ್ರಮದ ಹಿಂದೆ ತಮ್ಮ ಬೆಂಬಲವನ್ನು ಎಸೆದಿವೆ ಮತ್ತು ತಮ್ಮ ನಾಗರಿಕರು ಸಾಕಷ್ಟು ಅಯೋಡಿನ್ ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಮಾರ್ಗಗಳನ್ನು ಕಂಡುಕೊಂಡಿದ್ದಾರೆ.

# ಮಹಾರಾಷ್ಟ್ರ ಚುನಾವಣೆ ಸನ್ನಿಹಿತ

**ಮುಂಬೈ:** ಮಹಾರಾಷ್ಟ್ರದಲ್ಲಿ ಇನ್ನೇನು ಕೆಲವೇ ದಿನಗಳಲ್ಲಿ ಎದುರಾಗಲಿರುವ ಸಾರ್ವತ್ರಿಕ ವಿಧಾನಸಭಾ ಚುನಾವಣೆಗೆ ಬಿಜೆಪಿ 99 ಕ್ಷೇತ್ರಗಳಿಗೆ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಒಟ್ಟು ಮಹಾರಾಷ್ಟ್ರ ವಿಧಾನಸಭೆಯಲ್ಲಿ 288 ಸ್ಥಾನಗಳಿದ್ದು ಈ ಪೈಕಿ ಬಿಜೆಪಿ 151 ಸ್ಥಾನಗಳಲ್ಲಿ ಸ್ಪರ್ಧಿಸುತ್ತಿದೆ.

ಈ ಬಾರಿಯ ಮಹಾರಾಷ್ಟ್ರ ವಿಧಾನಸಭೆ ಚುನಾವಣೆ ರಾಷ್ಟ್ರೀಯ ಪಕ್ಷಗಳಾದ ಕಾಂಗ್ರೆಸ್ ಹಾಗೂ ಬಿಜೆಪಿ ಪಾಲಿಗೆ ಪ್ರತಿಷ್ಠೆಯಾಗಿದೆ. ಮುಂದಿನ ನವೆಂಬರ್ 20ರಂದು ಮತದಾನಕ್ಕೆ ದಿನಾಂಕ ನಿಗದಿಯಾಗಿದ್ದು, ಬಿಜೆಪಿ ಈ ಪಟ್ಟಿಯಲ್ಲಿ 99 ಕ್ಷೇತ್ರಗಳಿಗೆ ಅಭ್ಯರ್ಥಿಗಳ ಹೆಸರು ಅಂತಿಮಗೊಳಿಸಿದೆ.

ಒಟ್ಟು 288 ಕ್ಷೇತ್ರಗಳ ಪೈಕಿ 151 ರಲ್ಲಿ ಬಿಜೆಪಿ, ಇನ್ನುಳಿದ ಕ್ಷೇತ್ರಗಳಲ್ಲಿ ಶಿವಸೇನಾ ಮತ್ತು ಎನ್‌ಸಿಪಿ ಪಕ್ಷಗಳಿಗೆ ಕ್ರಮವಾಗಿ 66 ಮತ್ತು 52 ಕ್ಷೇತ್ರಗಳು ಹಂಚಿಕೆಯಾಗಿವೆ. ಈಗಾಗಲೇ 288 ಸ್ಥಾನಗಳ ಪೈಕಿ 260 ಸ್ಥಾನಗಳಿಗೆ ಮೈತ್ರಿಕೂಟ ಪಕ್ಷಗಳ ಮಧ್ಯೆ ಸೀಟು ಹಂಚಿಕೆ ಆಗಿದೆ. ಉಳಿದ 28 ಸ್ಥಾನಗಳಿಗೆ ಮಾತುಕತೆ ನಡೆಯುತ್ತಿದೆ.



# ಸಿಎಂ ನಿವಾಸಕ್ಕೆ ಕೋಟಿ ಕೋಟಿ ದುಂದುವೆಚ್ಚ ಮಾಡಿದ ಕೇಜ್ರಿವಾಲ್

**ನವದೆಹಲಿ:** ಆಪ್ ಸರ್ವೋಚ್ಚನಾಯಕ ದಿಲ್ಲಿ ಮಾಜಿ ಸಿಎಂ ಅರವಿಂದ ಕೇಜ್ರಿವಾಲ್ ಸಂಬಂಧ ಸ್ಫೋಟಕ ವಿಚಾರವೊಂದು ಹೊರಬಿದ್ದಿದೆ . ದಿಲ್ಲಿಯ ಸರ್ಕಾರಿ ನಿವಾಸದಲ್ಲಿ ಕೇಜ್ರಿವಾಲ್ ಐಷಾರಾಮಿ ಜೀವನದ ಲಿಸ್ಟ್ ರಿಲೀಸ್ ಆಗಿದ್ದು ,ಮನೆಯಲ್ಲಿ ಕೇಜ್ರಿ ಖರ್ಚು ಮಾಡಿದ ವಿವರಗಳು ದೊಡ್ಡ ಸುದ್ದಿ ಮಾಡುತ್ತಿವೆ .

ಕೇಜ್ರಿವಾಲ್ ಖರ್ಚಿನ ಪಟ್ಟಿಯನ್ನ ಬಿಜೆಪಿ ಅಧಿಕೃತವಾಗಿ ಶೇರ್ ಮಾಡಿದೆ. ಲಿಸ್ಟ್ ನಲ್ಲಿರೋ ಖರ್ಚಿನ ವಿವರಕ್ಕೆ ಸಾಕಷ್ಟು ಟೀಕೆ ವ್ಯಕ್ತವಾಗಿದೆ. ಇನ್ನು, ಕೇಜ್ರಿಯ ಸರ್ಕಾರಿ ಮನೆಯ ಕರ್ಟನ್ಸ್ ಕಂಪ್ಲೀಟ್ ಆಟೊಮೆಟಿಕ್ ಆಗಿದ್ದು, ಇದಕ್ಕಾಗಿ 4 ರಿಂದ 5.6 ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ. ಹಾಗೆಯೇ ಮನೆಯಲ್ಲಿ ಅಳವಡಿಸಲಾಗಿದ್ದ ಟಿವಿಗೆ ಬರೋಬ್ಬರಿ 64 ಲಕ್ಷ ಹಣ ವ್ಯಯಿಸಲಾಗಿದೆ. ಮನೆಯ ಬಾಗಿಲಿಗೆ 10 ಲಕ್ಷ ಹಣ ಬಿಲ್ ಆಗಿದ್ದು, ಸ್ಯಾನಿಟರಿ ಲೈನ್ ಹಾಗೂ ಟಾಯ್ಲೆಟ್ ಇನ್ಸಾಟ್ಲೇಷನ್ ಗೆ 15 ಕೋಟಿ ಹಣ ಖರ್ಚು ಮಾಡಲಾಗಿದೆ. ಬಡವರ ಪರ ಆಪ್ ಧ್ವನಿ ಎಂದು ಹೇಳಿಕೊಂಡು ಅಧಿಕಾರದ ಗದ್ದುಗೆ ಏರಿದ್ದ ಕೇಜ್ರಿವಾಲ್ ವಿರುದ್ಧ ಬಿಜೆಪಿ ಕೌಂಟರ್ ಅಟ್ಯಾಕ್ ಶುರು ಮಾಡಿದೆ.



# ಹೆಚ್ಚು ಮಕ್ಕಳು ಹೊಂದುವಂತೆ ಸಿಎಂ ಚಂದ್ರಬಾಬು ನಾಯ್ಡು ಕರೆ

**ಆಂಧ್ರ ಪ್ರದೇಶ:** ದಕ್ಷಿಣ ಭಾರದ ಹಲವು ರಾಜ್ಯಗಳಲ್ಲಿ ವೃದ್ಧರ ಸಂಖ್ಯೆ ಹೆಚ್ಚುತ್ತಿದ್ದು, ಯುವಕರ ಸಂಖ್ಯೆ ಕ್ಷೀಣಿತ್ತಿರುವುದಕ್ಕೆ ಕಳವಳ ವ್ಯಕ್ತಪಡಿಸಿರುವ ಸಿಎಂ ಎನ್ ಚಂದ್ರಬಾಬು ನಾಯ್ಡು ಅವರು, ಈ ಭಾಗದ ರಾಜ್ಯಗಳ ಜನರು ಹೆಚ್ಚು ಮಕ್ಕಳನ್ನು ಹೊಂದಬೇಕು ಎಂದು ಕರೆ ಕೊಟ್ಟಿದ್ದಾರೆ. ಹೆಚ್ಚಿನ ಮಕ್ಕಳಿರುವ ಕುಟುಂಬಗಳನ್ನು ಪ್ರೋತ್ಸಾಹಿಸುವ ಕುರಿತು ನಾವು ಹೊಸ ಕಾನೂನನ್ನು ಜಾರಿಗೊಳಿಸಸಲು ಚಿಂತಿಸುತ್ತಿದ್ದೇವೆ. ಆ ಮೂಲಕ ಜನಸಂಖ್ಯೆ ನಿರ್ವಹಣೆಯನ್ನು ಜಾರಿಗೆ ತರಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದರು. ಇದಲ್ಲದೇ ಎರಡಕ್ಕಿಂತ ಹೆಚ್ಚು ಮಕ್ಕಳು ಹೊಂದಿರುವವರು ಸ್ಥಳೀಯ ಚುನಾವಣೆಯಲ್ಲಿ ಸ್ಪರ್ಧೆ ಮಾಡಬಾರದು ಎಂದು ಈ ಹಿಂದೆ ರಾಜ್ಯವು ಕಾನೂನು ರೂಪಿಸಿದ್ದನ್ನು ನಾವು ರದ್ದು ಮಾಡಿದ್ದೇವೆ ಎಂದು ವಿವರಿಸಿದರು. ಅಧಿಕ ಮಕ್ಕಳು ಹೊಂದುವ ಕುಟುಂಬಗಳಿಗೆ ರಾಜ್ಯ ಸರ್ಕಾರ ಹೆಚ್ಚೆಚ್ಚು ಪ್ರಯೋಜನ ನೀಡುವ ಬಗ್ಗೆಯೂ ಚಿಂತಿಸುತ್ತಿದೆ ಎಂದು ಅಭಿಪ್ರಾಯಪಟ್ಟರು.



# ಇರಾನ್ ಮೇಲೆ ದಾಳಿಗೆ ಇಸ್ರೇಲ್ ಸಿದ್ಧವಾಗಿತ್ತು

**ವಾಷಿಂಗ್ಟನ್:** ಇರಾನ್ ರಾಕೆಟ್ ದಾಳಿ ನಡೆಸಿದ್ದಕ್ಕೆ ಪ್ರತಿಯಾಗಿ ತೀವ್ರ ದಾಳಿ ನಡೆಸಲು ಇಸ್ರೇಲ್ ಸಿದ್ಧತೆ ನಡೆಸಿತ್ತು ಎಂಬುದು ಅಮೆರಿಕದಲ್ಲಿ ಸೋರಿಕೆಯಾಗಿರುವ ಪತ್ರವೊಂದರಿಂದ ದೃಢಪಟ್ಟಿದೆ. ಇದೊಂದು ರಹಸ್ಯ ಪತ್ರವಾಗಿದ್ದು, ಇದು ಸರಕಾರದ ಖಜಾನೆಯಲ್ಲಿತ್ತು ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ.

ಅ.1ರಂದು ಇರಾನ್ ಮೇಲೆ ದಾಳಿ ಮಾಡಲು ಇಸ್ರೇಲ್ ಸಿದ್ಧವಾಗಿತ್ತು ಎಂಬ ವಿಷಯ ಈಗ ಸೋರಿಕೆಯಾಗಿದೆ. ಇಸ್ರೇಲ್ನ ಸಿದ್ಧತೆಯನ್ನು ಅಮೆರಿಕದ ಗುಪ್ತಚರ ಇಲಾಖೆ ಸಂಗ್ರಹಿಸಿದ್ದು, ಈ ಮಾಹಿತಿಯನ್ನು ಅಮೆರಿಕದ ಮಿತ್ರರಾಷ್ಟ್ರಗಳಾದ ಆಸ್ಟ್ರೇಲಿಯಾ, ಕೆನಡಾ, ನ್ಯೂಜಿಲೆಂಡ್ ಮತ್ತು ಬ್ರಿಟನ್ ಮಾತ್ರ ನೋಡಬೇಕು ಎಂದು ಪತ್ರದಲ್ಲಿ ನಮೂದಿಸಲಾಗಿದೆ ಎಂದು ಮಾಧ್ಯಮವೊಂದು ವರದಿ ಮಾಡಿದೆ.

ಇರಾನ್ ವಿರುದ್ಧ ಯಾವ ರೀತಿಯ ಕ್ಷಿಪಣಿ ಬಳಕೆ ಮಾಡಿದರೆ ಅನುಕೂಲ ಎಂಬ ನಿಟ್ಟಿನಲ್ಲಿ ಪ್ರಾತ್ಯಕ್ಷಿಕೆಯನ್ನೂ ಇಸ್ರೇಲ್ ನಡೆಸಿತ್ತು ಎಂಬ ವಿಚಾರವೂ ಬೆಳಕಿಗೆ ಬಂದಿದೆ. ದಾಖಲೆ ಸೋರಿಕೆ ಬಗ್ಗೆ ತನಿಖೆ ನಡೆಸಲು ಅಮೆರಿಕ ತೀರ್ಮಾನಿಸಿದೆ.

**ಯಾಹ್ಯಾ ಗಾಜಾದಲ್ಲಿದ್ದ ವೀಡಿಯೋ ಬಿಡುಗಡೆ!:** ಹಮಾಸ್ ನಾಯಕ ಖಾನ್ ಯೂನಿಸ್ನಲ್ಲಿರುವ ಸುರಂಗಹಮಾಸ್ನ ಪ್ರಮುಖ ನಾಯಕ ಯಾಹ್ಯಾ ಸಿನ್ವರ್ ಹತ್ಯೆಯಾಗುವುದಕ್ಕಿಂತಲೂ ಮೊದಲು ಗಾಜಾಪಟ್ಟಿಯಲ್ಲಿ ಓಡಾಡಿಕೊಂಡಿದ್ದ ಎಂದು ಇಸ್ರೇಲ್ ಹೇಳಿದೆ. ವೊಂದರಲ್ಲಿ ಅಡಗಿಕೊಂಡಿದ್ದ ಎಂದು ತೋರಿಸುವ ವೀಡಿಯೋವೊಂದನ್ನು ಇಸ್ರೇಲ್ ಬಿಡುಗಡೆ ಮಾಡಿದೆ.



# 6 ಇಂಡಿಗೋ ವಿಮಾನಗಳಲ್ಲಿ 12 ಬಾಂಬ್ ಬೆಂಗಳೂರು ವಿಮಾನ ನಿಲ್ದಾಣಕ್ಕೆ ಮತ್ತೊಂದು ಬೆದರಿಕೆ

**ಬೆಂಗಳೂರು:** ಕಳೆದ ಒಂದು ವಾರದಿಂದಲೂ ಭಾರತೀಯ ವಿಮಾನಗಳು ಮಾತ್ರವಲ್ಲದೇ ವಿದೇಶಿ ವಿಮಾನಗಳಿಗೂ ಬಾಂಬ್ ಬೆದರಿಕೆ ಹೆಚ್ಚಾಗಿ ಕೇಳಿಬರುತ್ತಿದೆ. ಭಾನುವಾರವೂ ಇಂಡಿಗೋ, ವಿಸ್ತಾರ ಮತ್ತು ಏರ್ ಇಂಡಿಯಾದ ತಲಾ 6 ವಿಮಾನಗಳಿಗೆ ಬಾಂಬ್ ಬೆದರಿಕೆ ಸಂದೇಶ ಬಂದಿದೆ.

6 ಇಂಡಿಗೋ ವಿಮಾನಗಳಲ್ಲಿ ತಲಾ 2 ಬಾಂಬ್ ಗಳಿವೆ ಎಂಬ ಬೆದರಿಕೆ ಸಂದೇಶ ಬೆಂಗಳೂರು ವಿಮಾನ ನಿಲ್ದಾಣದ ಕಮಾಂಡ್ ಸೆಂಟರ್‌ಗೆ ಬಂದಿರುವುದಾಗಿ ಎಂದು ಮೂಲಗಳು ತಿಳಿಸಿವೆ. ಕಳೆದ ಒಂದು ವಾರದಲ್ಲಿ ಬೆಂಗಳೂರು ವಿಮಾನ ನಿಲ್ದಾಣಕ್ಕೆ ಬಂದಿರುವ 2ನೇ ಬೆದರಿಕೆ ಇದಾಗಿದೆ.

ಇಂಡಿಗೋ ವಿಮಾನ (ಜೆಡ್ಡಾ ಮುಂಬೈ), (ಕೋಯಿಕೋಡ್- ದಮಾಮ್), (ದೆಹಲಿ-ಇಸ್ತಾನ್‌ಬುಲ್), (ಮುಂಬೈ-ಇಸ್ತಾನ್‌ಬುಲ್), (ಪುಣೆಯಿಂದ ಜೋಧಪುರ), ಮತ್ತು (ಗೋವಾ ಅಹಮದಾಬಾದ್) ವಿಮಾನಗಳಿಗೆ ಬೆದರಿಕೆ ಸಂದೇಶ ಬಂದಿದೆ ಎಂದು ಇಂಡಿಗೋದ ವಕ್ತಾರರು ತಿಳಿಸಿದ್ದಾರೆ. ವಿಸ್ತಾರದ (ದೆಹಲಿ-ಫ್ರಾಂಕ್ ಫರ್ಟ್), ಸಿಂಗಪುರ-ಮುಂಬೈ), (ಬಾಲಿ-ದೆಹಲಿ), (ಸಿಂಗಪುರ-ದೆಹಲಿ), (ಸಿಂಗಪುರ-ಪುಣೆ) ಮತ್ತು (ಮುಂಬೈ-ಸಿಂಗಪುರ) ಈ ಆರು ವಿಮಾನಗಳಿಗೆ ಬೆದರಿಕೆ ಬಂದಿದೆ ಎಂದು ವಿಸ್ತಾರ ಹೇಳಿದೆ.



ಪ್ರೋಟೋಕಾಲ್ ಪ್ರಕಾರ ಎಲ್ಲಾ ಸಂಬಂಧಿತ ಅಧಿಕಾರಿಗಳಿಗೆ ತಕ್ಷಣ ಮಾಹಿತಿ ನೀಡಲಾಗಿದೆ. ಅವರು ತಪಾಸಣೆ ನಡೆಸಿದ್ದಾರೆ ಎಂದು ವಿಸ್ತಾರ ಪ್ರಕಟಣೆಯಲ್ಲಿ ತಿಳಿಸಿದೆ. ಆಕಾಶ ಏರ್‌ನ ಕೆಲವು ವಿಮಾನಗಳಿಗೂ ಬಾಂಬ್ ಬೆದರಿಕೆ ಹಾಕಲಾಗಿದೆ. ತುರ್ತು ಪ್ರತಿಕ್ರಿಯೆ ತಂಡಗಳು ಪರಿಶೀಲನೆ ನಡೆಸುತ್ತಿವೆ. ಭದ್ರತಾ ಮತ್ತು ನಿಯಂತ್ರಣ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿವೆ ಎಂದು ಆಕಾಶ ಏರ್ ಹೇಳಿದೆ.

ಏರ್ ಇಂಡಿಯಾದ ಕನಿಷ್ಠ ಆರು ವಿಮಾನಗಳಿಗೆ ಬೆದರಿಕೆ ಸಂದೇಶ ಬಂದಿದ್ದಾಗಿ ಮೂಲಗಳು ಹೇಳಿವೆ. ಆದರೆ ಈ ಬಗ್ಗೆ ಏರ್‌ಲೈನ್‌ನಿಂದ ತಕ್ಷಣದ ಪ್ರತಿಕ್ರಿಯೆ ಬಂದಿಲ್ಲ.

ಪ್ರಸ್ತುತ ಕಳೆದ ಒಂದು ವಾರದಲ್ಲಿ 90ಕ್ಕೂ ಹೆಚ್ಚು ದೇಶ-ವಿದೇಶ ವಿಮಾನಗಳಿಗೆ ಬಾಂಬ್ ಬೆದರಿಕೆ ಹಾಕಲಾಗಿದೆ. ಅವುಗಳಲ್ಲಿ ಹೆಚ್ಚಿನವು ಹುಸಿ ಬೆದರಿಕೆಗಳಾಗಿವೆ.

# ತಾಂಜೇನಿಯಾದಲ್ಲಿ ಕಾಲರಾ: ಓರ್ವ ಸಾವು

**ತಾಂಜೇನಿಯಾ:** ದಕ್ಷಿಣ ಪ್ರಾಂತ್ಯದ ಲಿಂಡಿಯಲ್ಲಿ ಕಾಲರಾದಿಂದ ಒಬ್ಬರು ಸಾವನ್ನಪ್ಪಿದ್ದಾರೆ ಮತ್ತು ಇತರ 25 ಜನರನ್ನು ಬ್ಯಾಕ್ಟೀರಿಯಾ ರೋಗಕ್ಕೆ ತುರ್ತಾಗಿ ಆರೋಗ್ಯ ಕೇಂದ್ರಗಳಿಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆಕಿಲ್ವಾ ಜಿಲ್ಲೆಯ ಮಿಗುರುವೆ ವಾರ್ಡ್ನ ಜಿಂಗಾ ಕಿಬಾವೊನಿ ಗ್ರಾಮದಲ್ಲಿ ಅಕ್ಟೋಬರ್ 13 ರಂದು ಕಾಲರಾ ಏಕಾಏಕಿ ವರದಿಯಾಗಿದೆ ಎಂದು ಲಿಂಡಿ ಪ್ರಾದೇಶಿಕ ವೈದ್ಯಕೀಯ ಅಧಿಕಾರಿ ಖೇರಿ ಕಾಗ್ಯಾ ಭಾನುವಾರ ತಿಳಿಸಿದ್ದಾರೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ಈ ಪ್ರದೇಶದಲ್ಲಿ ರೋಗದ ಏಕಾಏಕಿ ವರದಿಯಾಗುತ್ತಿರುವುದು ಇದು ಎರಡನೇ ಬಾರಿ ಎಂದು ಕಾಗ್ಯಾ ಹೇಳಿದರು, ಕಾಲರಾ ಏಕಾಏಕಿ ಸೆಪ್ಟೆಂಬರ್ 17 ರಂದು ಲಿಂಡಿ ಪುರಸಭೆ ಮತ್ತು ಕಿಲ್ವಾ ಜಿಲ್ಲೆಯಲ್ಲಿ ಮೊದಲು ವರದಿಯಾಗಿದೆ. ವಿನಾಶಕಾರಿ ಪರಿಣಾಮಗಳನ್ನು ಉಂಟುಮಾಡುವ ಮೊದಲು ಈ ಪ್ರದೇಶದ ಅಧಿಕಾರಿಗಳು ರೋಗದ ಮೊದಲ ಏಕಾಏಕಿ ನಿಯಂತ್ರಿಸುವಲ್ಲಿ ಯಶಸ್ವಿಯಾದರು ಎಂದು ಅವರು ಹೇಳಿದರು. ಕಿಲ್ವಾ ಜಿಲ್ಲೆಯಲ್ಲಿ ರೋಗದ ಎರಡನೇ ಏಕಾಏಕಿ ನಿಯಂತ್ರಿಸಲು ಆರೋಗ್ಯ ಕಾರ್ಯಕರ್ತರು ಹಗಲಿರುಳು ಶ್ರಮಿಸುತ್ತಿದ್ದಾರೆ. ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ, ಕಾಲರಾ ಎಂಬುದು ವಿಬ್ರಿಯೊ ಕಾಲರಾ ಎಂಬ ಬ್ಯಾಕ್ಟೀರಿಯಾದಿಂದ ಕಲುಷಿತಗೊಂಡ ಆಹಾರ ಅಥವಾ ನೀರನ್ನು ಸೇವಿಸುವುದರಿಂದ ಉಂಟಾಗುವ ತೀವ್ರವಾದ ಅತಿಸಾರದ ಸೋಂಕು. ಕಾಲರಾ ಸಾರ್ವಜನಿಕ ಆರೋಗ್ಯಕ್ಕೆ ಜಾಗತಿಕ ಬೆದರಿಕೆಯಾಗಿ ಉಳಿದಿದೆ ಮತ್ತು ಅಸಮಾನತೆ ಮತ್ತು ಸಾಮಾಜಿಕ ಅಭಿವೃದ್ಧಿಯ ಕೊರತೆಯ ಸೂಚಕವಾಗಿದೆ.



## ಹೆಣವಾದ ಉಗ್ರನಾಯಕನ ಬಂಕರ್ ನಲ್ಲಿ ಹಣದ ರಾಶಿ!

**ಇಸ್ರೇಲ್:** ಮಧ್ಯ ಪ್ರಾಚ್ಯ ರಾಷ್ಟ್ರಗಳಲ್ಲಿ ಯುದ್ಧೋನ್ಮಾದ ಭೀಕರತೆ ಸಾಕಷ್ಟಿದೆ. ಹಮಾಸ್ ಹೆಡೆಮುರಿ ಕಟ್ಟಲು ಇಸ್ರೇಲ್ ಸೇನೆ ಪಣತೊಟ್ಟಿದೆ. ಹಮಾಸ್ ಹಾಗೂ ಯಹೂದಿಗಳ ಸಂಘರ್ಷ ಸದ್ಯಕ್ಕೆ ಮುಗಿಯುವ ಲಕ್ಷಣಗಳು ಇಲ್ಲವೇ ಇಲ್ಲ. ಈ ನಡುವೆ ಹಮಾಸ್ ಮುಖ್ಯಸ್ಥ ಯಾಹ್ಯ ಸಿನ್ವರ್ ಬಂಕರ್ ನಲ್ಲಿ ಕೋಟಿ ಕೋಟಿ ಹಣ ಇಟ್ಟಿರೋ ಬಗ್ಗೆ ಇಸ್ರೇಲಿ ಸೇನೆ ವಿಡಿಯೋ ಹಂಚಿಕೊಂಡಿದೆ. ಯಾಹ್ಯ ಸಿನ್ವರ್ ಹತ್ಯೆ ಬಳಿಕ ವಿಡಿಯೋ ಹೊರಬಂದಿದೆ. ಐಡಿಎಫ್ ಈ ವಿಡಿಯೋ ರಿಲೀಸ್ ಮಾಡಿದ್ದು, ಸಿನ್ವರ್ ಬಳಸುತ್ತಿದ್ದ ಅಧಿಕೃತ ಬಂಕರ್ ನಲ್ಲಿ ತುಂಬಾನೇ ಹಣ ಶೇಖರಣೆ ಮಾಡಿ ಇಟ್ಟಿದ್ದ ವಿಚಾರ ಬೆಳಕಿಗೆ ಬಂದಿದೆ. ಕಂತೆ ಕಂತೆ ನೋಟುಗಳನ್ನ ಒಂದೆಡೆ ಸೇರಿಸಿದ್ದು, ಉಗ್ರ ಚಟುವಟಿಕೆಗೆ ಇದೆ ಹಣ ಬಳಕೆ ಮಾಡಲಾಗುತ್ತಿ ದ್ದದ್ದು ಸಾಬೀತಾಗಿದೆ. ಗಾಜಾದ ಅನೇಕ ಶ್ರೀಮಂತರನ್ನ ಟಾರ್ಗೆಟ್ ಮಾಡಿದ್ದ ಸಿನ್ವರ್, ಅವರಿಂದ ಕೋಟಿ ಕೋಟಿ ಹಣವನ್ನ ಸಂಗ್ರಹಿಸಿದ್ದನು. ಇತರೆ ಹಮಾಸ್ ನಾಯಕರು ಜೀವಬೆದರಿಕೆವೊಡ್ಡಿ ಜನರಿಂದ ದುಡ್ಡು ವಸೂಲಿ ಮಾಡಿದ್ದರು. ಇದೆಲ್ಲ ಹಣವನ್ನ ಬಂಕರ್ ನಲ್ಲಿ ಇಡಲಾಗಿತ್ತು ಎಂದು ಇಸ್ರೇಲ್ ಅಂಬಾಸಿಡರ್ ಡೇವಿಡ್ ಸಾರಂಗ ಮಾಹಿತಿ ನೀಡಿದ್ದಾರೆ.

# ರಾಜಸ್ತಾನದಲ್ಲಿ ಬಸ್-ರಿಕ್ಷಾ ನಡುವೆ ಭೀಕರ ಅಪಘಾತ; 8 ಮಕ್ಕಳು ಸೇರಿ 12 ಮಂದಿ ಸಾವು



**ಜೈಪುರ:** ರಾಜಸ್ಥಾನದ ಧೋಲ್ಪುರದಲ್ಲಿ ಬಸ್ ಮತ್ತು ರಿಕ್ಷಾ ನಡುವೆ ಭೀಕರ ಅಪಘಾತ ಸಂಭವಿಸಿ ಎಂಟು ಮಕ್ಕಳು ಸೇರಿದಂತೆ 12 ಮಂದಿ ಸಾವನ್ನಪ್ಪಿದ್ದಾರೆ. ಕರೌಲಿ-ಧೋಲ್ಪುರ್ ಹೆದ್ದಾರಿ ಎನ್‌ಹೆಚ್ ಬಿಯ ಸುನಿಪುರ್ ಗ್ರಾಮದ ಬಳಿ ಅಪಘಾತ ಸಂಭವಿಸಿದೆ. ಮೃತರಲ್ಲಿ 8 ಮಕ್ಕಳಿದ್ದಾರೆ, ಅವರಲ್ಲಿ ಐವರು ಗಂಡು ಮಕ್ಕಳು, ಮೂವರು ಬಾಲಕಿಯರು, ಇಬ್ಬರು ಮಹಿಳೆಯರು ಹಾಗೂ ಇಬ್ಬರು ಪುರುಷರು ಸೇರಿದ್ದಾರೆ. ಅಪಘಾತದ ಬಗ್ಗೆ ಮಾಹಿತಿ ಪಡೆದ ಸ್ಥಳೀಯ ಪೊಲೀಸರು ಸ್ಥಳಕ್ಕೆ ಧಾವಿಸಿ, ಮೃತದೇಹವನ್ನು ಹೊರತೆಗೆದು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ. ಅಪಘಾತದಲ್ಲಿ ದಂಪತಿ ಮತ್ತು ಎಂಟು ಮಕ್ಕಳು ಸೇರಿದಂತೆ 12 ಜನರು ಸಾವನ್ನಪ್ಪಿದ್ದು, ಮೃತರನ್ನು ಇರ್ಫಾನ್ ಅಲಿಯಾಸ್ ಬಂಟಿ (38), ಅವರ ಪತ್ನಿ ಜೂಲಿ (34), ಪುತ್ರಿ ಅಸ್ಮಾ (14), ಪುತ್ರ ಸಲ್ಮಾನ್ (8), ಪರ್ವೀನ್ (32), ಜರೀನಾ (35), ಸಾಕಿರ್ (6), ಸಾನಿ ಎಂದು ಗುರುತಿಸಲಾಗಿದೆ. ಮಾಹಿತಿ ಪ್ರಕಾರ ಆಟೋ ಸವಾರ ಬರಿ ನಗರದ ಗುಮತ್ ಮೊಹಲ್ಲಾ ನಿವಾಸಿ. ಬರೌಲಿ ಗ್ರಾಮದಲ್ಲಿ ವಿವಾಹ ಕಾರ್ಯಕ್ರಮದಲ್ಲಿ ಭಾಗವಹಿಸಿ ಎಲ್ಲರೂ ಹಿಂತಿರುಗುತ್ತಿದ್ದರು. ಅಷ್ಟರಲ್ಲಿ ಈ ಅವಘಡ ಸಂಭವಿಸಿದೆ. ರಾತ್ರಿ 11 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದೆ ಎಂದು ಮೂಲಗಳಿಂದ ತಿಳಿದು ಬಂದಿದೆ.

# ಮೆಟಾದಲಿ ದೊಡಮಟ್ಟದಲಿ ಉದ್ಯೋಗಿಗಳಿಗೆ 'ಪಿಂಕ್ ಸ್ಲಿಪ್'

**ನ್ಯೂಯಾರ್ಕ್:** ತಂತ್ರಜ್ಞಾನ ಕಂಪನಿಗಳು ಮತ್ತೆ ಉದ್ಯೋಗ ಕಡಿತಕ್ಕೆ ಮುಂದಾಗಿವೆ. ಸಾಮಾಜಿಕ ಜಾಲತಾಣ ಫೇಸ್ಬುಕ್ ಮೂಲ ಕಂಪನಿ ಮೆಟಾ ದೊಡ್ಡಮಟ್ಟದಲ್ಲಿಯೇ ಉದ್ಯೋಗ ಕಡಿತಕ್ಕೆ ಮುಂದಾಗಿದೆ. ವಾಟ್ಸಾಪ್, ಇನ್ಸಾಟ್ಗ್ರಾಮ್ ಮತ್ತು ರಿಯಾಲಿಟಿ ಲ್ಯಾಬ್ ಗಳಲ್ಲಿ ಮೆಟಾ ಉದ್ಯೋಗ ಕಡಿತ ಮಾಡುತ್ತಿದೆ. ಕಂಪನಿಯ ಕೆಲವೊಂದು ತಂಡಗಳ ಪುನರ್ ರಚನೆ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಕಂಪನಿಯ ದೀರ್ಘಾವಧಿಯ ಕಾರ್ಯತಂತ್ರ, ಯೋಜನೆ, ಗುರಿ ಮತ್ತು ಆಯಾ ಸ್ಥಳಕ್ಕೆ ಸಂಬಂಧಿಸಿದ ಯೋಜನೆಗಳಿಗೆ ತಕ್ಕಂತೆ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಹೇಳಲಾಗಿದೆ. ಮೆಟಾ ಕಂಪನಿಯು ಕೊರೋನಾ ಸಾಂಕ್ರಾಮಿಕ ಸಮಯದಲ್ಲಿ ದೊಡ್ಡಮಟ್ಟದಲ್ಲಿ ಉದ್ಯೋಗ ಕಡಿತಗೊಳಿಸಿತ್ತು. 2022 ರಲ್ಲಿ 11 ಸಾವಿರ, 2023 ರಲ್ಲಿ 10 ಸಾವಿರದಷ್ಟು ಉದ್ಯೋಗ ಕಡಿತ ಮಾಡಲಾಗಿತ್ತು.






# ಇಸ್ರೇಲ್ ನತ್ತ ಹಿಜ್ಬುಲ್ಲಾ ಸರಣಿ ಕ್ಷಿಪಣಿ ದಾಳಿ

**ಬೈರುತ್:** ರವಿವಾರ ಲೆಬನಾನ್ನಿಂದ ಸುಮಾರು 100 ಕ್ಷಿಪಣಿಗಳನ್ನು ಇಸ್ರೇಲ್ ನತ್ತ ಪ್ರಯೋಗಿಸಿರುವುದಾಗಿ ಹಿಜ್ಬುಲ್ಲಾ ಮೂಲಗಳನ್ನು ಉಲ್ಲೇಖಿಸಿದ ವರದಿ ಹೇಳಿದೆ.

ರವಿವಾರ ಬೆಳಿಗ್ಗೆ ಸೈರನ್ ಮೊಳಗಿದ ಬಳಿಕ 70 ರಾಕೆಟ್ ಗಳು ಲೆಬನಾನ್ ಕಡೆಯಿಂದ ನುಗ್ಗಿಬಂದಿವೆ.

ಕೆಲ ಗಂಟೆಗಳ ಬಳಿಕ ಮತ್ತೆ 30 ರಾಕೆಟ್ ಗಳನ್ನು ಇಸ್ರೇಲ್ ನ ಪಶ್ಚಿಮ ಗೈಲೀ ಮತ್ತು ಅಪ್ಪರ್ ಗೈಲೀ ಪ್ರದೇಶದತ್ತ ಪ್ರಯೋಗಿಸಲಾಗಿದೆ ಎಂದು ಇಸ್ರೇಲ್ ಮಿಲಿಟರಿ ಹೇಳಿದೆ.

ಉತ್ತರ ಇಸ್ರೇಲ್ ನ ಸೇಫೆಡ್ ನಗರದ ಪೂರ್ವದಲ್ಲಿ ಇಸ್ರೇಲ್ ಸೇನಾ ನೆಲೆಯನ್ನು ಗುರಿಯಾಗಿಸಿ ಬೃಹತ್ ರಾಕೆಟ್ ದಾಳಿ ನಡೆಸಲಾಗಿದೆ. ಲೆಬನಾನ್ ನ ರಕ್ಷಣೆ ಮತ್ತು ಲೆಬನಾನಿನ ಗ್ರಾಮಗಳು ಮತ್ತು ಮನೆಗಳಿಗೆ ಇಸ್ರೇಲ್ ಶತ್ರುವಿನ ದಾಳಿಗೆ ಪ್ರತಿ ದಾಳಿ ಇದಾಗಿದೆ ಎಂದು ಹಿಜ್ಬುಲ್ಲಾ ಹೇಳಿದೆ. ರವಿವಾರ ಬೆಳಿಗ್ಗೆ ದಕ್ಷಿಣ ಬೈರುತ್ ನಲ್ಲಿ ಹಿಜ್ಬುಲ್ಲಾ ಭದ್ರಕೋಟೆ ದಾಹಿಯೆಹ್ ನ ಎರಡು ನಗರಗಳ ಮೇಲೆ ಇಸ್ರೇಲ್ ವೈಮಾನಿಕ ದಾಳಿ ನಡೆಸಿರುವುದಾಗಿ ವರೆದಿಯಾಗಿದೆ.

ಲೆಬನಾನ್ ರಾಜಧಾನಿ ಬೈರುತ್ ನಲ್ಲಿ ಹಿಜ್ಬುಲ್ಲಾದ ಗುಪ್ತಚರ ಪ್ರಧಾನ ಕಚೇರಿ ಹಾಗೂ ಭೂಗತ ಶಸ್ತ್ರಾಸ್ತ್ರ ಸಂಗ್ರಹಾಗಾರದ ಮೇಲೆ ನಿಖರ ದಾಳಿ ನಡೆಸಲಾಗಿದೆ. ದಕ್ಷಿಣ ಲೆಬನಾನ್ ನಲ್ಲಿ ನಡೆಸಿದ ಪ್ರತ್ಯೇಕ ದಾಳಿಯಲ್ಲಿ ಮೂವರು ಹಿಜ್ಬುಲ್ಲಾ ಹೋರಾಟಗಾರರನ್ನು ಹತ್ಯೆ ಮಾಡಿರುವುದಾಗಿ ಇಸ್ರೇಲ್ ಮಿಲಿಟರಿ ಹೇಳಿದೆ.

ಇದಕ್ಕೂ ಮುನ್ನ ದಕ್ಷಿಣ ಬೈರುತ್ ನ ಹೊರವಲಯದ ಎರಡು ನಗರಗಳ ನಿವಾಸಿಗಳಿಗೆ ತಕ್ಷಣ ಸ್ಥಳಾಂತರಗೊಳ್ಳುವ ಆದೇಶ ನೀಡಿದೆ.

# ರಶ್ಯ, ಉಕ್ರೇನ್ 95 ಯುದ್ಧಕೈದಿಗಳ ವಿನಿಮಯ

ಮಾಸ್ಕೋ : ಯುಎಇ ಮಧ್ಯಸ್ಥಿಕೆಯಲ್ಲಿ ನಡೆದ ಒಪ್ಪಂದದ ಪ್ರಕಾರ ರಶ್ಯ ಮತ್ತು ಉಕ್ರೇನ್ ಗಳು ತಲಾ 95 ಯುದ್ಧ ಕೈದಿಗಳನ್ನು ವಿನಿಮಯ ಮಾಡಿಕೊಂಡಿರುವುದಾಗಿ ವರದಿಯಾಗಿದೆ.

ಸ್ವದೇಶಕ್ಕೆ ಹಿಂತಿರುಗುತ್ತಿರುವ ರಶ್ಯದ ಸೇನಾ ಸದಸ್ಯರನ್ನು ಮಿತ್ರದೇಶ ಬೆಲಾರುಸ್ ನಲ್ಲಿ ವೈದ್ಯಕೀಯ ತಪಾಸಣೆಗೆ ಒಳಪಡಿಸಲಾಗುತ್ತಿದೆ ಎಂದು ರಶ್ಯದ ರಕ್ಷಣಾ ಇಲಾಖೆ ಹೇಳಿದೆ.

ಇವರಲ್ಲಿ ಹೆಚ್ಚಿನವರನ್ನು ಕರ್ಸ್ಕ್ ವಲಯದಲ್ಲಿ ಉಕ್ರೇನ್ ಪಡೆ ಸೆರೆಹಿಡಿದಿತ್ತು ಎಂದು ಮಾಧ್ಯಮಗಳು ವರದಿ ಮಾಡಿವೆ. ಪ್ರತೀ ಬಾರಿ ಉಕ್ರೇನ್ ತನ್ನ ಜನರನ್ನು ರಶ್ಯದ ಸೆರೆಯಿಂದ ರಕ್ಷಿಸಿದಾಗ, ರಶ್ಯದ ಸೆರೆಯಲ್ಲಿರುವ ಎಲ್ಲರಿಗೂ ಸ್ವಾತಂತ್ರ್ಯವನ್ನು ಹಿಂದಿರುಗಿಸುವ ದಿನಕ್ಕೆ ನಾವು ಹತ್ತಿರವಾಗುತ್ತಿದ್ದೇವೆ' ಎಂದು ಉಕ್ರೇನ್ ಅಧ್ಯಕ್ಷ ವೊಲೊದಿಮಿರ್ ಝೆಲೆನ್ಸ್ಕಿ ಹೇಳಿದ್ದಾರೆ.

ಬಿಡುಗಡೆಗೊಂಡವರಲ್ಲಿ ಉಕ್ರೇನಿನ ಪತ್ರಕರ್ತ ಮತ್ತು ಮಾನವ ಹಕ್ಕುಗಳ ಪ್ರತಿಪಾದಕ ಮ್ಯಾಕ್ಸಿಮ್ ಬುಟ್ಕೆವಿಚ್ ಕೂಡಾ ಸೇರಿದ್ದಾರೆ. ಇದು ಯುದ್ಧ ಆರಂಭವಾದಿನಿಂದ 58ನೇ ಯುದ್ಧಕೈದಿಗಳ ವಿನಿಮಯ ಪ್ರಕ್ರಿಯೆಯಾಗಿದ್ದು ಇದುವರೆಗೆ 3,767 ಯುದ್ಧಕೈದಿಗಳು ಸ್ವದೇಶಕ್ಕೆ ಮರಳಿದ್ದಾರೆ ಎಂದು ಉಕ್ರೇನ್ ಸಂಸತ್ ನ ಮಾನವ ಹಕ್ಕುಗಳ ಆಯುಕ್ತ ಡಿಮಿಟ್ರೊ ಲ್ಯುಬಿನೆಟ್ಸ್ ಹೇಳಿದ್ದಾರೆ.



# ಜಮ್ಮುಕಾಶ್ಮೀರದಲ್ಲಿ ಉಗ್ರರ ಅಟ್ಟಹಾಸ ಕಾರ್ಮಿಕರ ಗುಂಡಿಕ್ಕಿ ಹತ್ಯೆ!

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಗಂಡರ್ಬಾಲ್ ಜಿಲ್ಲೆಯ ಗಗಾಂಗೀರ್‌ನಲ್ಲಿ ನಿರ್ಮಾಣ ಸ್ಥಳದಲ್ಲಿ ಭಯೋತ್ಪಾದಕರ ದಾಳಿಯಲ್ಲಿ ಓರ್ವ ವೈದ್ಯ ಸೇರಿದಂತೆ 6 ಮಂದಿ ನಿರ್ಮಾಣ ಕಾರ್ಮಿಕರು ಸಾವನ್ನಪ್ಪಿದ್ದಾರೆ ಎಂದು ಅಧಿಕೃತ ಮೂಲಗಳು ಭಾನುವಾರ ತಿಳಿಸಿವೆ. ಸಾವುನೋವುಗಳ ಸಂಖ್ಯೆ ಹೆಚ್ಚಾಗಬಹುದು ಎಂದು ಮೂಲಗಳು ತಿಳಿಸಿವೆ.

ಶೇರ್-ಎ-ಕಾಶ್ಮೀರ್ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ. ಸುರಂಗ ನಿರ್ಮಾಣದಲ್ಲಿ ತೊಡಗಿರುವ ಖಾಸಗಿ ಕಂಪನಿಯೊಂದರ ಕಾರ್ಮಿಕರನ್ನು ಹೊಂದಿರುವ ಕಾರ್ಮಿಕರ ಶಿಬಿರದ ಮೇಲೆ ಭಯೋತ್ಪಾದಕರು ಗುಂಡಿನ ದಾಳಿ ನಡೆಸಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಮೃತರನ್ನು ಡಾ.ಶಹನವಾಜ್, ಫಹೀಮ್ ನಜೀರ್, ಕಲೀಂ, ಮೊಹಮ್ಮದ್ ಹನೀಫ್, ಶಶಿ ಅಬ್ರೋಲ್, ಅನಿಲ್ ಶುಕ್ಲಾ ಮತ್ತು ಗುರ್ಮೀತ್ ಸಿಂಗ್ ಎಂದು ಗುರುತಿಸಲಾಗಿದೆ.

ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರು ಅಮಾಯಕ ಕಾರ್ಮಿಕರ ಮೇಲೆ ಭೀಕರ ಮತ್ತು ಹೇಡಿತನದ ದಾಳಿ ನಡೆಸಲಾಗಿದೆ ಎಂದು ವಿವರಿಸಿದ್ದಾರೆ. ನಿರಾಯುಧ ವ್ಯಕ್ತಿಗಳ ಮೇಲಿನ ಹಲ್ಲೆಯನ್ನು ಖಂಡಿಸಿದರು. ಅಬ್ದುಲ್ಲಾ ಅವರು ಮೃತರ ಕುಟುಂಬಗಳಿಗೆ ಮತ್ತು ಗಾಯಗೊಂಡವರ ಕುಟುಂಬಗಳಿಗೆ ತಮ್ಮ ಸಂತಾಪ ವ್ಯಕ್ತಪಡಿಸಿದ್ದು,



ಈ ಪ್ರದೇಶದಲ್ಲಿ ಸ್ಥಳೀಯೇತರ ಕಾರ್ಮಿಕರಿಗೆ ನ್ಯಾಯ ಮತ್ತು ಹೆಚ್ಚಿನ ಭದ್ರತೆ ಕೈಗೊಳ್ಳಲು ಸೂಚಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಗಗಂಗೀರ್‌ನಲ್ಲಿ ನಾಗರಿಕರ ಮೇಲೆ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಇದು ಹೇಡಿತನದ ಭೀಕರ ಕೃತ್ಯ. ದಾಳಿಕೋರರನ್ನು ಬಿಡುವುದಿಲ್ಲ ಎಂದಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸಲ್ಮಾನ್‌ಖಾನ್ ಗೋಸ್ಕರ ಪ್ರಮುಖ ನಿರ್ಧಾರ ತೆಗೆದುಕೊಂಡ ಪಾಪರಾಜಿಗಳು

ಮಹಾರಾಷ್ಟ್ರ ಮಾಜಿ ಸಚಿವ ಬಾಬಾ ಸಿದ್ದಿಕಿ ಹತ್ಯೆಯ ನಂತರ ಸಲ್ಮಾನ್ ಖಾನ್ ಭದ್ರತೆಯನ್ನು ಹೆಚ್ಚಿಸಲಾಗಿದೆ. ನಿರಂತರ ಬೆದರಿಕೆಯಿಂದಾಗಿ ಸಲ್ಮಾನ್ ಖಾನ್ ಗೆ ಮುಂಬೈ ಪೊಲೀಸರು ವೈ ಪ್ಲಸ್ ಭದ್ರತೆಯನ್ನು ನೀಡಿದ್ದಾರೆ. ಈಗ ಪಾಪರಾಜಿಗಳು ಅಲರ್ಟ್ ಮೋಡ್ ನಲ್ಲಿದ್ದಾರೆ. ಕೆಲವು ವರದಿಗಳ ಪ್ರಕಾರ ಅವರು ಸಲ್ಮಾನ್ ಖಾನ್ ಬಗ್ಗೆ ಪ್ರಮುಖ ನಿರ್ಧಾರವನ್ನು ತೆಗೆದುಕೊಂಡಿದ್ದಾರೆ ಎಂದು ವರದಿ ಆಗಿದೆ.

ಬಾಲಿವುಡ್‌ನಲ್ಲಿ ಸಲ್ಮಾನ್ ಖಾನ್ ಸಾಕಷ್ಟು ಹೆಸರು ಮಾಡಿದ್ದಾರೆ. ಪ್ರಮುಖ ಸೂಪರ್‌ಸ್ಟಾರ್‌ಗಳಲ್ಲಿ ಅವರ ಹೆಸರೂ ಪ್ರಮುಖವಾಗಿದೆ. ಪಾಪರಾಜಿಗಳಿಗೆ ನೆಚ್ಚಿನ ವಿಷಯವಾಗಿದೆ. ಸಲ್ಮಾನ್ ಅವರ ಫೋಟೋಗಳು, ಮುಂಬರುವ ಸಿನಿಮಾಗಳು, ಶೂಟಿಂಗ್ ಮಾತ್ರವಲ್ಲದೆ ಸಮುದ್ರತೀರದಲ್ಲಿ ಅವರ ವಾಕ್, ಏರ್ ಪೋರ್ಟ್ ಲುಕ್ ಸೇರಿ ಪಾಪರಾಜಿಗಳು ಅವರ ಚಲನವಲನಗಳ ಮೇಲೆ ಕಣ್ಣಿಡುತ್ತಾರೆ. ಸಲ್ಮಾನ್‌ನ ಪ್ರತಿಯೊಂದು ವಿಚಾರಗಳ ಕುರಿತು ಅವರ ಅಭಿಮಾನಿಗಳಿಗೆ ತಿಳಿಸುತ್ತಾರೆ. ಆದರೆ ಸದ್ಯ ಸಲ್ಮಾನ್ ಭದ್ರತೆಯಿಂದಾಗಿ ಬಿಗುವಿನ ವಾತಾವರಣ ನಿರ್ಮಾಣವಾಗಿದೆ. ಪೊಲೀಸರಿಂದ ಹಿಡಿದು ಸಲ್ಮಾನ್ ನ ಅಂಗರಕ್ಷಕರವರೆಗೆ ಎಲ್ಲರೂ ಅವರನ್ನು ಸುರಕ್ಷತೆಯನ್ನು ನೋಡಿಕೊಳ್ಳುತ್ತಿದ್ದಾರೆ.



ಸಲ್ಮಾನ್‌ಗೆ ಬಂದಿರುವ ಬೆದರಿಕೆಗಳ ಗಂಭೀರತೆಯನ್ನು ಪರಿಗಣಿಸಿ ಪಾಪರಾಜಿಗಳು ಅವರ ಸುರಕ್ಷತೆಗಾಗಿ ಮಹತ್ವದ ನಿರ್ಧಾರವನ್ನು ತೆಗೆದುಕೊಂಡಿದ್ದಾರೆ. ಈ ಪರಿಸ್ಥಿತಿ ಶಾಂತವಾಗುವವರೆಗೆ ಅಥವಾ ಸಲ್ಮಾನ್ ಮೇಲಿನ ಬಿಕ್ಕಟ್ಟು ಬಗೆಹರಿಯುವವರೆಗೆ ಸಲ್ಮಾನ್ ಅವರ ಯಾವುದೇ ಫೋಟೋನ ತೆಗೆದುಕೊಳ್ಳಬಾರದು. ಅಲ್ಲದೆ ಅವರ ಯಾವುದೇ ಕ್ಷಣಗಳನ್ನು ಶೂಟ್ ಮಾಡದಿರಲು ನಿರ್ಧರಿಸಿದ್ದಾರೆ. ಅವರ ಬಗ್ಗೆ ಯಾವುದೇ ಮಾಹಿತಿ ಹೊರ ಬರಬಾರದು ಎಂದು ಪಾಪರಾಜಿಗಳು ನಿರ್ಧರಿಸಿದ್ದಾರೆ.

ಸಲ್ಮಾನ್ ಇತ್ತೀಚೆಗೆ ಮುಂಬೈ ಫಿಲ್ಮ್‌ಸಿಟಿಯಲ್ಲಿರುವ ಹಿಂದಿ ಬಿಗ್ ಬಾಸ್ 18ರ ಚಿತ್ರೀಕರಣದಲ್ಲಿ ಪಾಲ್ಗೊಂಡಿದ್ದರು. ಶೂಟಿಂಗ್ ಮುಗಿಯುವವರೆಗೂ ಸೆಟ್‌ನಲ್ಲಿದ್ದ ಯಾರಿಗೂ ಹೊರಹೋಗಲು ಅವಕಾಶವಿಲ್ಲ ಮತ್ತು ಅಪರಿಚಿತರನ್ನು ಸೆಟ್ ಗೆ ಬಿಡಲಿಲ್ಲ. ಸಲ್ಮಾನ್ ಖಾನ್ ಭದ್ರತೆಯನ್ನು ಮತ್ತಷ್ಟು ಹೆಚ್ಚಿಸುವ ಸಾಧ್ಯತೆ ಇದೆ. ಇದನ್ನು ಗಮನಿಸಿ, ಪಾಪರಾಜಿಗಳು ಸಲ್ಮಾನ್ ಅವರ ಚಟುವಟಿಕೆಗಳನ್ನು ಮೇಲ್ವಿಚಾರಣೆ ಮಾಡುವುದರಿಂದ ದೂರವಿದ್ದಾರೆ.

ಪಾಪರಾಜಿಗಳು ಸಲ್ಮಾನ್ ಖಾನ್ ಅವರ ಸುರಕ್ಷತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ ಮತ್ತು ಅವರ ಸುರಕ್ಷತೆ ಹೆಚ್ಚು ಮುಖ್ಯವಾಗಿದೆ ಎಂದು ಹೇಳಿದ್ದಾರೆ. ಅಲ್ಲದೆ, ಸದ್ಯದ ಉದ್ವಿಗ್ನ ವಾತಾವರಣಕ್ಕೆ ಸೇರ್ಪಡೆಯಾಗದಿರಲು ಪಾಪರಾಜಿಗಳು ಸಲ್ಮಾನ್ ಅವರ ನವೀಕರಣಗಳನ್ನು ಪಡೆಯಲು ಮತ್ತು ಅಭಿಮಾನಿಗಳಿಗೆ ತಲುಪಿಸಲು ತಮ್ಮನ್ನು ತಾವು ಸಂಯಮ ಮಾಡಿಕೊಂಡಿದ್ದಾರೆ.

**ಪಾಪರಾಜಿಯ ನಿರ್ಧಾರವೇ ಸಲ್ಮಾನ್ ಪ್ರೀತಿ:** ಪಾಪರಾಜಿಗಳು ಈಗ ಸಲ್ಮಾನ್ ಅವರ ಫೋಟೋಗಳಿಗಿಂತ ಅವರ ಸುರಕ್ಷತೆಯ ಬಗ್ಗೆ ಹೆಚ್ಚು ಕಾಳಜಿ ವಹಿಸುತ್ತಾರೆ. ಹಾಗಾಗಿ ಪಾಪರಾಜಿಗಳ ನಿರ್ಧಾರವು ಅವರ ನೆಚ್ಚಿನ ನಟನ ಮೇಲಿನ ಪ್ರೀತಿಯನ್ನು ಮತ್ತು ಸಲ್ಮಾನ್ ಸುರಕ್ಷತೆಯ ಬಗ್ಗೆ ಅವರಿಗಿರುವ ಗೌರವವನ್ನು ತೋರಿಸಿದೆ.



# ಅಪ್ಪನ ಸಿನಿಮಾ ಮೂಲಕವೇ ನಟನೆಗೆ ಎಂಟ್ರಿ ಕೊಟ್ಟ ಪವನ್ ಪುತ್ರ ಅಕಿರಾ

ಪವನ್ ಕಲ್ಯಾಣ್ ಈಗ ಆಂಧ್ರ ಪ್ರದೇಶದ ಉಪ ಮುಖ್ಯ ಮಂತ್ರಿ, ಅರಣ್ಯ, ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಖಾತೆಗಳು ಸೇರಿದಂತೆ ಕೆಲವು ಪ್ರಮುಖ ಜವಾಬ್ದಾರಿಗಳನ್ನು ಹೆಗಲಿಗೆ ಹಾಕಿಕೊಂಡಿದ್ದಾರೆ. ಚುನಾವಣೆ ಪ್ರಾರಂಭವಾಗುವ ಕೆಲ ತಿಂಗಳ ಮೊದಲಿನಿಂದಲೂ ಪವನ್ ಕಲ್ಯಾಣ್ ಚಿತ್ರರಂಗದಿಂದ ದೂರಾಗಿದ್ದರು. ಸುಮಾರು ಒಂದು ವರ್ಷಕ್ಕೂ ಹೆಚ್ಚು ಸಮಯದಿಂದ ಪವನ್ ಕಲ್ಯಾಣ್ ಸಿನಿಮಾ ಶೂಟಿಂಗ್ ಮಾಡಿಲ್ಲ. ಇದರ ನಡುವೆ ಪವನ್ ಕಲ್ಯಾಣ್ ರ ಪುತ್ರ ಅಕಿರಾ ನಂದಾ ಸಹ ಚಿತ್ರರಂಗಕ್ಕೆ ಎಂಟ್ರಿ ನೀಡಲಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದ್ದು, ಅದೂ ತಂದೆಯ ಸಿನಿಮಾ ಮೂಲಕವೇ ಅಕಿರಾ ಚಿತ್ರರಂಗಕ್ಕೆ ಕಾಲಿಡಲಿದ್ದಾರೆ ಎನ್ನಲಾಗುತ್ತಿದೆ.

ಕಳೆದ ಒಂದು ವರ್ಷದಿಂದಲೂ ಚಿತ್ರೀಕರಣಕ್ಕೆ ಬ್ರೇಕ್ ನೀಡಿದ್ದ ಪವನ್ ಕಲ್ಯಾಣ್ ಈಗ ತಮ್ಮ ಅರ್ಧಕ್ಕೆ ನಿಂತಿರುವ ಸಿನಿಮಾಗಳ ಚಿತ್ರೀಕರಣ ಪೂರ್ಣಗೊಳಿಸುತ್ತಿದ್ದು ಮೊದಲಿಗೆ 'ಓಜಿ' ಸಿನಿಮಾದ ಶೂಟಿಂಗ್ ಮಾಡುತ್ತಿದ್ದಾರೆ. ಇದೇ ಸಿನಿಮಾದಲ್ಲಿ ಅಕಿರಾ ನಂದಾ ಸಹ ಚಿತ್ರರಂಗಕ್ಕೆ ಎಂಟ್ರಿ ನೀಡಲಿದ್ದಾರೆ ಎನ್ನಲಾಗುತ್ತಿದೆ. ಪವನ್ ಕಲ್ಯಾಣ್ ರ ಪಾತ್ರ, ಬಾಲಕನಾಗಿದ್ದಾಗಿನ ದೃಶ್ಯಗಳು 'ಓಜಿ' ಸಿನಿಮಾದಲ್ಲಿದ್ದು ಆ ಪಾತ್ರವನ್ನು ಪವನ್ ಕಲ್ಯಾಣ್ ಪುತ್ರ ಅಕಿರಾ ಅವರೇ ನಿರ್ವಹಿಸಲಿದ್ದಾರೆ.

ಮಗ ಮೊದಲ ಬಾರಿಗೆ ಕ್ಯಾಮೆರಾ



ಎದುರಿಸುತ್ತಿರುವ ಕಾರಣದಿಂದ ಅಕಿರಾ ತಾಯಿ ರೇಣು ದೇಸಾಯಿ ವಿಶೇಷ ಪೂಜೆಯನ್ನು ಮನೆಯಲ್ಲಿ ಮಾಡಿಸಿದ್ದರು. ಪೂಜೆಯಲ್ಲಿ ಅಕಿರಾ ನಂದಾ ಸಹ ಭಾಗಿಯಾಗಿದ್ದರು. ಅಕಿರಾ ಚಿತ್ರರಂಗಕ್ಕೆ ಬರಬೇಕು ಎಂಬುದು ಅವರ ಅಭಿಮಾನಿಗಳ ಆಸೆಯೂ ಆಗಿತ್ತು. ಈಗದು ಪವನ್ ರ ಸಿನಿಮಾ ಮೂಲಕವೇ ಈಡೇರುತ್ತಿದೆ. ಈ ಹಿಂದೆ ರಾಜಮೌಳಿಯವರ ತಂದೆ ವಿಜಯೇಂದ್ರ ಪ್ರಸಾದ್ ಸಹ ಪವನ್ ಕಲ್ಯಾಣ್ ಮಗ ಸಿನಿಮಾ ನಟನಾಗಬೇಕು ಎಂದು ಹೇಳಿದ್ದರು.

ಪವನ್ ಕಲ್ಯಾಣ್ ಗೆ ಒಟ್ಟು ನಾಲ್ಕು ಮಂದಿ ಮಕ್ಕಳು. ಮೊದಲ ಪತ್ನಿ ನಂದಿನಿ ಜೊತೆಗೆ ಯಾವುದೇ ಮಕ್ಕಳಾಗಿರಲಿಲ್ಲ. ರೇಣು ದೇಸಾಯಿ ಜೊತೆಗೆ ಇಬ್ಬರು ಮಕ್ಕಳಿದ್ದು ಒಂದು ಗಂಡು ಮತ್ತು ಒಂದು ಹೆಣ್ಣು ಮಗು ಅವರಿಗೆ ಇದೆ. ಆ ನಂತರ ರಷ್ಯಾದ ಅನ್ನಾ ಅವರನ್ನು ವಿವಾಹವಾದ ಪವನ್ ಅವರೊಟ್ಟಿಗೆ ಇಬ್ಬರು ಮಕ್ಕಳು ಪಡೆದಿದ್ದಾರೆ.

ಪವನ್ ಕಲ್ಯಾಣ್ ರ ಮೂರು ಸಿನಿಮಾಗಳು ಚಿತ್ರೀಕರಣ ಆಗಬೇಕಿವೆ. ಚುನಾವಣೆಗೆ ಹೋಗುವ ಮುಂಚೆ ಮೂರು ಸಿನಿಮಾಗಳನ್ನು ಪವನ್ ಕಲ್ಯಾಣ್ ಒಪ್ಪಿಕೊಂಡಿದ್ದರು. 'ಓಜಿ', ಹರಿ ಶಂಕರ್ ನಿರ್ದೇಶನದ 'ಉಸ್ತಾದ್ ಭಗತ್ ಸಿಂಗ್' ಮತ್ತು 'ಹರಿ ಹರ ವೀರ ಮಲ್ಲು'. ಪ್ರಸ್ತುತ 'ಓಜಿ' ಸಿನಿಮಾದ ಚಿತ್ರೀಕರಣವನ್ನು ಮುಗಿಸಿಕೊಡುತ್ತಿದ್ದಾರೆ ಪವನ್ ಕಲ್ಯಾಣ್. ಅದಾದ ಬಳಿಕ 'ಉಸ್ತಾದ್ ಭಗತ್ ಸಿಂಗ್' ಮತ್ತು 'ಹರಿ ಹರ ವೀರ ಮಲ್ಲು' ಸಿನಿಮಾದ ಚಿತ್ರೀಕರಣ ಮುಗಿಸಲಿದ್ದಾರೆ.

# ಸಮಂತಾ ಜೊತೆ ನಟಿಸಬೇಡ ಎಂದಿದ್ದರು

ಸಮಂತಾ ಈಗ ಪ್ಯಾನ್ ಇಂಡಿಯಾ ಸ್ಟಾರ್ ನಟಿ. ಬಾಲಿವುಡ್ ನಲ್ಲಿಯೂ ಸಹ ಸಖತ್ ಬೇಡಿಕೆ ಹೊಂದಿದ್ದಾರೆ. ಸಮಂತಾ, ಬಾಲಿವುಡ್ ನ ಸ್ಟಾರ್ ನಟ ವರುಣ್ ಧವನ್ ಜೊತೆ ನಟಿಸಿರುವ 'ಸಿಟಾಡೆಲ್: ಹನಿ ಬನಿ' ಕೆಲವೇ ದಿನಗಳಲ್ಲಿ ಅಮೆಜಾನ್ ನಲ್ಲಿ ಬಿಡುಗಡೆ ಆಗಲಿದೆ. ವೆಬ್ ಸರಣಿಯ ಪ್ರಚಾರ ಕಾರ್ಯದಲ್ಲಿ ಸಮಂತಾ ಮತ್ತು ವರುಣ್ ಧವನ್ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಇತ್ತೀಚೆಗಿನ ಸಂದರ್ಶನವೊಂದರಲ್ಲಿ ಮಾತನಾಡಿರುವ ವರುಣ್ ಧವನ್, ಸಮಂತಾ ಬಗ್ಗೆ ಕೆಲವರು ಋಣಾತ್ಮಕವಾಗಿ ಮಾತನಾಡಿದ್ದ ವಿಷಯ ಹೇಳಿದ್ದಾರೆ.

'ನಾನು ಸಮಂತಾರ 'ದಿ ಫ್ಯಾಮಿಲಿ ಮ್ಯಾನ್' ನೋಡಿ ಖುಷಿ ಪಟ್ಟಿದ್ದೆ. ಸಮಂತಾ ಜೊತೆಗೆ ನಟಿಸಬೇಕು ಎಂದು ನಾನು ಮೊದಲೇ ನಿಶ್ಚಯಿಸಿದ್ದೆ. 'ಸಿಟಾಡೆಲ್' ಆಫರ್ ಬಂದಾಗ ಸಹಜವಾಗಿಯೇ ಖುಷಿಯಾಗಿತ್ತು. ಆದರೆ ಆ



ಶಾಕಿಂಗ್ ವಿಷಯ ಹೇಳಿದ ವರುಣ್ ಧವನ್

ಸಮಯದಲ್ಲಿ ಕೆಲವರು ನನ್ನ ಬಳಿ ಸಮಂತಾ ಬಗ್ಗೆ ನೆಗೆಟಿವ್ ಆಗಿ ಮಾತನಾಡಿದ್ದರು. ಸಮಂತಾ ಜೊತೆ ಕೆಲಸ ಮಾಡಬೇಡ, ಆಕೆಗೆ ಆಟಿಟ್ಯೂಡ್, ಆರೋಗ್ಯ ಸಮಸ್ಯೆ ಇದೆ, ಚಿತ್ರೀಕರಣ ಪೂರ್ಣ ಮಾಡುವುದಿಲ್ಲ. ನಿಮ್ಮ ಜೋಡಿ ಸಹ ಸರಿಹೊಂದುವುದಿಲ್ಲ' ಎಂದೆಲ್ಲ ಹೇಳಿದ್ದರು' ಆದರೂ ಸಹ ನಾನು ಸಮಂತಾ ಜೊತೆ ಕೆಲಸ ಮಾಡಿದೆ' ಎಂದಿದ್ದಾರೆ.

'ಸಿಟಾಡೆಲ್' ವೆಬ್ ಸರಣಿಯ ಚಿತ್ರೀಕರಣ ಪ್ರಾರಂಭವಾಗಿ ಬಹಳ ಕಾಲವಾಯಿತು. ಅಸಲಿಗೆ ಸಮಂತಾರ ಅನಾರೋಗ್ಯದಿಂದಲೇ ವೆಬ್ ಸರಣಿಯ ಚಿತ್ರೀಕರಣ ತಡವಾಯ್ತು. ಸಾಕಷ್ಟು ಸಮಯ ಮುಂದೂಡಿದ ಬಳಿಕವಷ್ಟೆ ವೆಬ್ ಸರಣಿಯ ಚಿತ್ರೀಕರಣ ಮುಗಿಸಲಾಯ್ತು. ಚಿತ್ರೀಕರಣ ಪ್ರಾರಂಭವಾದ ಸುಮಾರು ಮೂರು ವರ್ಷಗಳ ಬಳಿಕ ಈಗ 'ಸಿಟಾಡೆಲ್: ಹನಿ-ಬನಿ' ಬಿಡುಗಡೆ ಆಗುತ್ತಿದೆ.

'ಸಿಟಾಡೆಲ್' ಇಂಗ್ಲೀಷ್ ಕಾದಂಬರಿಯನ್ನು ರೋಸ್ ಸಹೋದರರು ಇಂಗ್ಲೀಷ್ ನಲ್ಲಿ ವೆಬ್ ಸರಣಿ ಮಾಡಿದರು. ಅದರಲ್ಲಿ ಪ್ರಿಯಾಂಕಾ ಚೋಪ್ರಾ ಮುಖ್ಯ ಪಾತ್ರದಲ್ಲಿ ನಟಿಸಿದ್ದರು. ಅದೇ ವೆಬ್ ಸರಣಿ ಇಟಲಿ ಭಾಷೆಯಲ್ಲಿಯೂ ನಿರ್ಮಾಣಗೊಂಡು ಬಿಡುಗಡೆ ಆಯ್ತು. ಇದೀಗ ಅದೇ ವೆಬ್ ಸರಣಿ ಹಿಂದಿಯಲ್ಲಿಯೂ ಬಿಡುಗಡೆ ಆಗುತ್ತದೆ. ಕತೆಯನ್ನು ಹಾಗೆಯೇ ಉಳಿಸಿಕೊಂಡು ಭಾರತದ ನೇಟಿವಿಟಿಗೆ ತಕ್ಕಂತೆ ಕೆಲ ಬದಲಾವಣೆಗಳನ್ನು ನಿರ್ದೇಶಕರಾದ ರಾಜ್ ಆಂಡ್ ಡಿಕೆ ಮಾಡಿಕೊಂಡಿದ್ದಾರೆ. ಈ ವೆಬ್ ಸರಣಿ ನವೆಂಬರ್ 7ರಿಂದ ಅಮೆಜಾನ್ ಪ್ರೈಂನಲ್ಲಿ ಬಿಡುಗಡೆ ಆಗಲಿದೆ.

# ನ್ಯೂಜಿಲೆಂಡ್‌ಗೆ ಚೊಚ್ಚಲ ಚಾಂಪಿಯನ್ ಕಿರೀಟ

14 ವರ್ಷಗಳ ಬಳಿಕ ಐಸಿಸಿ ಮಹಿಳಾ ಟಿ20 ವಿಶ್ವಕಪ್ ಫೈನಲ್ ತಲುಪಿದ್ದ ನ್ಯೂಜಿಲೆಂಡ್ ಮಹಿಳಾ ಕ್ರಿಕೆಟ್ ತಂಡ ಚೊಚ್ಚಲ ಬಾರಿಗೆ ಚಾಂಪಿಯನ್ ಆಗಿ ಹೊರಹೊಮ್ಮಿದೆ. ದಕ್ಷಿಣ ಆಫ್ರಿಕಾ ತಂಡ 2ನೇ ಬಾರಿಗೆ ರನ್ನರ್ ಅಪ್ ಪ್ರಶಸ್ತಿಗೆ ತೃಪ್ತಿಪಟ್ಟುಕೊಂಡಿದೆ.

ಭಾನುವಾರ ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ದಕ್ಷಿಣ ಆಫ್ರಿಕಾ ಮಹಿಳಾ ತಂಡ ವಿರುದ್ಧ ನಡೆದ ಫೈನಲ್ ಪಂದ್ಯದಲ್ಲಿ 32 ರನ್‌ಗಳ ಗೆಲುವು ಸಾಧಿಸಿ, ಚೊಚ್ಚಲ ಚಾಂಪಿಯನ್ ಕಿರೀಟವನ್ನು ಮುಡಿಗೇರಿಸಿಕೊಂಡಿದೆ.

ಈ ಹಿಂದೆಯೂ ಎರಡು ಬಾರಿ ಫೈನಲ್ ತಲುಪಿದ್ದ ನ್ಯೂಜಿಲೆಂಡ್ ಮಹಿಳಾ ತಂಡ 2009ರಲ್ಲಿ ಇಂಗ್ಲೆಂಡ್ ವಿರುದ್ಧ, 2010ರಲ್ಲಿ ಆಸ್ಟ್ರೇಲಿಯಾ ವಿರುದ್ಧ ಸೋಲು ಕಂಡು ರನ್ನರ್ ಪ್ರಶಸ್ತಿಗೆ ತೃಪ್ತಿಪಟ್ಟುಕೊಂಡಿತ್ತು. ಇನ್ನೂ 2023ರಲ್ಲಿ ಮೊದಲ ಬಾರಿಗೆ ಫೈನಲ್ ಪ್ರವೇಶಿಸಿದ್ದ ದಕ್ಷಿಣ ಆಫ್ರಿಕಾ ತಂಡ ಆಸ್ಟ್ರೇಲಿಯಾ ವಿರುದ್ಧ ಸೋತು ರನ್ನರ್ ಪ್ರಶಸ್ತಿಗೆ ತೃಪ್ತಿಪಟ್ಟುಕೊಂಡಿತ್ತು. ಇದೀಗ 14 ವರ್ಷಗಳ ಬಳಿಕ ಫೈನಲ್ ಪ್ರವೇಶಿಸಿದ ಕಿವೀಸ್ ಮಹಿಳಾ ತಂಡ ಚೊಚ್ಚಲ ಚಾಂಪಿಯನ್ ಕಿರೀಟವನ್ನು ಮುಡಿಗೇರಿಸಿಕೊಂಡಿದೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ್ದ



ನ್ಯೂಜಿಲೆಂಡ್ ಆರಂಭಿಕ ಹಿನ್ನಡೆ ಅನುಭವಿಸಿದರೂ ಸವಾಲಿನ ಮೊತ್ತ ಕಲೆಹಾಕಿತು. 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 158 ರನ್ ಗಳಿಸಿತ್ತು. ಗೆಲುವಿಗೆ 159 ರನ್ ಗುರಿ ಪಡೆದ ದಕ್ಷಿಣ ಆಫ್ರಿಕಾ ತಂಡ 9 ವಿಕೆಟ್‌ಗಳಿಗೆ 126 ರನ್‌ಗಳಷ್ಟೇ ಗಳಿಸಲು ಸಾಧ್ಯವಾಗಿ ಸೋಲು ಕಂಡಿತು.

ಚೇಸಿಂಗ್ ಆರಂಭಿಸಿದ ದಕ್ಷಿಣ ಆಫ್ರಿಕಾ ಪರ ಆರಂಭಿಕರಾದ ಲಾರಾ ವೊಲ್ವಾರ್ಡ್ಟ್, ತಜ್ಮಿನ್ ಬ್ರಿಟ್ಸ್ ಜೋಡಿ ಮೊದಲ ವಿಕೆಟ್‌ಗೆ 6.5 ಓವರ್‌ಗಳಲ್ಲಿ 51 ರನ್‌ಗಳ ಜೊತೆಯಾಟ ನೀಡಿತ್ತು. ಈ ಜೋಡಿ ವಿಕೆಟ್ ಬೀಳುತ್ತಿದ್ದಂತೆ ಮಧ್ಯಮ ಕ್ರಮಾಂಕದ ಆಟಗಾರರು ರನ್ ಕಲೆಹಾಕುವಲ್ಲಿ ಎಡವಿದರು. ಇದು ದಕ್ಷಿಣ ಆಫ್ರಿಕಾ ಸೋಲಿಗೆ ಕಾರಣವಾಯಿತು.

**ಅಮೆಲಿಯಾ ಕೇರ್ ಆಲ್‌ರೌಂಡ್ ಆಟ:** ಅಲ್ಪ ಮೊತ್ತಕ್ಕೆ ಪ್ರಮುಖ ವಿಕೆಟ್ ಕಳೆದುಕೊಂಡು ಸಂಕಷ್ಟದಲ್ಲಿದ್ದ ಕಿವೀಸ್‌ಗೆ ಅಮೇಲಿಯಾ ಕೇರ್ ಬ್ಯಾಟಿಂಗ್‌ನಲ್ಲಿ ಜೀವ ತುಂಬಿದರು. 38 ಎಸೆತಗಳಲ್ಲಿ 4 ಬೌಂಡರಿಗಳೊಂದಿಗೆ 43 ರನ್ ಬಾರಿಸಿದರು. ಇದರೊಂದಿಗೆ ಬೌಲಿಂಗ್‌ನಲ್ಲಿ ಪ್ರಮುಖ 3 ವಿಕೆಟ್ ಕಿತ್ತು ಮಿಂಚಿದರು. ಇದು ತಂಡದ ಗೆಲುವಿಗೆ ಸಾಕಾರವಾಯಿತು.

## 36 ವರ್ಷಗಳ ಬಳಿಕ ಭಾರತದ ನೆಲದಲ್ಲಿ ಟೆಸ್ಟ್ ಗೆದ್ದ ಕಿವೀಸ್

# ಟೀಂ ಇಂಡಿಯಾ ಸೋಲಿಗೆ ಕಾರಣಗಳೇನು?

1988ರ ಬಳಿಕ ಟೀಂ ಇಂಡಿಯಾ ವಿರುದ್ಧ ಭಾರತದ ನೆಲದಲ್ಲಿ ಟೆಸ್ಟ್ ಗೆದ್ದು ಕಿವೀಸ್ ಪಡೆ ನಿಟ್ಟುಸಿರು ಬಿಟ್ಟಿದೆ. ಬರೋಬ್ಬರಿ 36 ವರ್ಷಗಳ ಬಳಿಕ ನ್ಯೂಜಿಲೆಂಡ್ ತಂಡ ಟೆಸ್ಟ್ ಪಂದ್ಯ ಗೆದ್ದು ಬೀಗಿದೆ.

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆತಿಥೇಯ ಭಾರತದ ವಿರುದ್ಧ ನಡೆದ ಮೊದಲ ಟೆಸ್ಟ್ ಪಂದ್ಯದಲ್ಲಿ 8 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ಶತಕ ಬಾರಿಸಿ ಮಿಂಚಿದ್ದ ರಚಿನ್ ರವೀಂದ್ರ ಅವರೇ ಎರಡನೇ ಇನ್ನಿಂಗ್ಸ್‌ನಲ್ಲಿ ವಿಲ್ ಯಂಗ್ ಅವರೊಂದಿಗೆ ನಿಂತು ತಂಡವನ್ನು ಗೆಲುವಿನ ದಡ ಸೇರಿಸಿದರು.

ಭಾನುವಾರ ಕೊನೆಯ ದಿನದಾಟದಲ್ಲಿ ಗೆಲುವಿಗೆ 107 ರನ್ ಗಳಿಸಿದ್ದ ಕಿವೀಸ್‌ಗೆ ಆರಂಭದಲ್ಲೇ ಟೀಂ ಇಂಡಿಯಾ ಆಘಾತ ನೀಡಿತ್ತು. ಬೌಲರ್‌ಗಳಿಗೆ ಪೂರಕವಾಗಿದ್ದ ವಾತಾವರಣದಲ್ಲಿ ಮೊದಲನೇ ಓವರ್ ನಲ್ಲೇ ವಿಕೆಟ್ ಪಡೆಯುವ ಮೂಲಕ ಜಸ್ಪ್ರೀತ್ ಬುಮ್ರಾ ಸಂತಸದ ಅಲೆ ಸೃಷ್ಟಿಸಿದ್ದರು. ಬಳಿಕ ವಿಕೆಟ್ ಬಿಟ್ಟುಕೊಡದ ರಚಿನ್ ಹಾಗೂ ವಿಲ್ ಯಂಗ್ ತಂಡವನ್ನು ಗೆಲುವಿನ ದಡ ಸೇರಿಸುವಲ್ಲಿ ಯಶಸ್ವಿಯಾದರು.

**ಭಾರತದ ಸೋಲಿಗೆ ಪ್ರಮುಖ ಕಾರಣಗಳೇನು?**

- ಸತತ ಮಳೆಯಿಂದ ಕೂಡಿದ್ದ ವಾತಾವರಣದಲ್ಲಿ



ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡು ನಾಯಕ ರೋಹಿತ್ ಶರ್ಮಾ ಯಡವಟ್ಟು ಮಾಡಿಕೊಂಡರು. ಮೊದಲನೇ ದಿನ ಮಳೆಯಿಂದಾಗಿ ಒಂದು ಎಸೆತವನ್ನೂ ಆಡಲಾಗಿರಲಿಲ್ಲ. ಹೀಗಾಗಿ ಪಿಚ್ ಬ್ಯಾಟಿಂಗ್‌ಗೆ ಪೂರಕವಾಗಿ ಇರಲಿಲ್ಲ. ಅಲ್ಲದೇ ವಿಲ್ ಒ ರೂರ್ಕಿ ಬೌಲಿಂಗ್ ಟೀಂ ಇಂಡಿಯಾ ಆಟಗಾರರಿಗೆ ಹೊಸದಾಗಿತ್ತು. ಪಿಚ್ ತೇವಾಂಶದಲ್ಲಿದ್ದ ಕಾರಣ ಚೆಂಡನ್ನು ಗುರುತಿಸುವುದು ಕಷ್ಟಸಾಧ್ಯವಾಗಿತ್ತು. ಹೀಗಾಗಿ ಭಾರತ 2ನೇ ದಿನದಾಟದಲ್ಲಿ 46 ರನ್‌ಗಳಿಗೆ ಆಲೌಟ್ ಆಯಿತು.
- ಭಾರತದ ಪ್ರಥಮ ಇನ್ನಿಂಗ್ಸ್ ನಲ್ಲಿ ವೇಗಿಗಳಾದ ಮ್ಯಾಟ್ ಹೆನ್ರಿ, ವಿಲ್ ಒ ರೂರ್ಕಿ ಮಾರಕ ಬೌಲಿಂಗ್ ನಿಂದಾಗಿ 46 ರನ್ ಗಳಿಗೆ ಆಲೌಟ್ ಆಯಿತು. ಇದೇ ಇಡೀ ಪಂದ್ಯದ ಫಲಿತಾಂಶಕ್ಕೆ ಕಾರಣವಾಯಿತು.
- ರಚಿನ್ ರವೀಂದ್ರ, ಅಮೋಘ ಶತಕವೂ ಭಾರತದ ಸೋಲಿಗೆ ಕಾರಣವಾಯಿತು. ಪಂದ್ಯದಲ್ಲಿ ಎಲ್ ಬಿಡಬ್ಲ್ಯೂ ಅಪೀಲ್ ಮಾಡಿದ ಹೊರತಾಗಿಯೂ ರಚಿನ್ ಅಫ್ಪೈರ್ಸ್‌ಕಾಲ್‌ನಿಂದ ಪಾರಾದರು. ಇದು ಟೀಂ ಇಂಡಿಯಾದ ಫಲಿತಾಂಶದ ಮೇಲೆ ಪ್ರಭಾವ ಬೀರಿತು.
- 3ನೇ ದಿನದಾಟದಲ್ಲಿ ರಚಿನ್ –ಸೌಥಿ ಜೊತೆಯಾಟವೂ ಭಾರತದ ಹಿನ್ನೆಡೆಗೆ ಕಾರಣವಾಯಿತು. ಭಾರತ ನ್ಯೂಜಿಲೆಂಡ್‌ನ 7 ವಿಕೆಟ್ ಗಳನ್ನು 233 ರನ್ ಗಳಿಗೆ ಕಬಳಿಸಿತ್ತು. ಆದರೆ ಅಪರೂಪಕ್ಕೆ ಬ್ಯಾಟ್ ಬೀಸುವ ಸೌಥಿ ಅವರು ರಚಿನ್ ಜೊತೆ ಇನ್ನಿಂಗ್ಸ್ ಬೆಳೆಸಿದ್ದರಿಂದ ನ್ಯೂಜಿಲೆಂಡ್ 400ರ ಗಡಿ ದಾಟುವಂತಾಯಿತು.
- 2ನೇ ಇನ್ನಿಂಗ್ಸ್‌ನಲ್ಲಿ ಆಡುವ ವೇಳೆ ಮಧ್ಯಮ ಕ್ರಮಾಂಕದ ಬ್ಯಾಟರ್‌ಗಳು ನಿರೀಕ್ಷೆಗೂ ಮೀರಿದ ಪ್ರದರ್ಶನ ನೀಡಿದರು. ಸರ್ಫ್ರಾಜ್ ಖಾನ್ ಮತ್ತು ರಿಷಬ್ ಪಂತ್ ಬಲ ತಂದುಕೊಟ್ಟಿದ್ದರು. ಆದರೆ ಕೆ.ಎಲ್ ರಾಹುಲ್, ರವೀಂದ್ರ ಜಡೇಜಾ ಮತ್ತು ಆರ್.ಅಶ್ವಿನ್ ಸಣ್ಣ ಮೊತ್ತಕ್ಕೆ ಔಟಾಗಿ ನಿರಾಸೆ ಮೂಡಿಸಿದರು.
- 5ನೇ ದಿನದಲ್ಲಿ ಕಿವೀಸ್‌ಗೆ ಅಲ್ಪಮೊತ್ತದ ಗುರಿ ನೀಡಿದ್ದರಿಂದ ಭಾರತ ಸುಲಭ ತುತ್ತಾಯಿತು.

## ಚನ್ನಪಟ್ಟಣ ಬೈ ಎಲೆಕ್ಷನ್

# ಮೈತ್ರಿ ಅಭ್ಯರ್ಥಿ ಫೈನಲ್, ಬಿಜೆಪಿಯ ಯೋಗೇಶ್ವರ್‌ಗೆ ಜೆಡಿಎಸ್ ಬಿಗ್ ಆಫರ್

**ಬೆಂಗಳೂರು:** ಚನ್ನಪಟ್ಟಣ ಕ್ಷೇತ್ರದ ಅಭ್ಯರ್ಥಿ ಆಯ್ಕೆ ಬಗ್ಗೆ ಜೆಡಿಎಸ್ ಹಾಗೂ ಬಿಜೆಪಿ ನಡುವೆ ಕಗ್ಗಂಟಾಗಿದೆ.. ಸಿ.ಪಿ.ಯೋಗೇಶ್ವರ್ ಟಿಕೆಟ್ ಗಾಗಿ ಪಟ್ಟು ಹಿಡಿದಿದ್ದು, ಜೆಡಿಎಸ್ ಗೆ ನುಂಗಲಾರದ ತುತ್ತಾಗಿದೆ.. ಜೆಡಿಎಸ್ ನಿಂದ ನಿಖಿಲ್ ಕುಮಾರಸ್ವಾಮಿ ಸ್ಪರ್ಧೆ ಮಾತು ಕೇಳಿ ಬರುತ್ತಿದೆಯಾದರೂ, ಸೈನಿಕನ ಹಠವೇ ಮೇಲುಗೈ ಸಾಧಿಸುವ ಸಾಧ್ಯತೆ ಇದೆ.. ಈಗಾಗಲೇ ಹಲವು ಸಭೆ ನಡೆದಿದ್ದು, ಜೆಡಿಎಸ್–ಬಿಜೆಪಿ ಸಮನ್ವಯ ಸಭೆಯಲ್ಲಿ ಅಂತಿಮ ನಿರ್ಧಾರ ಪ್ರಕಟವಾಗಲಿದೆ. ಜೆಡಿಎಸ್ ಚಿನ್ಹೆಯಡಿ ಯೋಗೇಶ್ವರ್ ಸ್ಪರ್ಧಿಸುವುದು ಬಹುತೇಕ ಖಚಿತ ಎಂಬ ಮಾಹಿತಿ ಮೂಲಗಳಿಂದ ದೊರಕಿದೆ..

ಇದಕ್ಕೆ ಪೂರಕವಾಗಿ ನಿಖಿಲ್ ಕುಮಾರಸ್ವಾಮಿ ತ್ಯಾಗದ ಮಾತನಾಡಿದ್ದಾರೆ.. ಇನ್ನು, ಪ್ರೀತಿ, ವಿಶ್ವಾಸದಿಂದ ಎಲೆಕ್ಷನ್ ನಡೆಯಬೇಕು ಅಂತ ಹೆಚ್ ಡಿಕೆ ಹೇಳಿದ್ರೆ, ಯೋಗೇಶ್ವರ್ ಗೆ ಅನ್ಯಾಯ ಆಗ್ಬಾರದು ಅಂತ ಸೈನಿಕನ ಪರ ವಿಜಯೇಂದ್ರ ಬ್ಯಾಟಿಂಗ್ ಮಾಡಿದ್ದಾರೆ.

**ಯೋಗೇಶ್ವರ್ ಕಣಕ್ಕಿಳಿಸಲು ದಳಪತಿಗಳ ಆಫರ್:** ಈಗಾಗಲೇ ಬಿಜೆಪಿ ಶಿಗ್ಗಾಂವಿ ಮತ್ತು ಸಂಡೂರು ಕ್ಷೇತ್ರಕ್ಕೆ ಅಭ್ಯರ್ಥಿ ಘೋಷಣೆ ಮಾಡಿದೆ. ಹೀಗಾಗಿ ಇಂದು ಸಂಜೆಯೊಳಗೆ ಚನ್ನಪಟ್ಟಣ ಅಭ್ಯರ್ಥಿ ಘೋಷಣೆ ಮಾಡುವ ಸಾಧ್ಯತೆಗಳು ಹೆಚ್ಚಿವೆ.



ಚನ್ನಪಟ್ಟಣದಿಂದ ಬಿಜೆಪಿ ಅಭ್ಯರ್ಥಿಯಾಗಿ ಸಿಪಿವೈ ಸ್ಪರ್ಧೆ ಮಾಡಿದರೆ ಮೂರೂ ಕ್ಷೇತ್ರಗಳಲ್ಲಿ ಬಿಜೆಪಿ ಸ್ಪರ್ಧೆ ಮಾಡಿದಂತೆ ಆಗುತ್ತದೆ . ಇದರಿಂದ ಜೆಡಿಎಸ್ ಕಾರ್ಯಕರ್ತರಲ್ಲಿ ಅಸಮಾಧಾನ ಉಂಟಾಗುತ್ತದೆ. ಹೀಗಾಗಿ ಮೈತ್ರಿ ಧರ್ಮ ಪಾಲನೆ ಮಾಡಲು ಜೆಡಿಎಸ್ ಚಿಹ್ನೆಯಿಂದ ಸಿಪಿ ಯೋಗೇಶ್ವರ್ ಸ್ಪರ್ಧೆ ಸಾಧ್ಯತೆ ಇದೆ. ನಿನ್ನೆ ನೆಡೆದ ಸಮನ್ವಯ ಸಭೆಯಲ್ಲೂ ಕೂಡ ಸಿಪಿ ಯೋಗೇಶ್ವರ್ ಜೆಡಿಎಸ್ ನಿಂದ ಸ್ಪರ್ಧೆ ಮಾಡುವ ಬಗ್ಗೆ ಹೆಚ್ಚಿನ ಚರ್ಚೆಯಾಗಿದೆ. ಹೀಗಾಗಿ ಜೆಡಿಎಸ್ ಅಭ್ಯರ್ಥಿಯಾಗಿ ಸಿಪಿ ಯೋಗೇಶ್ವರ್ ಸ್ಪರ್ಧೆ ಸಾಧ್ಯತೆ ಹೆಚ್ಚಿವೆ.

ನಿನ್ನೆ ರಾತ್ರಿ ಬೆಂಗಳೂರಿನಲ್ಲಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ್ ಮತ್ತು ಬಿ.ವೈ. ವಿಜಯೇಂದ್ರ ಚರ್ಚೆ ನಡೆಸಿದ್ದಾರೆ. ಸಭೆಯಲ್ಲಿ ಅಭ್ಯರ್ಥಿ ವಿಚಾರವಾಗಿ ತಾವು ಯಾವುದೇ ಡಿಮ್ಯಾಂಡ್ ಇಡುವುದಿಲ್ಲ ಎಂದು ಕುಮಾರಸ್ವಾಮಿ ಸ್ಪಷ್ಟಪಡಿಸಿದ್ದರೆ. ನಿಮ್ಮ ಕ್ಷೇತ್ರವಾಗಿರುವ ಕಾರಣ ನೀವೇ ಚರ್ಚಿಸಿ ತೀರ್ಮಾನ ಮಾಡಿ ಎಂದು ವಿಜಯೇಂದ್ರ ಮತ್ತು ಅಶೋಕ್ ಹೇಳಿದ್ದಾರೆ.

ಬಿಜೆಪಿ ಹೈಕಮಾಂಡ್ ಸರ್ವೇ ಬೇಕಾದರೂ ನಡೆಸಲಿ ನಂತರ ತೀರ್ಮಾನ ಮಾಡಲಿ ಎಂದು ಸಭೆಯಲ್ಲಿ ಕುಮಾರಸ್ವಾಮಿ ಬಿಜೆಪಿ ನಾಯಕರಿಗೆ ಹೇಳಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಚನ್ನಪಟ್ಟಣ ಕ್ಷೇತ್ರ ಬಾಕಿ ಇರಿಸಿರುವ ಕಾರಣ ಜೆಡಿಎಸ್ ಅಭ್ಯರ್ಥಿ ಸ್ಪರ್ಧೆ ಬಹುತೇಕ ಖಚಿತವಾಗಿದೆ.

ಇನ್ನು, ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ಕುರಿತು, ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಕ್ಲೋಸ್ಡ್ ಡೋರ್ ಸಭೆ ನಡೆಸಿದ್ದ, ಈ ಸಭೆಯಲ್ಲಿ ಡಿಕೆ ಸುರೇಶ್ ರತ್ತ ಮುಖಂಡರು ಒಲವು ತೋರಿದ್ದಾರೆ. ಸಭೆ ಬಳಿಕ ನಗುತ್ತಲೇ ಡಿಕೆಶಿ ಹೊರಬಂದು ಮಾಧ್ಯಮಗಳ ಜೊತೆ ಮಾತನಾಡಿದ ಡಿಕೆಶಿ, ಜೆಡಿಎಸ್ ನವರು ಹೆದರಿಕೊಂಡು ಶರಣಾಗಿದ್ದಾರೆ ಎಂದು ಚನ್ನಪಟ್ಟಣದಲ್ಲಿ ಯೋಗೇಶ್ವರ್ ಸ್ಪರ್ಧೆ ಬಗ್ಗೆ ಸುಳಿವು ಕೊಟ್ಟರು. ಅಷ್ಟೇ ಅಲ್ಲ ಚನ್ನಪಟ್ಟಣದಲ್ಲಿ ಡಿಕೆ ಸುರೇಶ್ ಅವರನ್ನೇ ಅಭ್ಯರ್ಥಿಯನ್ನಾಗಿಸಬೇಕು ಎನ್ನುವ ಪ್ರಶ್ನೆಗೆ ಉತ್ತರಿಸಿದ ಡಿಕೆ, ನಾವು ಯಾರನ್ನ ಅಭ್ಯರ್ಥಿ ಎಂದು ಹೇಳುತ್ತೇವೋ ಅವರೇ ಫೈನಲ್ ಎಂದಿದ್ದಾರೆ.

# ಬಸವಣ್ಣನ ಲಿಂಗಾಯತ ಧರ್ಮ ಸ್ವತಂತ್ರ ಧರ್ಮ ಆಗುವ ಕಾಲ ಬಂದೇ ಬರುತ್ತೆ

**ಬೀದರ್:** ಬಸವಣ್ಣನವರ ಲಿಂಗಾಯತ ಧರ್ಮ ಸ್ವತಂತ್ರ ಧರ್ಮ ಆಗುವ ಕಾಲ ಬಂದೇ ಬರುತ್ತೆ ಎಂದು ಕಲ್ಯಾಣ ಪರ್ವದಲ್ಲಿ ಬಸವಲಿಂಗ ಪಟ್ಟದೇವರು ಸ್ವಾಮೀಜಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬವಣ್ಣನ ಕರ್ಮಭೂಮಿ ಬಸವಕಲ್ಯಾಣದಲ್ಲಿ ಮತ್ತೆ ಲಿಂಗಾಯತ ಸ್ವತಂತ್ರ ಧರ್ಮದ ಕೂಗು ಮೊಳಗಿದೆ. ಬಸವಕಲ್ಯಾಣದ ಕಲ್ಯಾಣ ಪರ್ವ ವೇದಿಕೆ ಕಾರ್ಯಕ್ರಮದಲ್ಲಿ ಪಟ್ಟದೇವರು ಸ್ವಾಮೀಜಿ ಸ್ವತಂತ್ರ ಧರ್ಮದ ಕೂಗು ಎತ್ತಿದ್ದಾರೆ. ಬಸವಣ್ಣನವರ ಲಿಂಗಾಯತ ಧರ್ಮ ಸ್ವತಂತ್ರ ಧರ್ಮ ಆಗಬಾರದು ಅಂತ ಅನೇಕ ಶಕ್ತಿಗಳು ವಿರೋಧ ಮಾಡುತ್ತಿವೆ. ಆದ್ರೆ ಲಿಂಗಾಯತ ಧರ್ಮ ಸ್ವತಂತ್ರ ಧರ್ಮವಾಗುವ ಕಾಲ ಬಂದೇ ಬರುತ್ತೆ ಎಂದು ಸ್ವಾಮೀಜಿ ಹೇಳಿದ್ದಾರೆ.

200 ಸ್ವಾಮೀಜಿಗಳ ನಿಯೋಗ ಸಿಎಂ



ಸಿದ್ದರಾಮಯ್ಯ ಅವರನ್ನ ಭೇಟಿ ಮಾಡಿ ಮನವಿ ಸಲ್ಲಿಸಿದ ಬಳಿಕ ಸರ್ಕಾರ ಕೆಲವೇ ದಿನಗಳಲ್ಲಿ ಬಸವಣ್ಣರನ್ನ ನಾಯಕ ಎಂದು ಘೋಷಣೆ ಮಾಡಿತು. ಅದೇ ರೀತಿ ಲಿಂಗಾಯತ ಸ್ವತಂತ್ರ ಧರ್ಮ ಆಗುವ ಕಾಲ ಬರುತ್ತೆ. ನಾವೆಲ್ಲಾ ನಿರಾಸೆಯಾಗದೇ ಸ್ವತಂತ್ರ ಧರ್ಮಕ್ಕೆ ಹೋರಾಡಬೇಕು ಜಿಲ್ಲೆ, ತಾಲೂಕು, ಗ್ರಾಮಗಳಲ್ಲಿ ಲಿಂಗಾಯತ ಜಾಗೃತಿ ಸಮಾವೇಶ ಮಾಡಬೇಕು ಎಂದು ಕರೆ ನೀಡಿದ್ದಾರೆ.

12ನೇ ಶತಮಾನದಲ್ಲೇ ಅನುಭವ ಮಂಟಪದಲ್ಲಿ ಲಿಂಗಾಯತ ಸ್ವತಂತ್ರ ಧರ್ಮಕ್ಕೆ ಮುದ್ರೆ ಬಿದ್ದಿದೆ. ಇನ್ನು ಸರ್ಕಾರದಲ್ಲಿ ಸ್ವತಂತ್ರ ಧರ್ಮದ ಮುದ್ರೆ ಬೀಳಬೇಕಿದೆ. ಲಿಂಗಾಯತ ಸ್ವತಂತ್ರ ಧರ್ಮ ಅಂತ ಘೋಷಣೆ ಆದ್ರೆ ನಮಗೆ, ನಮ್ಮ ಪರಿವಾರಗಳಿಗೆ ಅನುಕೂಲ ಆಗಲಿದೆ. ಅದಕ್ಕಾಗಿ ನಾವೆಲ್ಲರೂ ಒಗ್ಗಟ್ಟಿನಿಂದ ಹೋರಾಡೋಣ, ಸ್ವತಂತ್ರ ಧರ್ಮ ಹೋರಾಟಕ್ಕೆ ಸ್ವಾಮಿಜೀ ಕರೆ ನೀಡಿದ್ದಾರೆ.

ಬಸವಣ್ಣನವರ ಕಾಲದಿಂದ ಇಲ್ಲಿಯವರೆಗೂ ಲಿಂಗಾಯತ ಧರ್ಮಕ್ಕೆ ವಿರೋಧ ಮಾಡುವವರು ಇದ್ದೇ ಇದ್ದಾರೆ. ವಿರೋಧದ ಮಧ್ಯೆಯೂ 21ನೇ ಶತಮಾನದವರೆಗೆ ಜಾಗೃತ ಮಾಡುತ್ತಾ ಬಂದಿದ್ದು ಲಿಂಗಾಯತ ಸ್ವತಂತ್ರ ಧರ್ಮ ಮುದ್ರೆ ಪಡೆದೇ ತೀರೋಣ ಎಂದು ಭಾಲ್ಕಿ ಹಿರೇಮಠದ ಬಸವಲಿಂಗ ಪಟ್ಟದ್ದೇವರು ಹೇಳಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com